ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 11
19-6-2025 ಗುರುವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 11

## ಎಸ್ ಎಸ್ ಕಪ್ – 2025 ಜಿಲ್ಲಾ ಮಟ್ಟದ ಬಾಸ್ಕೆಟ್ ಬಾಲ್ ಪಂದ್ಯಾವಳಿ

**ದಾವಣಗೆರೆ:** ದಾವಣಗೆರೆ ಬಾಸ್ಕೆಟ್ ಬಾಲ್ ಕ್ಲಬ್ ಹಾಗೂ ಎಸ್ ಎಸ್ ಎಂ ಬಾಸ್ಕೆಟ್ ಬಾಲ್ ಕ್ಲಬ್ ಇವರ ಸಂಯುಕ್ತ ಆಶ್ರಯದಲ್ಲಿ ಶಾಸಕ ಡಾ. ಶಾಮನೂರು ಶಿವಶಂಕರಪ್ಪ ಅವರ ಹುಟ್ಟುಹಬ್ಬದ ಅಂಗವಾಗಿ ಎರಡು ದಿನಗಳ ಕಾಲ ನಡೆದ ಎಸ್ ಎಸ್ ಕಪ್ – 2025 ಜಿಲ್ಲಾ ಮಟ್ಟದ 3ಥ3 ಬಾಸ್ಕೆಟ್ ಬಾಲ್ ಪಂದ್ಯಾವಳಿಗಳಲ್ಲಿ ಅಂತಿಮ ಪುರುಷರ ವಿಭಾಗದಲ್ಲಿ ಜಿ ಎಂ ಯೂನಿವರ್ಸಿಟಿ ಪ್ರಥಮ ಸ್ಥಾನ, ದಾವಣಗೆರೆ ಬಾಸ್ಕೆಟ್ ಬಾಲ್ ಕ್ಲಬ್ ದ್ವಿತೀಯ ಹಾಗೂ ಜೆ.ಜೆ.ಎಂ ಮೆಡಿಕಲ್ ಕಾಲೇಜ್ ತೃತೀಯ ಸ್ಥಾನ ಪಡೆದಿವೆ. ಮಹಿಳೆಯರ ವಿಭಾಗದಲ್ಲಿ ದಾವಣಗೆರೆ ಬಾಸ್ಕೆಟ್ ಬಾಲ್ ಕ್ಲಬ್ ಪ್ರಥಮ, ಜಿ.ಎಂ ಯೂನಿವರ್ಸಿಟಿ ಟೀಮ್ 'ಎ' ದ್ವಿತೀಯ ಹಾಗೂ ಜಿ ಎಂ ಯುನಿವರ್ಸಿಟಿ ಟೀಮ್ 'ಬಿ' ತೃತೀಯ ಸ್ಥಾನ ಪಡೆದಿವೆ. ಇದರ ಜೊತೆಗೆ 14 ಮತ್ತು 16 ವಯೋಮಿತಿ ಹಾಗೂ 12 ವಯೋಮಿತಿಯ ಬಾಲಕ ಮತ್ತು ಬಾಲಕಿಯರಿಗೆ ಪಂದ್ಯಾವಳಿಗಳನ್ನು ನಡೆಸಲಾಯಿತು. ಬಹುಮಾನ ಕಾರ್ಯಕ್ರಮದಲ್ಲಿ ಗೌರವಾಧ್ಯಕ್ಷ ಸಿ. ಶ್ರೀರಾಮಮೂರ್ತಿ, ಅಧ್ಯಕ್ಷ ಆರ್. ಕಿರಣ್ ಕುಮಾರ್, ಉಪಾಧ್ಯಕ್ಷ ವಿಜಯ್ ಕುಮಾರ್ ಗೌಡ, ಕಾರ್ಯದರ್ಶಿ ಆರ್. ವೀರೇಶ್, ಸಹ ಕಾರ್ಯದರ್ಶಿ ಉದಯಶಂಕರ್ ಸ್ವಾಮಿ ಮತ್ತು ಖಜಾಂಚಿ ಎಸ್ ಎಲ್ ಪ್ರಸನ್ನ, ತರಬೇತಿದಾರರು ಆರ್ ದರ್ಶನ್, ಅಧ್ಯಕ್ಷರು ಗಡಿಗುಡಾಳ್ ಮಂಜುನಾಥ್, ಉಪಾಧ್ಯಕ್ಷರು ಸಂಕೇತ್ ಮತ್ತು ಸಿದ್ದಾರ್ಥ್, ಕಾರ್ಯದರ್ಶಿ ಪ್ರವೀಣ್ ಕುಮಾರ್ ಕೆ ಎಂ. ಸಹ ಕಾರ್ಯದರ್ಶಿ ಜೆ ಬಿ ಶ್ರೀಧರ್ ಮತ್ತು ಎಸ್ ಎಸ್ ಎಂ ಬಾಸ್ಕೆಟ್ ಬಾಲ್ ಕ್ಲಬ್ ಎಲ್ಲ ಸದಸ್ಯರು ಭಾಗಿಯಾಗಿದ್ದರು.

## ಬಂಜಾರ ವಿದ್ಯಾರ್ಥಿ, ನಿವೃತ್ತ ನೌಕರರಿಗೆ ಪುರಸ್ಕಾರಕ್ಕೆ ಆಹ್ವಾನ

**ದಾವಣಗೆರೆ:** ದಾವಣಗೆರೆ ಜಿಲ್ಲಾ ಬಂಜಾರ (ಲಂಬಾಣಿ) ಸೇವಾ ಸಂಘದ ಆಶ್ರಯದಲ್ಲಿ 2024-25ನೇ ಸಾಲಿನಲ್ಲಿ ದಾವಣಗೆರೆ ಜಿಲ್ಲೆಯ ಪರಿಶಿಷ್ಟ ಜಾತಿಗೆ ಸೇರಿದ ಬಂಜಾರ ಜನಾಂಗದ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಎಸ್ಸೆಸ್ಸೆಲ್ಸಿಯಲ್ಲಿ ಶೇ.85 ಹಾಗೂ ದ್ವಿತೀಯ ಪಿಯುಸಿಯಲ್ಲಿ ಶೇ.80 ಮೇಲ್ಪಟ್ಟು ಅಂಕ ಪಡೆದು ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ 'ಪ್ರತಿಭಾ ಪುರಸ್ಕಾರ' ಮತ್ತು 2024-25ನೇ ಸಾಲಿನಲ್ಲಿ ನಿವೃತ್ತಿಯಾದ ಬಂಜಾರ ಜನಾಂಗದ ನೌಕರರಿಗೆ ಸನ್ಮಾನ ಸಮಾರಂಭ ಏರ್ಪಡಸಲಾಗಿದೆ.

ಎಸ್ಸೆಸ್ಸೆಲ್ಸಿ ಮತ್ತು ಪಿಯೂಸಿ ಬಂಜಾರ ಜನಾಂಗದ ವಿದ್ಯಾರ್ಥಿಗಳು ತಮ್ಮ ಅಂಕಪಟ್ಟಿಯ ಪ್ರತಿ ಮತ್ತು ಆಧಾರ ಕಾರ್ಡ್ ಪ್ರತಿಯನ್ನು ಹಾಗೂ ಬಂಜಾರ ಜನಾಂಗದ ನೌಕರರು 2024-25ನೇ ಸಾಲಿನಲ್ಲಿ ನಿವೃತ್ತಿ ಹೊಂದಿದವರು ಸಹ ತಮ್ಮ ಇಲಾಖೆಯ ವಿವರ ಮತ್ತು ಆಧಾರ ಕಾರ್ಡ್ ಪ್ರತಿಯನ್ನು ಜೂನ್ 27ರೊಳಗಾಗಿ ಮೊ: 9071280369, 9071280370 ಗೆ ವಾಟ್ಸಪ್ನಲ್ಲಿ ಮಾಹಿತಿ ನೀಡುವಂತೆ ಅಧ್ಯಕ್ಷ ಎಸ್. ನಂಜಾನಾಯ್ಕ್ ಕಬ್ಬಳ ಕೋರಿದ್ದಾರೆ.

## ನಾಳೆ ಹೊಸ ಕಾರಿನ ಅನಾವರಣ

ದಾವಣಗೆರೆ: ಹೊಸದಾಗಿ ಬಂದಿರುವ ಅಲ್ಟ್ರೋಜ್ ಕಾರಿನ ಅನಾವರಣ ಸಮಾರಂಭವನ್ನು ಜೂನ್.20 ರಂದು ಸಂಜೆ 5 ಗಂಟೆಗೆ ಆವರಗೆರೆಯ ಆದಿಶಕ್ತಿ ಕಾರ್ಸ್ ಪ್ರೈವೇಟ್ ಲಿಮಿಟೆಡ್ ನಲ್ಲಿ ಏರ್ಪಡಿಸಲಾಗಿದೆ ಎಂದು ಗ್ರಾಹಕ ವ್ಯವಸ್ಥಾಪಕರು ತಿಳಿಸಿದ್ದಾರೆ.

# ಪಾಕಿಸ್ಥಾನ ಯುದ್ಧ ನಿಲ್ಲಿಸಿದ್ದು ನಾನೇ.. ಮೋದಿ ಅದ್ಭುತ ವ್ಯಕ್ತಿ': ಟ್ರಂಪ್

**ವಾಷಿಂಗ್ಟನ್:** ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಬಳಿಕ 'ಭಾರತ ಮತ್ತು ಪಾಕಿಸ್ತಾನ ನಡುವೆ ಉಲ್ಬಣಗೊಂಡಿದ್ದ ಯುದ್ಧವನ್ನು ಸ್ಥಗಿತ ಮಾಡಿದ್ದು ನಾನೇ' ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತೆ ಹೇಳಿದ್ದಾರೆ.

ಭಾರತ ಮತ್ತು ಪಾಕಿಸ್ತಾನ ನಡುವಿನ ಯುದ್ಧವನ್ನು ನಿಲ್ಲಿಸಿದ ಕೀರ್ತಿಯನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತೊಮ್ಮೆ ಪ್ರತಿಪಾದಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಭಾರತ ಮತ್ತು ಪಾಕಿಸ್ತಾನ ನಡುವಿ ವಿಷಯದಲ್ಲಿ ಯಾವುದೇ ಮೂರನೇ ವ್ಯಕ್ತಿಯ ಮಧ್ಯಸ್ಥಿಕೆಯನ್ನು ಭಾರತ ಎಂದಿಗೂ ಸ್ವೀಕರಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಆದಾಗ್ಯೂ ಮತ್ತೆ ಭಾರತ ಪಾಕಿಸ್ತಾನ ವಿಚಾರವಾಗಿ ಡೊನಾಲ್ಡ್ ಟ್ರಂಪ್ ಮತ್ತೆ ಮಾತನಾಡಿದ್ದು, ಉಭಯ ದೇಶಗಳ ನಡುವಿನ ಯುದ್ಧ ನಿಲ್ಲಿಸಿದ್ದು ನಾನಾ ಎಂದು ಹೇಳಿದ್ದಾರೆ.

ಶ್ವೇತಭವನದಲ್ಲಿ ಸುದ್ದಿಗಾರೊಂದಿಗೆ ಮಾತನಾಡಿದ ಡೊನಾಲ್ಡ್ ಟ್ರಂಪ್, 'ನಾನು ಪಾಕಿಸ್ತಾನ ಮತ್ತು ಭಾರತದ ನಡುವಿನ ಯುದ್ಧವನ್ನು ನಿಲ್ಲಿಸಿದೆ. ನಾನು ಪಾಕಿಸ್ತಾನವನ್ನು ಪ್ರೀತಿಸುತ್ತೇನೆ. ಮೋದಿ ಒಬ್ಬ




ಅದ್ಭುತ ವ್ಯಕ್ತಿ. ನಾನು ನಿನ್ನೆ ರಾತ್ರಿ ಅವರೊಂದಿಗೆ ಮಾತನಾಡಿದೆ" ಎಂದು ಹೇಳಿದ್ದಾರೆ.

ಡೊನಾಲ್ಡ್ ಟ್ರಂಪ್ ಭಾರತದೊಂದಿಗೆ ವ್ಯಾಪಾರ ಒಪ್ಪಂದದ ಯೋಜನೆಗಳನ್ನು ಉಲ್ಲೇಖಿಸುತ್ತಾ, "ನಾವು ಭಾರತದ ಪ್ರಧಾನಿ ಮೋದಿಯೊಂದಿಗೆ ವ್ಯಾಪಾರ ಒಪ್ಪಂದವನ್ನು ಮಾಡಿಕೊಳ್ಳಲಿದ್ದೇವೆ. ಆದರೆ ನಾನು ಪಾಕಿಸ್ತಾನ ಮತ್ತು ಭಾರತದ ನಡುವಿನ ಯುದ್ಧವನ್ನು ನಿಲ್ಲಿಸಿದೆ ಎಂದರು.

ಇದೇ ವೇಳೆ ಭಾರತದ ಪ್ರಧಾನಿ ನರೇಂದ್ರ ಮೋದಿ ಮತ್ತು ಪಾಕಿಸ್ತಾನದ ಸೇನಾ ಮುಖ್ಯಸ್ಥ ಜನರಲ್ ಅಸಿಮ್ ಮುನೀರ್ ಇಬ್ಬರನ್ನೂ ಶ್ಲಾಘಿಸಿದ ಟ್ರಂಪ್, "ಈ ವ್ಯಕ್ತಿ (ಮುನೀರ್) ಪಾಕಿಸ್ತಾನದ ಕಡೆಯಿಂದ ಯುದ್ಧವನ್ನು ನಿಲ್ಲಿಸುವಲ್ಲಿ ಅತ್ಯಂತ ಪ್ರಭಾವಶಾಲಿಯಾಗಿದ್ದರು, ಇನ್ನೊಂದು ಕಡೆಯಿಂದ ಮೋದಿ. ಅವರು ಅದನ್ನು ಮಾಡಲು ಹೊರಟಿದ್ದರು ಮತ್ತು ಅವರಿಬ್ಬರೂ ಪರಮಾಣು ಸಹಿತ ರಾಷ್ಟ್ರಗಳು... ನಾನು ಎರಡು ಪ್ರಮುಖ ಪರಮಾಣು ರಾಷ್ಟ್ರಗಳ ನಡುವಿನ ಯುದ್ಧವನ್ನು ನಿಲ್ಲಿಸಿದೆ. ಆದರೆ ಅದರ ಬಗ್ಗೆ ಒಂದು ಕಥೆಯೂ ಬರೆಯಲ್ಪಟ್ಟಿಲ್ಲ ಎಂದು ನಾನು ಭಾವಿಸುತ್ತೇನೆ" ಎಂದು ಹೇಳಿದರು.

**ಮೂರನೇ ವ್ಯಕ್ತಿ ಹಸ್ತಕ್ಷೇಪ ಸಹಿಸಲ್ಲ: ಟ್ರಂಪ್ ಗೆ ಮೋದಿ ಸ್ಪಷ್ಟ ಸಂದೇಶ :** ಇನ್ನು ಇದಕ್ಕೂ ಮೊದಲು, ಪಾಕಿಸ್ತಾನಕ್ಕೆ ಸಂಬಂಧಿಸಿದ ವಿಷಯಗಳಲ್ಲಿ ಭಾರತ ಯಾವುದೇ ಮಧ್ಯಸ್ಥಿಕೆಯನ್ನು ಎಂದಿಗೂ ಒಪ್ಪಿಕೊಂಡಿಲ್ಲ ಮತ್ತು ಎಂದಿಗೂ ಸ್ವೀಕರಿಸುವುದಿಲ್ಲ ಎಂದು ಪ್ರಧಾನಿ ಮೋದಿ ಅಧ್ಯಕ್ಷ ಟ್ರಂಪ್‌ಗೆ ಸ್ಪಷ್ಟಪಡಿಸಿದ್ದರು. ಅಲ್ಲದೆ ಅಂತಹ ಮಧ್ಯಸ್ಥಿಕೆಗಳಿಗೆ ಭಾರತ ಎಂದಿಗೂ ಒಪ್ಪಿಕೊಂಡಿಲ್ಲ ಎಂದು ಅವರು ಪುನರುಚ್ಚರಿಸಿದರು. ಮೋದಿ ಅವರೊಂದಿಗಿನ 35 ನಿಮಿಷಗಳ ಫೋನ್ ಸಂಭಾಷಣೆಯ ಕೆಲವೇ ಗಂಟೆಗಳ ನಂತರ ಟ್ರಂಪ್ ಅವರ ಹೇಳಿಕೆ ಬಂದಿವೆ.

ಆ ಸಮಯದಲ್ಲಿ ಮೇ ತಿಂಗಳಲ್ಲಿ ಭಾರತ ಮತ್ತು ಪಾಕಿಸ್ತಾನ ನಡುವಿನ ಮಿಲಿಟರಿ ಕಾರ್ಯಾಚರಣೆಗಳನ್ನು ನಿಲ್ಲಿಸುವ ನಿರ್ಧಾರವನ್ನು ಎರಡು ಸೇನೆಗಳ ನಡುವೆ ನೇರವಾಗಿ ತೆಗೆದುಕೊಳ್ಳಲಾಗಿದೆ ಎಂದು ಭಾರತೀಯ ಪ್ರಧಾನಿ ಸ್ಪಷ್ಟಪಡಿಸಿದರು.

ಇದೇ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗಿನ ದೂರವಾಣಿ ಕರೆ ಕುರಿತು ಮಾತನಾಡಿದ ಭಾರತದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ, 'ಕೆನಡಾದಿಂದ ಹಿಂದಿರುಗಿದ ನಂತರ ಮೋದಿ ಅಮೆರಿಕಕ್ಕೆ ಬರಬಹುದೇ ಎಂದು ಟ್ರಂಪ್ ಕೇಳಿದರು. ಆದರೆ ಪೂರ್ವ ನಿಯೋಜಿತ ಕಾರ್ಯಕ್ರಮಗಳಿಂದಾಗಿ ಪ್ರಧಾನಿ ಮೋದಿ ಬರಲು ಸಾಧ್ಯವಿಲ್ಲ. ಆದರೆ ಇಬ್ಬರೂ ನಾಯಕರು ಶೀಘ್ರದಲ್ಲೇ ಭೇಟಿಯಾಗಲು ಒಪ್ಪಿಕೊಂಡರು ಎಂದು ಹೇಳಿದರು.

"ಭಾರತ ಎಂದಿಗೂ ಮಧ್ಯಸ್ಥಿಕೆಯನ್ನು ಒಪ್ಪಿಕೊಂಡಿಲ್ಲ, ಸ್ವೀಕರಿಸುವುದಿಲ್ಲ ಮತ್ತು ಎಂದಿಗೂ ಮಾಡುವುದಿಲ್ಲ" ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಮೋದಿ ಹೇಳಿಕೆ ಉಲ್ಲೇಖಿಸಿ ವರದಿಗಾರರಿಗೆ ತಿಳಿಸಿದರು.

# ಗುಜರಾತ್ ಹತ್ಯಾಕಾಂಡದಲ್ಲಿ 2 ಸಾವಿರ ಅಮಾಯಕರು ಸತ್ತರು, ಮೋದಿಯೇಕೆ ರಾಜೀನಾಮೆ ನೀಡಲಿಲ್ಲ

### ಬಿಜೆಪಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನೆ

**ಬೆಂಗಳೂರು:** ಚಿನ್ನಸ್ವಾಮಿ ಸ್ಟೇಡಿಯಂ ಬಳಿ ನಡೆದಿದ್ದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ನಮ್ಮ ರಾಜೀನಾಮೆ ಕೇಳುವ ಮೊದಲು ಇಂತಹದ್ದೇ ಅವಘಡಗಳು ನಡೆದಿದ್ದ ಸಂದರ್ಭದಲ್ಲಿ ರಾಜೀನಾಮೆ ನೀಡಿದ್ದ ನಿಮ್ಮ ನಾಯಕರ ಪಟ್ಟಿಯನ್ನು ಬಿಡುಗಡೆ ಮಾಡಿ ಎಂದು ಬಿಜೆಪಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳವಾರ ತಿರುಗೇಟು ನೀಡಿದ್ದಾರೆ.

ಬೆಂಗಳೂರು ಕಾಲ್ತುಳಿತ ಘಟನೆಗೆ ತೀವ್ರ ಖಂಡನೆ ವ್ಯಕ್ತಪಡಿಸಿರುವ ರಾಜ್ಯ ಬಿಜೆಪಿ, ನಗರದ ಫ್ರೀಡಂ ಪಾರ್ಕ್ ನಲ್ಲಿ ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸುತ್ತಿದೆ.

ಈ ಹಿನ್ನೆಲೆಯಲ್ಲಿ ಪ್ರತಿಕ್ರಿಯೆ ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಚಿನ್ನಸ್ವಾಮಿ ಸ್ಟೇಡಿಯಂ ಬಳಿ ನಡೆದಿದ್ದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ನಮ್ಮ ರಾಜೀನಾಮೆ ಕೇಳುವ ಮೊದಲು ಇಂತಹದ್ದೇ ಅವಘಡಗಳು ನಡೆದಿದ್ದ ಸಂದರ್ಭದಲ್ಲಿ ರಾಜೀನಾಮೆ ನೀಡಿದ್ದ ಬಿಜೆಪಿ ನಾಯಕರ ಪಟ್ಟಿಯನ್ನು ಬಿಡುಗ-'ಡೆ ಮಾಡುವಂತೆ ರಾಜ್ಯದ ಬಿಜೆಪಿ ನಾಯಕರಿಗೆ ಮನವಿ ಮಾಡುತ್ತೇನೆಂದು ಹೇಳಿದ್ದಾರೆ.

ಚಿನ್ನಸ್ವಾಮಿ ಸ್ಟೇಡಿಯಂ ಬಳಿ ನಡೆದಿರುವುದು ಒಂದು ಅಪಘಾತ. ಒಂದು ಜವಾಬ್ದಾರಿಯುತ ಸರ್ಕಾರವಾಗಿ ಆ ಘಟನೆಯ ಹೊಣೆಯನ್ನು ನಾವು ಹೊತ್ತಿದ್ದೇವೆ. ಬೆಂಗಳೂರು ನಗರ ಪೊಲೀಸ್ ಕಮಿಷನರ್ ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಿದ್ದೇವೆ, ರಾಜ್ಯ ಗುಪ್ತಚರ ಇಲಾಖೆಯ ಮುಖ್ಯಸ್ಥರನ್ನು ವರ್ಗಾವಣೆ ಮಾಡಿದ್ದೇವೆ. ನನ್ನ ರಾಜಕೀಯ ಕಾರ್ಯದರ್ಶಿಯನ್ನು ಸೇವೆಯಿಂದ ಬಿಡುಗಡೆಗೊಳಿಸಿದ್ದೇನೆ. ಈ ಪ್ರಕರಣದ ಸಮಗ್ರ ತನಿಖೆಗೆ ನಿವೃತ್ತ ನ್ಯಾಯಾಧೀಶರಾದ ಜಾನ್ ಮೈಕೆಲ್ ಕುನ್ಹಾ ಅವರ ನೇತೃತ್ವದಲ್ಲಿ ಏಕಸದಸ್ಯ ಆಯೋಗವನ್ನೂ ರಚಿಸಿದ್ದೇವೆ.

ಇಷ್ಟೆಲ್ಲ ಕ್ರಮಕೈಗೊಂಡ ನಂತರವೂ ರಾಜ್ಯದ ಬಿಜೆಪಿ ನಾಯಕರು ಪ್ರತಿಭಟನೆ ನಡೆಸುತ್ತಿರುವುದು ರಾಜಕೀಯ ದುರುದ್ದೇಶದಿಂದ ಹೊರತು ಜನರ ಬಗೆಗಿನ ಕಾಳಜಿಯಿಂದ ಅಲ್ಲ ಎನ್ನುವುದು ಸ್ಪಷ್ಟವಾಗಿದೆ. ಹೆಣಗಳ ಮೇಲಿನ ರಾಜಕೀಯ ಬಿಜೆಪಿ ಪಾಲಿಗೆ ಹೊಸದೇನಲ್ಲ. ಅಪಘಾತ, ಹತ್ಯೆ, ದೌರ್ಜನ್ಯಗಳು ನಡೆದ ತಕ್ಷಣ ಸತ್ತ ಜೀವಗಳನ್ನು ಹುಡುಕಿಕೊಂಡು ಹೋಗುವ ರಣಹದ್ದುಗಳಂತೆ ಎರಗಿ ಬೀಳುವುದು ಬಿಜೆಪಿಯ ರಕ್ತದಲ್ಲಿಯೇ ಇದೆ. ತಮ್ಮ ಊಟದೆಲೆಯ ಮೇಲೆ ಆನೆ ಸತ್ತುಬಿದ್ದಿದ್ದರೂ ಎದುರಿಗಿದ್ದವರ ಎಲೆ ಮೇಲೆ ಸತ್ತು ಬಿದ್ದ ನೊಣದ ಕಡೆ ಬೊಟ್ಟುಮಾಡುವುದು ಬಿಜೆಪಿಯ ಹಳೆಯ ಚಾಳಿ ಎನ್ನುವುದನ್ನು ರಾಜ್ಯದ ಜನತೆ ಅರ್ಥಮಾಡಿಕೊಂಡಿದ್ದಾರೆಂದು ತಿರುಗೇಟು ನೀಡಿದ್ದಾರೆ.

ಪ್ರತಿಯೊಂದು ಅಪಘಾತದ ಹಿಂದೆ ಸಾವು-ನೋವಿಗೆ ಈಡಾದವರ ಕುಟುಂಬದ ದು:ಖ ಮತ್ತು ಸಂಕಟ ಇರುವುದನ್ನು ನಾವು ಅರ್ಥಮಾಡಿಕೊಂಡಿದ್ದೇವೆ. ಇದೇ



ಕಾರಣಕ್ಕಾಗಿ ನಾವು ಇಂತಹ ಪ್ರಕರಣಗಳನ್ನು ರಾಜಕೀಯಕ್ಕೆ ಬಳಸುವುದಿಲ್ಲ. ಹೀಗಿದ್ದರೂ ರಾಜ್ಯದ ಬಿಜೆಪಿ ನಾಯಕರು ಮತ್ತೆ ಮತ್ತೆ ಇಂತಹ ಪ್ರಕರಣಗಳನ್ನು ಕೆದಕಿ ಕೆದಕಿ ಜನರನ್ನು ಪ್ರಚೋದಿಸುತ್ತಿರುವ ಹಿನ್ನೆಲೆಯಲ್ಲಿ ಇವರ ಆತ್ಮವಂಚಕ ನಡವಳಿಕೆಯನ್ನು ಬಯಲು ಮಾಡುವ ಉದ್ದೇಶದಿಂದ ಬಿಜೆಪಿ ಆಡಳಿತದಲ್ಲಿನ ಕೆಲವು ಪ್ರಕರಣಗಳನ್ನು ರಾಜ್ಯದ ಜನತೆಯ ಗಮನಕ್ಕೆ ತರಲು ಇಷ್ಟಪಡುತ್ತೇನೆ.

2002ರಲ್ಲಿ ಗುಜರಾತ್ ರಾಜ್ಯದಲ್ಲಿ ನಡೆದ ಹತ್ಯಾಕಾಂಡದಲ್ಲಿ ಎಲ್ಲ ಧರ್ಮಗಳಿಗೆ ಸೇರಿದ್ದ ಅಂದಾಜು ಎರಡು ಸಾವಿರ ಅಮಾಯಕರು ಪ್ರಾಣ ಕಳೆದುಕೊಂಡರು. ಆ ಘಟನೆಯ ಹೊಣೆಹೊತ್ತು ರಾಜೀನಾಮೆ ನೀಡುವಂತೆ ಅವರದ್ದೇ ಪಕ್ಷದ ಪ್ರಧಾನಿ ಅಟಲಬಿಹಾರಿ ವಾಜಪೇಯಿ ಸೂಚನೆ ನೀಡಿದರೂ ಮುಖ್ಯಮಂತ್ರಿಯಾಗಿದ್ದ ಮೋದಿ ಅವರು ರಾಜೀನಾಮೆ ನೀಡಿಲ್ಲ ಮಾತ್ರವಲ್ಲ, ಇಲ್ಲಿಯವರೆಗೆ ಕನಿಷ್ಠ ವಿಷಾದವನ್ನೂ ಸೂಚಿಸಿಲ್ಲ. ನಮ್ಮ ರಾಜೀನಾಮೆ ಕೇಳುವವರು ಮೊದಲು ಇದಕ್ಕೆ ಉತ್ತರಿಸಿ.

ಕಳೆದ ಏಪ್ರಿಲ್ ತಿಂಗಳಲ್ಲಿ ಪಹಲ್ಗಾಮ್‌ನಲ್ಲಿ ಪಾಕ್ ಉಗ್ರಗಾಮಿಗಳು ನಡೆಸಿದ್ದ ಹತ್ಯಾಕಾಂಡದಲ್ಲಿ 26 ಭಾರತೀಯರು ಪ್ರಾಣ ಕಳೆದುಕೊಂಡರು. ಈ ಘಟನೆಯ ಹೊಣೆ ಹೊತ್ತು ಪ್ರಧಾನಿ ರಾಜೀನಾಮೆ ನೀಡಬೇಕೆಂದು ನಮ್ಮ ಪಕ್ಷ ಒತ್ತಾಯಿಸಿಲ್ಲ. ಈ ಘಟನೆಯ ಚರ್ಚೆಗೆ ಕನಿಷ್ಠ ಸಂಸತ್‌ನ ವಿಶೇಷ ಅಧಿವೇಶನ ಕರೆಯಬೇಕೆಂಬ ನಮ್ಮ ಪಕ್ಷದ ಬೇಡಿಕೆಯನ್ನೂ ಪ್ರಧಾನಿಯವರು ಒಪ್ಪಿಕೊಂಡಿಲ್ಲ. ದೇಶಕ್ಕೆಲ್ಲ ಸಿಂಧೂರ ಹಂಚಲು ಹೊರಟಿರುವ ಪ್ರಧಾನಿಯವರಿಗೆ ಇಲ್ಲಿಯ ವರೆಗೆ 26 ಅಮಾಯಕರ ಸಾವಿಗೆ ಕಾರಣರಾದ ನಾಲ್ಕು ಮಂದಿ ದುರುಳರು ಯಾರು ಎನ್ನುವುದನ್ನು ಪತ್ತೆ ಹಚ್ಚಲಾಗಿಲ್ಲ. ಇದು ಕೇಂದ್ರ ಸರ್ಕಾರದ ವೈಫಲ್ಯ ಅಲ್ಲವೇ? ಈ ವೈಫಲ್ಯದ ಹೊಣೆಯನ್ನು ಯಾರು ಹೊರಬೇಕು? ಪಂಡಿತ ಜವಾಹರಲಾಲ್ ನೆಹರೂ ಅವರಾ? ರಾಹುಲ್ ಗಾಂಧಿಯವರಾ? ಇಲ್ಲವೇ ಪ್ರಧಾನಿ ನರೇಂದ್ರ ಮೋದಿಯವರೇ? ಎಂದು ಪ್ರಶ್ನಿಸಿದ್ದಾರೆ.

ಕಳೆದ ಎರಡು ವರ್ಷಗಳಿಂದ ದೇಶದ ಈಶಾನ್ಯ ಭಾಗದ ಮಣಿಪುರ ಹಿಂಸೆಯ ಬೆಂಕಿಯಲ್ಲಿ ಹೊತ್ತಿ ಉರಿಯುತ್ತಿದೆ. ನೂರಾರು ಮಂದಿ ಸಾವಿಗೀಡಾಗಿದ್ದಾರೆ. ಹೀಗಿದ್ದರೂ ಆ ರಾಜ್ಯದ ಬಿಜೆಪಿ ಮುಖ್ಯಮಂತ್ರಿ ಬಿರೇನ್ ಸಿಂಗ್ 20 ತಿಂಗಳ ಕಾಲ ಕುರ್ಚಿಗೆ ಅಂಟಿಕೂತಿದ್ದರು. ಕೊನೆಗೂ ಸುಪ್ರೀಂ ಕೋರ್ಟ್ ಚಾಟಿ ಬೀಸಿದ ನಂತರ ರಾಜೀನಾಮೆ ನೀಡಿದ್ದರು. ಈಗಲೂ ಅಲ್ಲಿ ಹಿಂಸಾಚಾರ ಮುಂದುವರಿದಿದೆ. ಇದರ ಹೊಣೆಯನ್ನು ಕೇಂದ್ರ **ಗೃಹಸಚಿವರು ಹೊರುವುದು ಬೇಡವೇ? :** ಗುಜರಾತ್‌ನ ಮೋರ್ಬಿ ಸೇತುವೆ ಕುಸಿದು ಬಿದ್ದು 140 ಮಂದಿ ಮೃತಪಟ್ಟಿದ್ದರು. ಈ ವರ್ಷದ ಜನವರಿ ತಿಂಗಳಲ್ಲಿ ಮಹಾಕುಂಭಮೇಳದಲ್ಲಿ 30 ಯಾತ್ರಿಕರು ಪ್ರಾಣ ಕಳೆದುಕೊಂಡರು. ಆ ರಾಜ್ಯಗಳಲ್ಲಿ ಮುಖ್ಯಮಂತ್ರಿಯಾಗಿರುವವರು ಬಿಜೆಪಿಗೆ ಸೇರಿದವರಲ್ಲವೇ? ಇವರು ರಾಜೀನಾಮೆ ನೀಡುವುದು ಬಿಡಿ, ಆ ಘಟನೆಗಳ ಬಗ್ಗೆ ಇಲ್ಲಿಯ ವರೆಗೆ ಸರಿಯಾದ ತನಿಖೆಯನ್ನೇ ಅಲ್ಲಿನ ಸರ್ಕಾರ ನಡೆಸಿಲ್ಲ. ಹೀಗಿರುವಾಗ ನಮ್ಮ ರಾಜೀನಾಮೆ **ಕೇಳಲು ರಾಜ್ಯದ ಬಿಜೆಪಿ ನಾಯಕರಿಗೆ ಯಾವ ನೈತಿಕತೆ ಇದೆ? :** ನಮ್ಮ ಸರ್ಕಾರ ರಾಜ್ಯದ ಏಳು ಕೋಟಿ ಜನರಿಗೆ ಉತ್ತರದಾಯಿಯಾಗಿದೆ. ಈ ಕಾರಣಕ್ಕಾಗಿ ಕಾಲ್ತುಳಿತ ಪ್ರಕರಣದಲ್ಲಿ ಕರ್ತವ್ಯಭ್ರಷ್ಟರಾಗಿದ್ದಾರೆಂದು ಮೇಲ್ನೋಟಕ್ಕೆ ಅನಿಸಿದವರ ವಿರುದ್ಧ ಕ್ರಮಕೈಗೊಳ್ಳಲಾಗಿದೆ. ಉಳಿದಂತೆ ಇದರ ಬಗ್ಗೆ ಆಮೂಲಾಗ್ರವಾದ ಮತ್ತು ನಿಷ್ಪಕ್ಷಪಾತ ತನಿಖೆಗೆ ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖಾ ಆಯೋಗ ರಚಿಸಲಾಗಿದೆ. ಆಯೋಗ ನೀಡುವ ವರದಿಯನ್ನು ಆಧರಿಸಿ ತಪ್ಪಿತಸ್ಥರ ವಿರುದ್ಧ ಯಾವುದೇ ಮುಲಾಜಿಲ್ಲದೆ ಕ್ರಮಕೈಗೊಳ್ಳಲಾಗುವುದು. ರಾಜ್ಯ ಬಿಜೆಪಿ ನಾಯಕರು ಇನ್ನಾದರೂ ಪ್ರತಿಭಟನೆಯಂತಹ ಬೀದಿ ಪ್ರಹಸನವನ್ನು ಕೈಬಿಟ್ಟು ಆತ್ಮಸಾಕ್ಷಿಗೆ ತಕ್ಕಂತೆ ನಡೆದುಕೊಳ್ಳಲಿ ಎಂದು ತಿಳಿಸಿದ್ದಾರೆ.

### ಕೆ.ನಿರ್ಮಲ ಮರಡಿಹಳ್ಳಿ ರಚಿಸಿರುವ 'ಬೆಳ್ಳಕ್ಕಿ ಸಾಲು' ಮಕ್ಕಳ ಕವನ ಸಂಕಲನ ಬಿಡುಗಡೆ

# ಮಕ್ಕಳ ಮನಸ್ಸಿಗೆ ಸ್ಫೂರ್ತಿ ಕೊಡುವಂತ ಅಪರೂಪದ ಪದ್ಯಗಳು ಬೆಳ್ಳಕ್ಕಿ ಸಾಲಿನಲ್ಲಿದೆ



**ಚಿತ್ರದುರ್ಗ :** ಮಕ್ಕಳ ಮನಸ್ಸಿಗೆ ಸ್ಫೂರ್ತಿ ಕೊಡುವಂತ ಅಪರೂಪದ ಪದ್ಯಗಳು ಬೆಳ್ಳಕ್ಕಿ ಸಾಲಿನಲ್ಲಿದೆ ಎಂದು ಇತಿಹಾಸ ಸಂಶೋಧಕ ಡಾ.ಬಿ.ರಾಜಶೇಖರಪ್ಪ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಸಹಯೋಗದೊಂದಿಗೆ ಬಾಪೂಜಿ ಸಮೂಹ ಶಿಕ್ಷಣ ಸಂಸ್ಥೆಯಲ್ಲಿ ಮಂಗಳವಾರ ಕೆ.ನಿರ್ಮಲ ಮರಡಿಹಳ್ಳಿರವರು ರಚಿಸಿರುವ ಬೆಳ್ಳಕ್ಕಿ ಸಾಲು ಮಕ್ಕಳ ಕವನ ಸಂಕಲನ ಬಿಡುಗಡೆಗೊಳಿಸಿ ಮಾತನಾಡಿದರು.

ಬೆಳ್ಳಕ್ಕಿ ಸಾಲು ಎನ್ನುವ ಪದವೇ ಆಕರ್ಷಣೀಯವಾಗಿದೆ. ಹಿಂದಿನಿಂದಲೂ ಮಕ್ಕಳ ಸಾಹಿತ್ಯವಿದೆ. ಇದಕ್ಕೆ ಪಂಚತಂತ್ರದ ಕಥೆಗಳನ್ನು ನೆನಪಿಸಿಕೊಳ್ಳಬಹುದು. ಮಕ್ಕಳ ಕಥಾ ಸಾಹಿತ್ಯ, ದೊಡ್ಡ ಹಿನ್ನೆಲೆಯಿದೆ. ರಸ ಋಷಿ ಕುವೆಂಪು ಮಕ್ಕಳ ಸಾಹಿತ್ಯ ರಚಿಸಿದ್ದಾರೆ. ಬೇಂದ್ರೆ, ಜಿ.ಪಿ.ರಾಜರತ್ನಂ ಇವರುಗಳ ಪದ್ಯಗಳು ಪಠ್ಯಪುಸ್ತಕದಲ್ಲಿ ಸೇರಿವೆ.

> **ಪರಿಸರ, ಪ್ರಾಣಿ, ಪಕ್ಷಿ, ಕುಟುಂಬ, ಶಾಲೆ, ಶಿಕ್ಷಕ, ಸ್ನೇಹಿತರಿಗೆ ಸಂಬಂಧಪಟ್ಟಂತ ಕವನಗಳಿವೆ. ಮಕ್ಕಳು ಆಪ್ಯಾಯಮಾನವಾಗುವ ರೀತಿಯಲ್ಲಿ ಕೆ.ನಿರ್ಮಲರವರು ಪದ್ಯಗಳನ್ನು ಬರೆದಿದ್ದಾರೆ.**
> **-ಡಾ.ಬಿ.ರಾಜಶೇಖರಪ್ಪ**

ನಿರ್ಮಲರವರು ಬೆಳ್ಳಕ್ಕಿ ಸಾಲು ಮಕ್ಕಳ ಕವನ ರಚಿಸಿರುವುದಕ್ಕೆ ನಿಜಕ್ಕೂ ಚಿತ್ರದುರ್ಗದವರು ಹೆಮ್ಮೆ ಪಡಬೇಕು. ಮಕ್ಕಳ ಮನಸ್ಸಿಗೆ ನಾಟುವಂತೆ ಬರೆಯುವುದು ಕಷ್ಟ ಎಂದರು.

ಬೆಳ್ಳಕ್ಕಿ ಸಾಲು ಕವನದಲ್ಲಿ 61 ಪದ್ಯಗಳಿವೆ. ಮಕ್ಕಳಿಗೆ ಚೆನ್ನಾಗಿ ಅರ್ಥವಾಗುವಂತೆ ರಚಿಸಿ ಅರ್ಪಿಸಿದ್ದಾರೆ. ಕವನಗಳನ್ನು ಓದಿ ಮಕ್ಕಳು ಮೆಲಕು ಹಾಕುವಂತಿರಬೇಕು ಎಂದರು.

## ಮೈಸೂರಿನ ಖಾಸಗಿ ವಸತಿ ಶಾಲೆಗೆ ಬಾಂಬ್ ಬೆದರಿಕೆ ಸಂದೇಶ: ವಿದ್ಯಾರ್ಥಿಗಳು, ಸಿಬ್ಬಂದಿ ಆತಂಕ!

**ಮೈಸೂರು:** ಮೈಸೂರಿನ ಖಾಸಗಿ ವಸತಿ ಶಾಲೆಯೊಂದಕ್ಕೆ ಬಂದ ಬಾಂಬ್ ಬೆದರಿಕೆಯ ಇಮೇಲ್ ಸಂದೇಶದಿಂದ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಕೆಲಕಾಲ ಆತಂಕಕ್ಕೊಳಗಾದ ಘಟನೆ ನಡೆದಿದೆ.

ಮೈಸೂರು ತಾಲ್ಲೂಕಿನ ಭೂಗತಗಳ್ಳಿಯಲ್ಲಿರುವ ಜ್ಞಾನ ಸರೋವರ ಇಂಟರ್ ನ್ಯಾಷನಲ್ ವಸತಿ ಶಾಲೆಗೆ ಇಂದು ಬಾಂಬ್ ಬೆದರಿಕೆ ಕರೆ ಬಂದಿದ್ದು, 2023ರಲ್ಲಿ ಹೈದರಾಬಾದ್‌ನಲ್ಲಿ ನಡೆದಿದ್ದ ಅತ್ಯಾಚಾರ ಪ್ರಕರಣದ ಬಗ್ಗೆ ಪೊಲೀಸರು ಕ್ರಮ ಕೈಗೊಳ್ಳದಿದ್ದರೆ ಬಾಂಬ್ ಇಟ್ಟು ಶಾಲೆ ಸ್ಫೋಟಿಸುತ್ತೇವೆ ಎಂದು ಬೆದರಿಕೆ ಇಮೇಲ್ ಬಂದಿದ್ದು, ಸ್ಥಳಕ್ಕೆ ಬಾಂಬ್ ಪತ್ತೆ ದಳ, ಶ್ವಾನದಳ ಸಿಬ್ಬಂದಿ ದೌಡಾಯಿಸಿ, ಪರಿಶೀಲನೆ ನಡೆಸಿದ್ದಾರೆ. ಇಮೇಲ್ ಬೆದರಿಕೆ ಸಂದೇಶವನ್ನು ಲಘುವಾಗಿ ಪರಿಗಣಿಸಬಾರದು. ಹೈದರಾಬಾದ್ ಅತ್ಯಾಚಾರದ ಆರೋಪಿಗೆ ನ್ಯಾಯ ಕೊಡಿಸಬೇಕು. ಪೊಲೀಸರು ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಳ್ಳದಿದ್ದರೆ ವಿದ್ಯಾರ್ಥಿಗಳು ಸಾವನ್ನಪ್ಪುತ್ತಾರೆ. ಮಕ್ಕಳನ್ನು ಹತ್ಯೆ ಮಾಡುವುದು ನಮ್ಮ ಉದ್ದೇಶವಲ್ಲಾ. ಆದರೆ ನ್ಯಾಯ ಪಡೆಯಲು ಮಕ್ಕಳು ತಮ್ಮ ಜೀವನವನ್ನು ತ್ಯಾಗ ಮಾಡಬೇಕಾಗುತ್ತದೆ ಎಂದು ಇ-ಮೇಲ್ ಸಂದೇಶದಲ್ಲಿ ತಿಳಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಇಮೇಲ್ ನಲ್ಲಿ 2023ರಲ್ಲಿ ನಡೆದಿದ್ದ ಅತ್ಯಾಚಾರ ಪ್ರಕರಣವನ್ನು ಉಲ್ಲೇಖಿಸಿದ್ದು, ಅಚ್ಚರಿಕೆ ಕಾರಣವಾಗಿದೆ.

## ಕಲ್ಲತ್ತಿಗಿರಿ ಜಲಪಾತ ಮೈದುಂಬಿ ಹರಿಯುತ್ತಿರುವ ರಮಣೀಯ ದೃಶ್ಯ



**ತರೀಕೆರೆ:** ಚಿಕ್ಕಮಗಳೂರು ಜಿಲ್ಲೆಯ ಪಶ್ಚಿಮಘಟ್ಟ ಪ್ರದೇಶದಲ್ಲಿ ಧಾರಾಕಾರ ಮಳೆ ಮುಂದುವರಿದ ಪರಿಣಾಮ, ತರೀಕೆರೆ ತಾಲೂಕಿನ ಲಿಂಗದಹಳ್ಳಿ ಸಮೀಪದ ಕಲ್ಲತ್ತಿಗಿರಿ ಜಲಪಾತವು ಮೈದುಂಬಿ ಹರಿಯುತ್ತಿದ್ದು, ರಾಕ್ಷಸ ಸ್ವರೂಪ ತಳೆದಂತೆ ಕಾಣುತ್ತಿದೆ.

ಕೆಮ್ಮಣ್ಣುಗುಂಡಿ ತಪ್ಪಲಿನಲ್ಲಿರುವ ಈ ಸುಂದರ ಜಲಪಾತ, ಕಳೆದ ವಾರವರೆಗೆ ಸಾಧಾರಣವಾಗಿ ಹರಿಯುತ್ತಿತ್ತು, ಆದರೆ ಕಳೆದ ನಾಲ್ಕೈದು ದಿನಗಳಿಂದ ಸುರಿಯುತ್ತಿರುವ ಭಾರೀ ಮಳೆಯಿಂದಾಗಿ ಜಲಪಾತದ ನೀರಿನ ಪ್ರಮಾಣ ಬಹಳಷ್ಟು ಹೆಚ್ಚಾಗಿದೆ.

ಧುಮ್ಮಿಕ್ಕುತ್ತಾ ಹರಿಯುತ್ತಿರುವ ಜಲಪಾತ ಪ್ರವಾಸಿಗರನ್ನು ಕೈಬೀಸಿ ಕರೆಯುತ್ತಿದೆ. ಮಲೆನಾಡು ಈ ಪ್ರಕೃತಿ ವೈಭವಕ್ಕೆ ಸಾಕ್ಷಿಯಾದರೂ, ಇಲ್ಲಿಗೆ ತೆರಳುವ ಪ್ರವಾಸಿಗರು ನಿರಂತರ ಮಳೆಯಿಂದಾಗಿ ಸುರಕ್ಷತಾ ಕ್ರಮಗಳನ್ನು ಅನುಸರಿಸುವ ಅಗತ್ಯತೆಯಿದೆ.

# ಉತ್ತಮ ಫಲಿತಾಂಶ; ಸರ್ಕಾರಕ್ಕೆ ಅದೇ ಕೊಡುಗೆ : ಸಚಿವ ಎಸ್.ಮಧು ಬಂಗಾರಪ್ಪ

**ಬಳ್ಳಾರಿ :** ಕಲ್ಯಾಣ ಕರ್ನಾಟಕ ಭಾಗದಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಫಲಿತಾಂಶವು ನಿಗದಿತ ಗುರಿ ತಲುಪಬೇಕೆನ್ನುವುದು ಮುಖ್ಯಮಂತ್ರಿಯವರ ಆಶಯವಾಗಿದ್ದು, ಅದರಂತೆ ಬಳ್ಳಾರಿ ಜಿಲ್ಲೆಯು ಸಹ ಉತ್ತಮ ಫಲಿತಾಂಶ ಪಡೆಯಲು ಅಧಿಕಾರಿಗಳು ಶ್ರಮಿಸಬೇಕು. ಇದೇ ಸರ್ಕಾರಕ್ಕೆ ನೀವು ನೀಡುವ ಕೊಡುಗೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಎಸ್.ಮಧು ಬಂಗಾರಪ್ಪ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಧಿಕಾರಿಗಳು ಉತ್ತಮ ಫಲಿತಾಂಶಕ್ಕೆ ಈಗಿನಿಂದಲೇ ಕಾರ್ಯಯೋಜನೆ ರೂಪಿಸಬೇಕು. ಹಂತ-ಹಂತವಾಗಿ ಅದನ್ನು ಕಾರ್ಯರೂಪಕ್ಕೆ ತರಬೇಕು. ಇದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಅಡಿಪಾಯ ಹಾಕಿದಂತಾಗುತ್ತದೆ. ಕೊನೆಯ ಸಮಯದಲ್ಲಿ ಗೊಂದಲದಲ್ಲಿ ಅನುಷ್ಠಾನಗೊಳಿಸುವುದಲ್ಲ ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮಕ್ಕಳಿಗೆ ಆತ್ಮಸ್ಥೈರ್ಯ ತುಂಬುವ ಕೆಲಸವಾಗಬೇಕು. ಅಧಿಕಾರಿಗಳು ಶಾಲೆಗಳನ್ನು ದತ್ತು ರೀತಿಯಲ್ಲಿ ಕಾಳಜಿ ವಹಿಸಬೇಕು. ಇದರಿಂದ ಶಾಲೆಗಳು ಅಭಿವೃದ್ಧಿ ಹೊಂದುತ್ತವೆ ಮತ್ತು ಒಳ್ಳೆಯ ಫಲಿತಾಂಶವು ಲಭಿಸುತ್ತದೆ ಎಂದರು.

ಜಿಲ್ಲೆಯ ಎಲ್ಲಾ ಶಾಲೆಗಳಿಗೂ ಉಚಿತ ವಿದ್ಯುತ್ ಸಂಪರ್ಕ ಕಲ್ಪಿಸಿದೆ. ಇದರಿಂದ ಕಂಪ್ಯೂಟರ್ ಶಿಕ್ಷಣವೂ ಲಭಿಸುತ್ತಿದೆ. ಸಂಜೆಯ ವೇಳೆಯಲ್ಲಿ ವಿಶೇಷ ತರಗತಿ



ನಡೆಸಲು ಅನುಕೂಲವಾಗುತ್ತಿದೆ. ಈ ಕುರಿತು ಸಾಕಷ್ಟು ಪ್ರಚಾರ ಮಾಡಬೇಕು. ಮಕ್ಕಳು ಹೆಚ್ಚಿನ ವಿದ್ಯಾಭ್ಯಾಸ ಹೊಂದಲು ಸಹಾಯವಾಗುತ್ತದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಶಾಲೆ ಬಿಟ್ಟ ಮಕ್ಕಳನ್ನು ಮನೆಗೆ ಹೋಗಿ ಕರೆತರುವ ಕೆಲಸ ಮಾಡಬೇಕು. ಮುಖ್ಯವಾಗಿ ಉನ್ನತ ಅಧಿಕಾರಿಗಳು ಶಾಲೆ ಬಿಟ್ಟ ಮಕ್ಕಳ ಮನೆಗೆ ಭೇಟಿ ನೀಡಿ, ಅವರನ್ನು ತಮ್ಮ ಸರ್ಕಾರಿ ವಾಹನ(ಕಾರ್) ಮೂಲಕ ಕರೆತಂದರೆ ಆ ಮಗುವಿಗೆ ನಾನು ವಿದ್ಯಾಭ್ಯಾಸ ಪಡೆಯಬೇಕೆಂಬ ಹಂಬಲ ಹುಟ್ಟಿಕೊಳ್ಳುತ್ತದೆ. ನಂತರ ಕರೆತಂದ ಅಧಿಕಾರಿಯೂ ಸಹ ಆ ಮಗುವಿನ ಮೇಲೆ ಹೆಚ್ಚಿನ ಕಾಳಜಿ ಕುರಿತು ವಿಚಾರಿಸ ತೊಡಗುತ್ತಾನೆ. ಇದರಿಂದ ಸುತ್ತ-ಮುತ್ತಲಿನ ಪೋಷಕರು ಸಹ ತಮ್ಮ ಮಕ್ಕಳನ್ನು ಶಾಲೆಗಳಿಗೆ ಕಳುಹಿಸಲು ಮುಂದೆ ಬರುತ್ತಾರೆ. ಶಿಕ್ಷಣ ಇಲಾಖೆಯಲ್ಲಿ 6 ಸಾವಿರಕ್ಕೂ ಹೆಚ್ಚು ಅಧಿಕಾರಿಗಳಿದ್ದು, ಒಬ್ಬೊಬ್ಬರು ಒಂದು ಮಗುವನ್ನು ಸರ್ಕಾರಿ ಶಾಲೆಗೆ ದಾಖಲಿಸಿದರೆ, ದಾಖಲಾತಿ ಪ್ರಮಾಣವೇ ಹೆಚ್ಚಳವಾಗುತ್ತದೆ. ಈ ಕುರಿತು ಅಧಿಕಾರಿಗಳು ಒಮ್ಮೆ ಯೋಚಿಸಬೇಕು ಎಂದು ಸಚಿವರು ತಮ್ಮ ಅನಿಸಿಕೆ ವ್ಯಕ್ತಪಡಿಸಿದರು.

ಜಿಲ್ಲೆಯ ಗಡಿಭಾಗದ ಗ್ರಾಮಗಳಲ್ಲಿ ಜನರು ಗೂಳೆ ಹೋಗದಂತೆ ನೋಡಿಕೊಳ್ಳಬೇಕು. ಅದಕ್ಕಾಗಿಯೇ ರಾಜ್ಯ ಸರ್ಕಾರವು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದು, ಇವುಗಳ ಪ್ರಯೋಜನ ಅವರು ಪಡೆಯುವಂತಾಗಬೇಕು. ಇದರಿಂದ ಆ ಕುಟುಂಬದ ಮಕ್ಕಳು ಸಹ ಶಾಲೆ ತಪ್ಪಿಸುವುದಿಲ್ಲ ಎಂದು ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಕಲಬುರಗಿ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಡಾ.ಆಕಾಶ್ ಶಂಕರ್ ಅವರು ಮಾತನಾಡಿ, ಜಿಲ್ಲೆಯಲ್ಲಿ ಈಗಾಗಲೇ ಶೇ.94 ರಷ್ಟು ಪಠ್ಯಪುಸ್ತಕ ಸರಬರಾಜು ಮಾಡಲಾಗಿದೆ.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮನ್ನು ಫಿಟ್ ಆಗಿ ಮತ್ತು ಚೆನ್ನಾಗಿರಿಸಿಕೊಳ್ಳಲು ಹೆಚ್ಚಿನ ಕ್ಯಾಲೆಣಟಿಜಜಜಿಟಿಜಜರಿಯ ಆಹಾರವನ್ನು ತಪ್ಪಿಸಿ ನೀವು ಇತರರ ಮಾತುಗಳನ್ನು ನಂಬಿ ಇಂದು ಹೂಡಿಕೆ ಮಾಡಿದಲ್ಲಿ ಇಂದು ಆರ್ಥಿಕ ನಷ್ಟದ ಸಾಧ್ಯತೆಯಿದೆ. ಕೌಟುಂಬಿಕ ಸಮಸ್ಯೆಗೆ ಮೊದಲ ಆದ್ಯತೆ ನೀಡಬೇಕು. ನೀವು ವಿಳಂಬವಿಲ್ಲದೇ ಇದನ್ನು ಚರ್ಚಿಸಬೇಕು, ಏಕೆಂದರೆ ಒಮ್ಮೆ ಇದನ್ನು ಬಗೆಹರಿಸಿದ ನಂತರ ಮನೆಯಲ್ಲಿನ ಜೀವನ ನಡೆಸಲು ಹೆಚ್ಚು ಸುಲಭವಾಗುತ್ತದೆ ಮತ್ತು ನಿಮ್ಮ ಕುಟುಂಬದ ಸದಸ್ಯರ ಮೇಲೆ ಪ್ರಭಾವ ಬೀರಲು ನಿಮಗೆ ಯಾವುದೇ ತೊಂದರೆ ಕಂಡುಬರುವುದಿಲ್ಲ.

### ವೃಷಭ ರಾಶಿ

ಕಳೆದ ಉದ್ಯಮಗಳ ಯಶಸ್ಸು ನಿಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ಇಂದು ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಬಹವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ. ಇದರಿಂದ ನೀವು ತುಂಬಾ ಸಂತೋಷಪಡುತ್ತೀರಿ. ದಿನದ ಉತ್ತರಾರ್ಧದಲ್ಲಿ ಅತ್ಯಾಕರ್ಷಕ ಮತ್ತು ಮನರಂಜನೆಯ ಏನನ್ನಾದರೂ ಹೊಂದಿಸಿ. ಇಂದು ನಿಮ್ಮ ಪ್ರೀತಿಪಾತ್ರರು ತನ್ನ ಮನಸ್ಥಿತಿಯನ್ನು ನಿಮ್ಮ ಮುಂದೆ ಇಡಲು ಸಾಧ್ಯವಾಗುವುದಿಲ್ಲ ಇದರಿಂದಾಗಿ ನೀವು ಅಸಮಾಧಾನಗೊಳ್ಳಬಹುದು.

### ಮಿಥುನ ರಾಶಿ

ಇಂದು ನಿಮಗೆ ತುಂಬ ಉನ್ನತ ಶಕ್ತಿಯಿರುವ ದಿನ ಮತ್ತು ನೀವು ಸಣ್ಣ ವಿಷಯಗಳಿಗೂ ಕಿರಿಕಿರಿಗೊಳ್ಳುತ್ತೀರಿ. ಯಶಸ್ಸಿಗೆ ಇಂದಿನ ಸೂತ್ರವೆಂದರೆ ನಾವೀನ್ಯತೆಯಿರವ ಮತ್ತು ಉತ್ತಮ ಅನುಭವ ಹೊಂದಿರುವ ಜನರ ಸಲಹೆಯಂತೆ ನಿಮ್ಮ ಹಣವನ್ನು ಹೂಡುವುದಾಗಿದೆ. ಒಬ್ಬ ಸ್ನೇಹಿತ ತನ್ನ ವೈಯಕ್ತಿಕ ಸಮಸ್ಯೆಗಳನ್ನು ಪರಿಹರಿಸುವಲ್ಲಿ ನಿಮ್ಮ ಸಲಹೆ ಪಡೆದುಕೊಳ್ಳುತ್ತಾರೆ.

### ಕರ್ಕ ರಾಶಿ

ನೀವು ಕಳೆದುಹೋದದ್ದರ ಬಗ್ಗೆ ಯೋಚಿಸುತ್ತಿದ್ದರೆ ನಿಮ್ಮ ಹತಾಶೆ ನಿಮ್ಮ ಆರೋಗ್ಯವನ್ನು ನಾಶಮಾಡಬಹುದು – ಸಾಧ್ಯವಾದಷ್ಟೂ ವಿಶ್ರಾಂತಿ ತಗೆದುಕೊಳ್ಳಲು ಪ್ರಯತ್ನಿಸಿ. ಹೂಡಿಕೆ ಮಾಡುವುದು ಅನೇಕ ಬಾರಿ ನಿಮಗೆ ಪ್ರಯೋಜನಕಾರಿಯೆಂದು ಸಾಬೀತುಪಡಿಸುತ್ತದೆ, ಇಂದು ನಿಮಗೆ ಈ ಮಾತು ಅರ್ಥವಾಗಬಹುದು ಏಕೆಂದರೆ ಯಾವುದೇ ಹಳೆಯ ಹೂಡಿಕೆಯಿಂದ ನೀವು ಪ್ರಯೋಜನವನ್ನು ಪಡೆಯಬಹುದು ಹಿರಿಯರ ಬಳಿ ನಿಮ್ಮ ಮಹತ್ವಾಕಾಂಕ್ಷೆಗಳನ್ನು ವ್ಯಕ್ತಪಡಿಸಿ ಹಾಗೂ ಅವರು ನಿಮಗೆ ಸಹಾಯ ಮಾಡಲು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಾರೆ.

### ಸಿಂಹ ರಾಶಿ

ನಿಮ್ಮ ಮುಂಗೋಪ ನಿಮ್ಮನ್ನು ಇನ್ನೂ ಹೆಚ್ಚು ತೊಂದರೆಯಲ್ಲಿ ಸಿಲುಕಿಸಬಹುದು. ಜೀವನದ ಕೆಟ್ಟ ಕಾಲದಲ್ಲಿ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ ಆದ್ದರಿಂದ ಇಂದಿನಿಂದಲೇ ನಿಮ್ಮ ಹಣವನ್ನು ಸಂಗ್ರಹಿಸುವ ಬಗ್ಗೆ ಯೋಚಿಸಿ ಇಲ್ಲದಿದ್ದರೆ ನೀವು ತೊಂದರೆಗೊಳಗಾಗಬಹುದು. ನಿಮ್ಮ ಮಕ್ಕಳಿಗಾಗಿ ಯೋಜನೆಗಳು ಮಾಡಲು ಅತ್ಯುತ್ತಮ ದಿನ. ತಮ್ಮ ಪ್ರೀತಿಪತ್ರರೊಡನೆ ಸಣ್ಣ ಪ್ರಯಾಣ ಕೈಗೊಳ್ಳುವವರು ಅತ್ಯಂತ ಸ್ಮರಣೀಯ ಸಮಯವನ್ನು ಹೊಂದುತ್ತಾರೆ.

### ಕನ್ಯಾ ರಾಶಿ

ಒತ್ತಡದ ಕೆಲಸದ ವೇಳಾಪಟ್ಟಿ ನಿಮ್ಮ ಸಹನೆಯನ್ನು ಕೆಣಕಬಹುದು. ವಿದೇಶಿ ಸಂಪರ್ಕಗಳನ್ನು ಹೊಂದಿರುವ ವ್ಯಾಪಾರಿಗಳಿಗೆ ಇಂದು ಹಣದ ನಷ್ಟವಾಗುವ ಸಾಧ್ಯತೆ ಇದೆ ಆದ್ದರಿಂದ ಇಂದು ಯೋಚಿಸಿ ಅರ್ಥಮಾಡಿಕೊಂಡು ನಡೆಯಿರಿ ನಿಮ್ಮ ಹಠಮಾರಿ ಪ್ರಕೃತಿ ನಿಮ್ಮ ಪೋಷಕರ ಶಾಂತಿಯನ್ನು ಹಾಳು ಮಾಡಬಹುದು. ನೀವು ಅವರ ಸಲಹೆಯನ್ನು ಪಾಲಿಸಬೇಕು. ಅವರಿಗೆ ನೋವುಂಟುಮಾಡದಿರಲು ಆಜ್ಞಾಧಾರಕರಾಗಿರುವುದು ಒಳ್ಳೆಯದು. ಪ್ರಣಯದ ನೆನಪುಗಳು ನಿಮ್ಮ ದಿನವನ್ನು ಆಕ್ರಮಿಸುತ್ತವೆ.

### ತುಲಾ ರಾಶಿ

ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು ಮತ್ತು ನೀವು ಹಣದ ಲಾಭವನ್ನು ಪಡೆಯಬಹುದು. ಶಿಶುವಿನ ಅನಾರೋಗ್ಯ ನಿಮ್ಮನ್ನು ವ್ಯಸ್ತವಾಗಿಡುತ್ತದೆ. ನೀವು ತಕ್ಷಣ ಗಮನ ನೀಡುವ ಅಗತ್ಯವಿರುತ್ತದೆ.

### ವೃಶ್ಚಿಕ ರಾಶಿ

ನೀವು ಧೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ಕೆಲವರಿಗೆ ಕುಟುಂಬದಲ್ಲಿ ಒಂದು ಹೊಸ ಆಗಮನ ಸಂಭ್ರಮಾಚರಣೆ ಮತ್ತು ಆನಂದದ ಕ್ಷಣಗಳನ್ನು ತೆರೆದಿಡುತ್ತದೆ. ಪ್ರೀತಿಪಾತ್ರರೊಡನೆ ಸಹಿತಿಂಡಿ ಮತ್ತು ಮಿಠಾಯಿ ಹಂಚಿಕೊಳ್ಳುವ ಸಾಧ್ಯತೆಯಿದೆ. ಇದು ನಿಮ್ಮನ್ನು ವ್ಯಕ್ತಪಡಿಸಲು ಮತ್ತು ಸೃಜನಶೀಲ ಸ್ವರೂಪದ ಯೋಜನೆಗಳಲ್ಲಿ ಕೆಲಸ ಮಾಡಲು ಒಳ್ಳೆಯ ಸಮಯ.

### ಧನು ರಾಶಿ

ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ನಿಮ್ಮ ಆರ್ಥಿಕ ಸ್ಥಿತಿ ಸುಧಾರಿಸಿದರೂ ಹಣದ ಹೊರಹರಿವು ನಿಮ್ಮ ಯೋಜನೆಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ತೊಂದರೆಯುಂಟುಮಾಡುತ್ತದೆ. ಕುಟುಂಬದ ಸದಸ್ಯರ ಖುಷಿಯ ಸ್ವಭಾವ ಮನೆಯಲ್ಲಿನ ವಾತಾವರಣವನ್ನು ಹಗುರಗೊಳಿಸುತ್ತದೆ. ನಿಮ್ಮ ಪ್ರೀತಿಯ ಜೀವನದಲ್ಲಿ ಕಹಿ ಘಟನೆಗಳನ್ನು ಕ್ಷಮಿಸಿ.

### ಮಕರ ರಾಶಿ

ಸ್ನೇಹಿತರ ಮೂಲಕ ದೊರಕುವ ಜ್ಯೋತಿಶ್ಯಾಸ್ತ್ರದ ಮಾರ್ಗದರ್ಶನ ನಿಮ್ಮ ಆರೋಗ್ಯವನ್ನು ಸುಧಾರಿಸಲು ನಿಮ್ಮನ್ನು ಉತ್ತೇಜಿಸುತ್ತದೆ. ನೀವು ಸ್ವಲ್ಪ ಹೆಚ್ಚುವರಿ ಹಣ ಮಾಡಲು ಯೋಜಿಸುತ್ತದ್ದಲ್ಲಿ ಸುಭದ್ರ ಆರ್ಥಿಕ ಯೋಜನೆಗಳಲ್ಲಿ ಹೂಡಿಕೆ ಮಾಡಿ. ಮನೆಯ ವಿಷಯಗಳು ಮತ್ತು ಬಾಕಿಯಿರುವ ಗೃಹಕೃತ್ಯಗಳನ್ನು ಪೂರೈಸಲು ಒಂದು ಅನುಕೂಲಕರ ದಿನ. ಇಂದು, ನೀವು ನಿಮ್ಮ ಪ್ರಿಯತಮೆ ನಿಮ್ಮನ್ನು ಎಷ್ಟು ಪ್ರೀತಿಸುತ್ತಾರೆಂದು ತಿಳಿದುಕೊಳ್ಳುತ್ತೀರಿ.

### ಕುಂಭ ರಾಶಿ

ನಿಮ್ಮ ಚೈತನ್ಯವನ್ನು ಪುನಃ ಸಂಪಾದಿಸಲು ವಿಶ್ರಾಂತಿ ತೆಗೆದುಕೊಳ್ಳಿ. ಆರ್ಥಿಕ ಭಾಗವು ಬಲಗೊಳ್ಳುವ ಪೂರ್ಣ ಸಾಧ್ಯತೆ ಇದೆ.ನೀವು ಯಾವುದೇ ವ್ಯಕ್ತಿಗೆ ಸಾಲ ನೀಡಿದ್ದರೆ, ಇಂದು ನೀವು ಆ ಹಣವನ್ನು ಮರಳಿ ಪಡೆಯುವ ನಿರೀಕ್ಷೆಯಿದೆ ನೀವು ಹೆಚ್ಚೇನೂ ಮಾಡದೇ ಇತರರ ಗಮನ ಸೆಳೆಯಲು ಇದೊಂದು ಪರಿಪೂರ್ಣ ದಿನ. ಪ್ರೀತಿಯ ಭಾವಪರವಶತೆಯನ್ನು ಅನುಭವಿಸಲು ಯಾರಾದರೂ ದೊರಕಬಹುದು.

### ಮೀನ ರಾಶಿ

ಆರೋಗ್ಯ ಪರಿಪೂರ್ಣವಾಗಿರುತ್ತದೆ. ಈ ರಾಶಿಚಕ್ರದ ವಿವಾಹಿತ ಜನರಿಗೆ ಇಂದು ಅತ್ತೆಮನೆಯ ಕಡೆಯಿಂದ ಹಣದ ಪ್ರಯೋಜನವಾಗುವ ಸಾಧ್ಯತೆ ಇದೆ. ಮನೆಯಲ್ಲಿನ ಕೆಲವು ಬದಲಾವಣೆಗಳು ನಿಮ್ಮನ್ನು ಭಾವುಕರನ್ನಾಗಿಸಬಹುದು– ಆದರೆ ನಿಮಗೆ ಮುಖ್ಯವಾದವರಿಗೆ ನೀವು ನಿಮ್ಮ ಭಾವನೆಗಳನ್ನು ಪರಿಣಾಮಕಾರಿಯಾಗಿ ಹೇಳಲು ಸಾಧ್ಯವಾಗುತ್ತದೆ.

# ಅಂಚೆ ಇಲಾಖೆ ಸೇವೆ ಸಮಾಜ ಕಡೆಯ ವ್ಯಕ್ತಿಗೂ ಲಭಿಸಲಿದೆ : ರಮೇಶ ಮಡಿವಾಳರ

**ಗದಗ:** ಸಮಾಜದ ಕಡೆಯ ವ್ಯಕ್ತಿಗೂ ವಿವಿಧ ಅಂಚೆಸೇವೆ ಕಲ್ಪಿಸುವ ಸದಾವಕಾಶ ಲಭಿಸಿದೆ ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ರಮೇಶ ಮಡಿವಾಳರ ಅಭಿಪ್ರಾಯಪಟ್ಟರು.

ಭಾರತೀಯ ಅಂಚೆ ಇಲಾಖೆಯ ಆಶ್ರಯದಲ್ಲಿ ಜೆ.ಟಿ.ಕಾಲೇಜ್ ಸಭಾ ಭವನದಲ್ಲಿ ಸೋಮವಾರ ನಡೆದ ಗದಗ ವಿಭಾಗೀಯ ವಿಭಾಗ ಮಟ್ಟದ ಪ್ರಶಸ್ತಿ ವಿತರಣೆ ನೆರವೇರಿಸಿ ಮಾತನಾಡಿ, ಪದವಿ ಸೇರಿದಂತೆ ವಿವಿಧ ಕ್ಷೇತ್ರದ ಜನರನ್ನು ಅಂಚೆ ಜೀವ ವಿಮೆ ಕ್ಷೇತ್ರದ ವ್ಯಾಪ್ತಿಗೆ ತರುವ ಮಹತ್ವ ಸದಾವಕಾಶ ಅಂಚೆ ಇಲಾಖೆಗೆ ಸಿಕ್ಕಿದೆ. ಈ ಯೋಜನೆ ಲಾಭ ಗ್ರಾಹಕರಿಗೆ ತಲುಪಿಸುವ ದಿಸೆಯಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಲು ಮುಂದಾಗಬೇಕು ಎಂದರು.

ಗ್ರಾಹಕರಿಗೆ ತಂತ್ರಜ್ಞಾನದ ಕೆಲವು ಉನ್ನತ ಅನುಕೂಲಗಳು ಮತ್ತು ಸೇವೆ ವಲಯದಲ್ಲಿ ಹೊಸ ನೀತಿ ರೂಪಿಸುವ ಸಲುವಾಗಿ ಕೇಂದ್ರ ಸರ್ಕಾರ ವಿವಿಧ ಮಹತ್ವದ ಯೋಜನೆಗಳನ್ನು ದೇಶದ ಎಲ್ಲೆಡೆ ಪರಿಚಯಿಸಲು ಅಂಚೆ ಇಲಾಖೆ



ಗದಗ ವಿಭಾಗೀಯ ವಿಭಾಗ ಮಟ್ಟದ ಪ್ರಶಸ್ತಿ ವಿತರಣೆ ಕಾರ್ಯಕ್ರಮವನ್ನು ಸಸಿಗೆ ನೀರುಣಿಸುವ ಮೂಲಕ ಗದಗ ವಿಭಾಗೀಯ ಅಂಚೆ ಅಧೀಕ್ಷಕ ರಮೇಶ ಮಡಿವಾಳರ ನೆರವೇರಿಸಿದರು. ಸಹಾಯ ಅಂಚೆ ಅಧೀಕ್ಷಕರಾದ ಶ್ರೀಕಾಂತ ಜಾದವ, ವಿ.ಸುನೀಲಕುಮಾರ, ವೆಂಕಟೇಶರಡ್ಡಿ ಕೊಳ್ಳಿ, ಮಂಜುಳಾ ದೇಗಿನಾಳ ಮತ್ತಿತರರು ಚಿತ್ರದಲ್ಲಿ ಇದ್ದಾರೆ.

ಬಗೆಗೆ ಒಲವು ತೋರುತ್ತವೆ . ಹಾಗಾಗಿ ಅಂಚೆ ಇಲಾಖೆ ಸಿಬ್ಬಂದಿ ಕೇಂದ್ರ ಸರ್ಕಾರ ಅಂಚೆ ಇಲಾಖೆಯ ಮೂಲಕ ವಿವಿಧ ಸೇವೆಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸುವ ಕೆಲಸದ ಹೊಣೆಗಾರಿಕೆಯನ್ನು ಗ್ರಾಹಕರ ವಿಶ್ವಾಸಾರ್ಹತೆಗೆ ತಕ್ಕಂತೆ ಸೇವೆ ನೀಡಲು ಮುಂದಾಗಬೇಕು ಎಂದರು.

ಪ್ರತಿಯೊಬ್ಬ ನೌಕರರು ನಿಮ್ಮ ಕುಟುಂಬದ ಆರೋಗ್ಯ ಮತ್ತು ಒಳ್ಳೆಯ ಹವ್ಯಾಸ ರೂಢಿಸಿಕೊಳ್ಳಬೇಕು. ಅಂದಾಗ ಮಾತ್ರ ನಮ್ಮ ಇಲಾಖೆ ಸಾಧನಾ ನಾಗಲೋಟ ದೇಶದ ಎಲ್ಲೆಡೆ ಪ್ರಚುರಪಡಿಸಲು ಅತ್ಯಂತ ಸಹಕಾರಿಯಾಗಿದೆ ಎಂದರು.

ರೋಣ ಉಪ ವಿಭಾಗ ಅಂಚೆ ನಿರೀಕ್ಷಕ ವೆಂಕಟೇಶರಡ್ಡಿ ಕೊಳ್ಳಿ ಮಾತನಾಡಿ, ರೋಣ ಉಪ ವಿಭಾಗದಪ್ರತಿಯೊಬ್ಬ ಉದ್ಯೋಗಿಗಳು ಪರಸ್ಪರ, ಪ್ರೀತಿ, ವಿಶ್ವಾಸ ಸ್ನೇಹಪರ ಪಾಲ್ಗೊಳ್ಳುವಿಕೆ ಕೆಲಸದಿಂದಾಗಿಗದಗ ವಿಭಾಗ ರಾಷ್ಟ್ರ ಹಾಗೂ ರಾಜ್ಯ , ವಲಯ ಮಟ್ಟದಲ್ಲಿ ಉನ್ನತ ಸ್ಥಾನ ಪಡೆಯಲು ಮತ್ತು ಹೆಸರು ಗಳಿಸಲು ಸಾಧ್ಯವಾಗಿದೆ ಎಂದರು.

ವಿವಿಧ ಕ್ಷೇತ್ರದಲ್ಲಿ ಸಾಧನೆ ತೋರಿದ ಸಾಧಕರ ಪರಿಶ್ರಮ ಅಪಾರವಾಗಿದೆ. ಹಾಗಾಗಿ ಇಲಾಖೆ ಸಿಬ್ಬಂದಿಗೆ ಸನ್ಮಾನಿಸಿ, ಗೌರವ ಹೆಚ್ಚೆಚ್ಚು ಕೆಲಸ ಮಾಡಲು ಪ್ರೇರಣೆ ಆಗಲಿದೆ. ಇನ್ನೂ ಮುಂಬರುವ ದಿನಗಳಲ್ಲಿ ಜನಸ್ನೇಹಿ ಯೋಜನೆಗಳನ್ನು ಗ್ರಾಹಕರಿಗೆ ತಲುಪಿಸುವ ಮೂಲಕ ಗದಗ ವಿಭಾಗೀಯ ಹೆಸರು ಮುಂಬರುವ ದಿನಗಳಲ್ಲಿ ಮುಂಚೂಣಿಯಲ್ಲಿ ಇರಲಿದೆ ಎಂದರು.

ಅಂಚೆ ಸಹಾಯಕ ಬಸವರಾಜ ಸೇಡದ ಮಾತನಾಡಿ, ಇದೇ 23 ರಂದು ಗದಗ ವಿಭಾಗೀಯ ಎಲ್ಲೆಡೆ

ಐಟಿ 2.0 ಅನುಷ್ಠಾನಕ್ಕೆ ಬರಲಿದೆ. ಮುಂಬರುವ ದಿನಗಳಲ್ಲಿ ಜನರಿಗೆ ಅತ್ಯಂತ ತ್ವರಿತ ಮತ್ತು

ತಂತ್ರಜ್ಞಾನದ ಸಹಾಯದೊಂದಿಗೆ ಗ್ರಾಹಕರ ವಿಶ್ವಾಸಾರ್ಹತೆ ಸೇವೆ ವಿಫಲ ಅವಕಾಶ ದೊರಕಿಸಲು ಮುಂದಾಗಿದೆ. ಈ ಕೆಲಸ ಪತ್ರ ಬಟವಾಟೆ ಸೇವೆ ಕ್ಷೇತ್ರದಲ್ಲಿ ಹೊಸ ಭಾಷ್ಯೆ ಆಗಲಿದೆ ಎಂದರು.

ಗದಗ ವಿಭಾಗೀಯ ಸಹಾಯಕ ಅಂಚೆ ಅಧೀಕ್ಷಕ ಶ್ರೀಕಾಂತ ಜಾದವ ಪ್ರಾಸ್ತವಿಕವಾಗಿ ಮಾತನಾಡಿ,

ಅಂಚೆ ಬಟವಾಡೆ ಜೊತೆಗೆ ಉಳಿತಾಯ ಖಾತೆ, ಆರ್.ಡಿ. ಗುಂಪು ವಿಮೆ ಮತ್ತು ವಿವಿಧ ವಿಮಾ ಯೋಜನೆಗಳು ಸೇರಿದಂತೆ ಹಲವು ಬ್ಯಾಂಕಿಂಗ್ ಸೌಲಭ್ಯಗಳನ್ನು ಅಂಚೆ ಇಲಾಖೆ ಜನರ ಮನೆ ಬಾಗಿಲಿಗೆ ತಲುಪಿಸಲಾಗುತ್ತಿದೆ. ಅವುಗಳನ್ನು ಸದ್ಬಳಕೆ ಮುಂದಾಗಬೇಕು ಎಂದರು.

ಗದಗ ವಿಭಾಗೀಯ ಸಹಾಯಕ ಅಂಚೆ ಅಧೀಕ್ಷಕರಾದ ಸುನೀಲಕುಮಾರ, ಪ್ರಧಾನ ಅಂಚೆ ಪಾಲಕರಾದ ಮಂಜುಳಾ.ಎನ್. ದಂಗಿನಹಾಳ ಮತ್ತಿತರರು ಇದ್ದರು. ಮೇಘಾ ಕುಲಕರ್ಣಿ ಪ್ರಾರ್ಥಿಸಿದರು. ಅನೀತಾ ಕುರಿ, ಸಂತೋಷ ಅಳಗುಂಡಿ ನಿರೂಪಿದರು. ಪ್ರಧಾನ ಅಂಚೆ ಉಪ ಅಂಚೆ ಪಾಲಕರಾದ ದೊಡ್ಡಪ್ಪ ಇಟಗಿ ವಂದಿಸಿದರು.

## ಯುವಜನತೆಯ ಉದ್ಯೋಗಕ್ಕಾಗಿ ಹೊಸ ಕಾರ್ಯಯೋಜನೆ: ಚಂದ್ರಭೂಪಾಲ

**ಶಿವಮೊಗ್ಗ:** ಯುವನಿಧಿ ಯೋಜನೆಯ ಫಲಾನುಭವಿ ಯುವಕ-ಯುವತಿಯರಿಗೆ ಭವಿಷ್ಯದಲ್ಲಿ ಅವರ ಸಾಮರ್ಥ್ಯಕ್ಕೆ ಅನುಸಾರವಾಗಿ ಯೋಗ್ಯ ಉದ್ಯೋಗವನ್ನು ಪಡೆಯಲು ಹಾಗೂ ಅವರನ್ನು ಸಮರ್ಥರನ್ನಾಗಿಸಲು ಮುಂದಿನ ದಿನಗಳಲ್ಲಿ ಪ್ರಾಧಿಕಾರದಿಂದ ಹೊಸ ಕಾರ್ಯ ಯೋಜನೆಯನ್ನು ರೂಪಿಸಲಾಗುತ್ತಿದೆ ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಸಿ.ಎಸ್. ಚಂದ್ರಭೂಪಾಲ ತಿಳಿಸಿದರು.

ಸೋಮವಾರ ನಗರದ ಜಿಲ್ಲಾ ಪಂಚಾಯತ್‌ನ ನಜೀರ್ ಸಾಬ್ ಸಭಾಂಗಣದಲ್ಲಿ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ವಾರ್ಷಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷರತೆ ವಹಿಸಿ ಅವರು ಮಾತನಾಡಿದರು.

ಕರ್ನಾಟಕ ರಾಜ್ಯ ಕೌಶಲ್ಯ ಅಭಿವೃದ್ಧಿ ನಿಗಮ, ಕೌಶಲ್ಯಾಭಿವೃದ್ದಿ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಟಾನ



ಪ್ರಾಧಿಕಾರದ ಮಾರ್ಗಸೂಚಿಯೊಂದಿಗೆ ಯುವನಿಧಿ ಫಲಾನುಭವಿಗಳನ್ನು ಉದ್ಯೋಗಸ್ಥರನ್ನಾಗಿ ಮಾಡಿ ಅವರ ಭವಿಷ್ಯವನ್ನು ರೂಪಿಸಲಾಗುವುದು.

ಈ ಉದ್ದೇಶದಿಂದ ಶಿವಮೊಗ್ಗ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರವು ಜಿಲ್ಲೆಯಲ್ಲಿನ ಫಲಾನುಭವಿಗಳಿಗೆ ಅನುಕೂಲವಾಗುವಂತೆ ಹಾಗೂ ಅವರ ಮುಂದಿನ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಉತ್ತಮ ಕಾರ್ಯಕ್ರಮವನ್ನು ರೂಪಿಸಲು ಸಿದ್ದತೆಗಳನ್ನು ಮಾಡಿಕೊಳ್ಳಲಾಗುತ್ತಿದೆ.

ಪದವೀಧರರು ಮತ್ತು ಡಿಪ್ಲೋಮಾ ವಿದ್ಯಾರ್ಥಿಗಳು ಸೇರಿದಂತೆ ಯುವನಿಧಿ ಯೋಜನೆಯಡಿ ಜಿಲ್ಲೆಯಲ್ಲಿ 6570 ಫಲಾನುಭವಿಗಳು ನೋಂದಣಿಯಾಗಿದ್ದು, ಫಲಾನುಭವಿಗಳ ಇಚ್ಛಾಶಕ್ತಿ ಹಾಗೂ ಅವರ ಸಾಮರ್ಥ್ಯಕ್ಕೆ ತಕ್ಕಂತೆ ಕೌಶಲ್ಯ ಅಭಿವೃದ್ದಿ ಕ್ಷೇತ್ರದ ಸಹಯೋಗದೊಂದಿಗೆ ವಿವಿಧ ರೀತಿಯ ತರಬೇತಿಯನ್ನು ನೀಡಲಾಗುತ್ತದೆ. ಆ ಮೂಲಕ ಅವರ ಭವಿಷ್ಯವನ್ನು ರೂಪಿಸುವ ದಿಟ್ಟ ಕಾರ್ಯಕ್ಕೆ ಮುಂದಾಗಿದ್ದು, ಈ ಯೋಜನೆ ಪೂರ್ವ ಕಲಿಕೆಯ ಆಧಾರದ ಮೇಲೆ ಶಿಕ್ಷಣ ಮುಗಿಸಿ ಹೊರಬಂದಿರುವ ಫಲಾನುಭವಿಗಳನ್ನು ಉದ್ಯೋಗಸ್ಥರನ್ನಾಗಿಸಲು ನೆರವಾಗಲಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರುಗಳು, ಜಿ.ಪಂ. ಸಿಇಓ ಎನ್. ಹೇಮಂತ್, ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

## ಖಾಸಗಿ ಕೃಷಿ ಕಾಲೇಜು ಆರಂಭಿಸಲು ಅರ್ಜಿ ಆಹ್ವಾನ

**ದಾವಣಗೆರೆ:** ಶಿವಮೊಗ್ಗದ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯಲ್ಲಿ 25-26ನೇ ಶೈಕ್ಷಣಿಕ ವರ್ಷಕ್ಕೆ ಖಾಸಗಿ ಕೃಷಿ ಕಾಲೇಜುಗಳ ಸಂಯೋಜನೆಗಾಗಿ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಜಿಯನ್ನು ಜುಲೈ 7 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ವಿವರ ಹಾಗೂ ನಿಬಂಧನೆಗಳು, ಅರ್ಜಿಗಾಗಿ ಜಾಲತಾಣವನ್ನು ವೀಕ್ಷಿಸಬಹುದು ದೂ.ಸಂ:08185-200728ನ್ನು ಸಂಪರ್ಕಿಸಲು ಕುಲಸಚಿವರಾಧ ಡಾ.ಕೆ.ಸಿ.ಶಶಿಧರ ತಿಳಿಸಿದ್ದಾರೆ.

## ವಿಶ್ವ ರಕ್ತದಾನಿಗಳ ದಿನಾಚರಣೆ

**ದಾವಣಗೆರೆ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಇಲಾಖೆ, ಜಿಲ್ಲೆಯ ಎಲ್ಲಾ ರಕ್ತ ಕೇಂದ್ರಗಳು, ಆರ್. ಆರ್.ಸಿ ಕಾಲೇಜುಗಳು ಮತ್ತು ವಿವಿಧ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಜೂನ್ 20 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಎಸ್.ನಿಜಲಿಂಗಪ್ಪ ಲೇಔಟ್, ರಿಂಗ್ ರೋಡ್ ಲೈಫ್ಲೈನ್ ರಕ್ತ ಕೇಂದ್ರ, ಕರ್ನಾಟಕ ಹಿಮೋಫೀಲಿಯಾ ಸೊಸೈಟಿ ಇಲ್ಲಿ ವಿಶ್ವರಕ್ತ ದಾನಿಗಳ ದಿನಾಚರಣೆಯನ್ನು ಆಯೋಜಿಸಲಾಗಿದೆ.

ಅಂದು ಬೆಳಿಗ್ಗೆ 9 ಗಂಟೆಗೆ ಚಿಗಟೇರಿ ಜಿಲ್ಲಾ ಆಸ್ಪತ್ರೆಯಿಂದ ಜಾಥಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕದ ಜಿಲ್ಲಾ ಕಾರ್ಯಕ್ರಮ ಅಧಿಕಾರಿ ತಿಳಿಸಿದ್ದಾರೆ.

## ಗೃಹರಕ್ಷಕ ದಳ ಸಿಬ್ಬಂದಿ ನೇಮಕಾತಿಗೆ ದೈಹಿಕ ಪರೀಕ್ಷೆ

**ದಾವಣಗೆರೆ:** ಜೂನ್ 18 ರಂದು ಮಧ್ಯಾಹ್ನ 1.30ಕ್ಕೆ ನಗರದ ಜಿಲ್ಲಾ ಪೊಲೀಸ್ ಸಶಸ್ತ್ರ ಮೀಸಲು ಪಡೆ ಕವಾಯತು ಮೈದಾನದಲ್ಲಿ ಜಿಲ್ಲೆಯ ವಿವಿಧ ತಾಲ್ಲೂಕು ಮತ್ತು ಉಪಘಟಕಗಳಲ್ಲಿ ಖಾಲಿ ಇರುವ 110 ಸ್ಥಾನಗಳಿಗೆ ನೂತನ ಗೃಹರಕ್ಷಕ ನೇಮಕಾತಿಗಾಗಿ ವಿವಿಧ ಘಟಕಗಳಿಂದ ಪುರಸ್ಕೃತಗೊಂಡಿರುವ 203 ಅಭ್ಯರ್ಥಿಗಳ ದೈಹಿಕ ಪರೀಕ್ಷೆಯನ್ನು ಜಿಲ್ಲಾ ಪೊಲೀಸ್ ಅಧೀಕ್ಷಕರು ಹಾಗೂ ಗೃಹ ರಕ್ಷಕದಳ ಆಯ್ಕೆ ಸಮಿತಿಯ ಅಧ್ಯಕ್ಷರು ನಡೆಸುವರು ಎಂದು ಜಿಲ್ಲಾ ಕಮಾಂಡೆಂಟ್ ಡಾ.ಸುಜಿತ್ ಕುಮಾರ್ ಎಸ್.ಹೆಚ್ ತಿಳಿಸಿದ್ದಾರೆ.

## ಸೂರು, ಸೌಲಭ್ಯಕ್ಕಾಗಿ ದಕ್ಕಲಿಗರ ಅಳಲು ಚಿಕ್ಕಮೇಗಳಗೆರೆ ದಕ್ಕಲಿಗರ ಕಾಲೊನಿಗೆ ಅಲೆಮಾರಿ ಒಕ್ಕೂಟದ ಭೇಟಿ



**ಮನೆ ಇಲ್ಲಾ ಸರ್ ಪಹಣಿ ಕೊಡಿಸಿ ಸರ್ ನಮ್ಮ ಕಾಲೋನಿಯಲ್ಲಿ ಕೇವಲ 40 ಮನೆಗಳಿದ್ದು ಸುಮಾರು 80 ಹೆಚ್ಚು ಕುಟುಂಬಗಳು ಒಂದು ಮನೆಯಲ್ಲಿ ಎರಡು, ಮೂರು ಕುಟುಂಬದಂತೆ ವಾಸಿಸುತ್ತಿವೆ. ಇಕ್ಕಟ್ಟಿನ ಮನೆಗಳಲ್ಲಿ ಬದುಕಲಾಗುತ್ತಿಲ್ಲ. ಹೆಚ್ಚುವರಿ ಮನೆ, ನಿವೇಶನ ಮಂಜೂರು ಮಾಡಿಸಿ ಕೊಡಿ ಎಂದು, ದಕ್ಕಲಿಗರ ಕಾಲೊನಿ ಮುಖಂಡ ರಾಮಣ್ಣ ಮನವಿ ಮಾಡಿದರು.**

**ಕಾಲೋನಿಯ ಕೆಲವರು ಒಂದು ಎರಡು ಎಕರೆ ತುಂಡುಭೂಮಿ ಉಳುಮೆ ಮಾಡಿ ಜೀವನ ನಡೆಸುತ್ತಿದ್ದು, ಸರಕಾರದಿಂದ ಹಕ್ಕು ಪತ್ರ ಪಹಣಿ ಸಿಕ್ಕಿರುವುದಿಲ್ಲ ಕಾರಣ ಸರಕಾರ ಸೌಲಭ್ಯ ದೊರಕುತ್ತಿಲ್ಲ ಸರ್ಕಾರ ಇಂದ ನಮಗೆ ಪಹಣಿ ಹಕ್ಕುಪತ್ರ ಕುಡಿಸಬೇಕು ಎಂದು ರಾಮಣ್ಣ ಮತ್ತಿತರರು ಅವಲತ್ತುಕೊಂಡರು**

**ಕಾಲೊನಿ ಮಕ್ಕಳಿಗೆ ಅಂಗನವಾಡಿ ಕೇಂದ್ರವಿಲ್ಲದೆ ಶಾಲಾ ಪೂರ್ವ ಶಿಕ್ಷಣ ದೊರೆಯುತ್ತಿಲ್ಲ. ಕಾಲೊನಿಗೆ ಗ್ರಾಮ ಪಂಚಾಯತಿ ಗ್ರಂಥಾಲಯ ಮಂಜೂರಾಗಿದ್ದರೂ ಕಟ್ಟಡವಿಲ್ಲದೇ ಅವ್ಯವಸ್ಥೆಯಾಗಿದೆ. ಸಣ್ಣ ಪುಟ್ಟ ಕಾರ್ಯಕ್ರಮ ನಡೆಸಲು ಸರ್ಕಾರದಿಂದ ಸಮುದಾಯ ಭವನ ನಿರ್ಮಿಸಿ ಅನುಕೂಲ ಕಲ್ಪಿಸಬೇಕು ಎಂದು ಯುವಕರು ಮನವಿ ಮಾಡಿದರು.**

**ದಾವಣಗೆರೆ;** ಸಮೀಪದ ಚಿಕ್ಕಮೇಗಳಗೆರೆ ದಕ್ಕಲಿಗರ ಕಾಲೊನಿಗೆ ಅಲೆಮಾರಿ ಒಕ್ಕೂಟದ ಸದಸ್ಯರು ಭೇಟಿ ನೀಡಿ ದಕ್ಕಲಿಗರ ಅಳಲು ಆಲಿಸಿದರು.

ಅಲೆಮಾರಿ ಒಕ್ಕೂಟದ ಜಿಲ್ಲಾ ಅಧ್ಯಕ್ಷ ಕತ್ತಲಗೆರೆ ತಿಪ್ಪಣ್ಣ ನೇತೃತ್ವದಲ್ಲಿ ಮಾನವ ಬಂಧುತ್ವ ವೇದಿಕೆಯ ಎ. ಬಿ. ರಾಮಚಂದ್ರಪ್ಪ, ವಕೀಲ ಅನಿಸ್ ಪಾಷಾ ಭೇಟಿ ನೀಡಿದರು.

ಅಲೆಮಾರಿ ಒಕ್ಕೂಟದ ಅಧ್ಯಕ್ಷ ಕತ್ತಲಗೆರೆ ತಿಪ್ಪಣ್ಣ ಮಾತನಾಡಿ, ಚಿಕ್ಕಮೇಗಳಗೆರೆ ದಕ್ಕಲಿಗ ಕಾಲೊನಿ ಜನ ದಶಕಗಳಿಂದ ಮೂಲಸೌಕರ್ಯ ವಂಚಿತರಾಗಿದ್ದರು. ಈಚೆಗೆಷ್ಟೇ

ಸರ್ಕಾರದಿಂದ ಕಾಂಕ್ರೀಟ್ ರಸ್ತೆ, ಬಾಕ್ಸ್ ಚರಂಡಿ ವ್ಯವಸ್ಥೆಯಾಗಿದೆ. ಕೆರೆಯ ನೀರು ಅವಲಂಭಿಸಿದ ಕಾಲೊನಿಗೆ ಅಂದಿನ ಜಿ.ಪಂ.ನ ಮುಖ್ಯ ಕಾರ್ಯದರ್ಶಿ ಜಿತೇಂದ್ರ ನಾಯಕ್ ಬೋರ್‌ವೆಲ್ ಹಾಕಿಸಿ ನೀರೊದಗಿಸಿದ್ದರು. ಕೆಲ ದಿನದ ಹಿಂದೆ ಹಿಂದುಳಿದ ವರ್ಗದ ಆಯೋಗದ ಅಧ್ಯಕ್ಷ ದ್ವಾರಕಿನಾಥ್ ಭೇಟಿ ನೀಡಿದಾಗ ಅವರೊಂದಿಗೆ ಶಾಸಕಿ ಲತಾ ಮಲ್ಲಿಕಾರ್ಜುನ ಕೂಡಾ ಭೇಡಿ ನೀಡಿ ಸಮಸ್ಯೆ ನೀಗುವ ಭರವಸೆ ನೀಡಿದ್ದರು. ಮತ್ತೊಮ್ಮೆ ಶಾಸಕರನ್ನೇ ಭೇಟಿ ಮಾಡಿ ಸಮಸ್ಯೆ ಪರಿಹಾರಕ್ಕಾಗಿ ಚರ್ಚಿಸೋಣ, ಎಂದು ಸಲಹೆ ಮಾಡಿದರು. ಮಾನವ ಬಂಧುತ್ವ ವೇದಿಕೆ ಸಂಚಾಲಕ ಎ.ಬಿ.ರಾಮಚಂದ್ರಪ್ಪ, ಹರಿಹರ ಹೆದ್ದಾರಿಯ ಪಕ್ಕದಲ್ಲಿರುವ ಬಿ. ಕೃಷ್ಣಪ್ಪ ಸಮುದಾಯ ಭವನದಲ್ಲಿ ಪರಿಶಿಷ್ಟ ಜಾತಿ ಬುಡಕಟ್ಟು ಯುವಕ ಯುವತಿಯರಿಗೆ, ವೃತ್ತಿ ಕೌಶಲ್ಯ ತರಬೇತಿ ನೀಡಲಾಗುತ್ತದೆ. ಯುವಕರು ಸದ್ಬಳಕೆ ಮಾಡಿಕೊಂಡು ಅರ್ಥಿಕ ಸಬಲರಾಗಬೇಕು, ಎಂದು ಕರೆನೀಡಿದರು.

ಹಿರಿಯ ವಕೀಲ ಅನೀಸ್ ಪಾಷಾ, ಸಂವಿಧಾನಾತ್ಮಕ ಹಕ್ಕುಗಳಿಗಾಗಿ ಶೋಷಿತ ಸಮುದಾಯದ ಯುವಕರು ಹೋರಾಡಬೇಕು ಎಂದರು.

## ದೇಶದ ಭವಿಷ್ಯ ಅಡಗಿರುವುದೇ ಸರಕಾರಿ ಶಾಲೆಗಳಲ್ಲಿ

**ಹಾಸನ** : ದೇಶದ ಭವಿಷ್ಯ ಅಡಗಿರುವುದೇ ಸರಕಾರಿ ಶಾಲೆಗಳಲ್ಲಿ, ಸರಕಾರಿ ಶಾಲೆಗಳು ಅಭಿವೃದ್ಧಿಯಾಗಿ, ಬಡ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ದೊರೆತಾಗ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ ಎಂದು ಸಾಮಾಜಿಕ ಪ್ರವೀಣ್ ಗೌಡ ಅಭಿಪ್ರಾಯಪಟ್ಟರು.

ತಾಲೂಕು ಯಾರನೇ ಗ್ರಾಮ ಹಾಗೂ ಬಾಚಿಹಳ್ಳಿ ಗ್ರಾಮದ ಸರ್ಕಾರಿ ಶಾಲೆಯ ಮಕ್ಕಳಿಗೆ ಉಚಿತ ನೋಟ್ ಬುಕ್ ಹಾಗೂ ಬ್ಯಾಗ್ ವಿತರಿಸಿ ಮಾತನಾಡಿದ ಅವರು, ಪ್ರಸಕ್ತ ಕಾಲಮಾನದಲ್ಲಿ ಅತಿಯಾದ ಹಾಗೂ ಅಜಾಗರೂಕತೆಯ ಮೊಬೈಲ್ ಬಳಕೆಯಿಂದ ಮಕ್ಕಳು ಬದುಕಿನಲ್ಲಿ ಪ್ರಬುದ್ಧತೆಯನ್ನು ಸಾಧಿಸುವಲ್ಲಿ ವಿಫಲರಾಗುತ್ತಿದ್ದಾರೆ. ಆದ್ದರಿಂದ ಮೊಬೈಲ್ ಬದಲು ಪುಸ್ತಕಗಳನ್ನು ಹಿಡಿಯಬೇಕು, ಜ್ಞಾನ ಸಂಪಾದಿಸಿ ಉತ್ತಮ ಭವಿಷ್ಯ ರೂಪಿಸಿಕೊಂಡು ದೇಶದ ಆಸ್ತಿಯಾಗಬೇಕು. ಅಂದಾಗ ಮಾತ್ರ ಬದುಕಿನಲ್ಲಿ



ಸಾರ್ಥಕತೆ ಕಾಣಲು ಸಾಧ್ಯ ಎಂದರು.

ಸರ್ಕಾರ ನೀಡುವ ಎಲ್ಲಾ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಂಡು ಉತ್ತಮ ರೀತಿಯ ಕಲಿಕೆಯಲ್ಲಿ ತೊಡಗಿಸಿಕೊಂಡಾಗ ಮಾತ್ರ ನಿಮ್ಮ ತಂದೆ ತಾಯಿ ಪರಿಶ್ರಮಕ್ಕೆ ಸಾರ್ಥಕತೆ ಸಲ್ಲುತ್ತದೆ ಎಂದರು.

ಈ ಸಂದರ್ಭದಲ್ಲಿ ಶಾಲಾ ಮುಖ್ಯ ಶಿಕ್ಷಕರು ಸೇರಿದಂತೆ ಪೋಷಕರು ಮಕ್ಕಳು ಹಾಜರಿದ್ದರು.

## ಆಯುರ್ವೇದಿಕ್ ಕಾಲೇಜ ಮುಂಡರಗಿಯಲ್ಲಿ ವಿಶ್ವ ರಕ್ತದಾನಿಗಳ ದಿನದ ಸಮಾರಂಭ

**ಗದಗ:** ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಆಯುರ್ವೇದಿಕ್ ಕಾಲೇಜ ಮುಂಡರಗಿ ಇವರುಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ರಕ್ತದಾನಿಗಳ ದಿನದ ಸಮಾರಂಭ ಕಾರ್ಯಕ್ರಮ ಜರುಗಿತು. ಸಮಾರಂಭವನ್ನು ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗಳಾದ ಡಾ. ಅರುಂಧತಿ ಕೆ ಉದ್ಘಾಟಿಸಿದರು.

ನಂತರ ಅವರು ಮಾತನಾಡಿ ರಕ್ತದಾನ ಶ್ರೇಷ್ಠದಾನ,

ರಕ್ತದಾನ ಜೀವದಾನ, ರಕ್ತದಾನ ಮಹಾದಾನ ಎನ್ನುವಂತೆ ಎಲ್ಲರೂ ಮೂರು ತಿಂಗಳಿಗೆ ಒಂದು ಸಾರಿ ರಕ್ತದಾನ ಮಾಡಬಹುದು, ರಕ್ತದಾನ ಮಾಡುವುದರಿಂದ ದೇಹದಲ್ಲಿ ಹೊಸ ರಕ್ತ ಉತ್ಪತ್ತಿಯಾಗಿ ದೇಹದಲ್ಲಿ ಚೈತನ್ಯ ಬರುವುದು. ಹಾಗಾಗಿ ಎಲ್ಲರೂ ರಕ್ತದಾನ ಮಾಡಿ ರಕ್ತದ ಕೊರತೆಯನ್ನು ನೀಗಿಸುವಲ್ಲಿ ಎಲ್ಲರು ಕೈ ಜೋಡಿಸಬೇಕೆಂದು ಹೇಳಿದರು.

**ಗೌರವಾನ್ವಿತ 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ದಾವಣಗೆರೆ**

**ಸಿ.ಆರ್.ಮಿಸ್ ನಂ: 2218/2025**

**ಅರ್ಜಿದಾರರು :**

1. ಶ್ರೀಮತಿ ಸುನಂದಮ್ಮ ಕೋಂ: ಶ್ರೀ ಚಂದ್ರಪ್ಪ ಬಿನ್: ಲೇಟ್ ಶ್ರೀ ಮಹದೇವಪ್ಪ ಪಿ.ಎಸ್. ವಯಸ್ಸು 60 ವರ್ಷ, ಗೃಹಿಣಿ, ಡೋರ್ ನಂ.237, ಹರಿಹರ ತಾಲ್ಲೂಕು, ಕುಣೆಬೆಳಕೆರೆ, ದಾವಣಗೆರೆ ಜಿಲ್ಲೆ.
2. ಶ್ರೀ ಗಣೇಶ ಪಿ.ಎಂ. ಬಿನ್: ಲೇಟ್ ಶ್ರೀ ಮಹದೇವಪ್ಪ ಪಿ.ಎಸ್. ವಯಸ್ಸು 58 ವರ್ಷ, ಎ-200, 1ನೇ ಮೇನ್, 7ನೇ ಕ್ರಾಸ್, ನೀರಿನ ಟ್ಯಾಂಕ್ ಹತ್ತಿರ, ಉಪಕಾರ್ ಸಾಲಿಟೈರ್ಸ್, ಅತ್ತಿಬೆಲೆ, ಬೆಂಗಳೂರು – 562 107.
3. ಶ್ರೀಮತಿ ಎಂ. ಸುಶೀಲ ಕೋಂ: ಶ್ರೀ ರಾಜಪ್ಪ ಸಿ. ಬಿನ್: ಲೇಟ್ ಶ್ರೀ ಮಹದೇವಪ್ಪ ಪಿ.ಎಸ್. ವಯಸ್ಸು 54 ವರ್ಷಗಳು, ಗೃಹಿಣಿ. ರಾಮಕೃಷ್ಣ ಹೆಗಡೆ ಬಡಾವಣೆ, ಅಜ್ಜಂಪುರ– 577 547 ಚಿಕ್ಕಮಗಳೂರು ಜಿಲ್ಲೆ.
4. ಶ್ರೀ ಸಿದ್ದೇಶ್ ಪಿ.ಎಮ್. ಬಿನ್: ಲೇಟ್ ಶ್ರೀ ಮಹದೇವಪ್ಪ ಪಿ.ಎಸ್. ವಯಸ್ಸು 50 ವರ್ಷಗಳು, ವ್ಯವಸಾಯಗಾರರು, ನೀಲಾನಹಳ್ಳಿ ಗ್ರಾಮ, ಹಳೇಬಾತಿ ಪೋಸ್ಟ್ – 577 566, ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ.

**ವಿರುದ್ಧ**

**ಎದುರುದಾರರು :** ಜನನ ಮತ್ತು ಮರಣ ನೋಂದಣಾಧಿಕಾರಿಗಳು. ದಾವಣಗೆರೆ ಮಹಾನಗರ ಪಾಲಿಕೆ, ದಾವಣಗೆರೆ.

**ಅರ್ಜಿದಾರರ ಪರ ನೀಡಲಾದ ಪ್ರಕಟಣಾ ನೋಟೀಸು**

ಈ ಮೇಲ್ಕಂಡ ಕೇಸಿನಲ್ಲಿ ಅರ್ಜಿದಾರರು, ಎದುರುದಾರರ ವಿರುದ್ಧ ಈ ಅರ್ಜಿಯನ್ನು ಸಲ್ಲಿಸಿದ್ದು ಅರ್ಜಿದಾರರ ತಾಯಿಯಾದ ಶ್ರೀಮತಿ ಪಾರ್ವತಮ್ಮ ಕೋಂ: ಲೇಟ್ ಶ್ರೀ ಮಹದೇವಪ್ಪ ಪಿ.ಎಸ್. ಇವರು ದಿನಾಂಕ: 22-2-1983 ರಂದು ಚಿಗಟೇರಿ ಸರ್ಕಾರಿ ಆಸ್ಪತ್ರೆ, ದಾವಣಗೆರೆಯಲ್ಲಿ ಮರಣ ಹೊಂದಿರುತ್ತಾರೆ. ಇವರ ಮರಣ ಪ್ರಮಾಣಪತ್ರವನ್ನು ಪಡೆಯುವ ಸಲುವಾಗಿ ಅರ್ಜಿದಾರರು ನ್ಯಾಯಾಲಯದಲ್ಲಿ ಮೇಲ್ಕಂಡ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಇದಕ್ಕೆ ಸಂಬಂಧಿಸಿದಂತೆ ಯಾರದಾದರೂ ಯಾವುದೇ ತಕರಾರು ಮತ್ತು ಆಕ್ಷೇಪಣೆಗಳಿದ್ದಲ್ಲಿ ದಿನಾಂಕ: 18-7-25 ರಂದು ಖುದ್ದು ಹಾಜರಾಗಿ ಆಕ್ಷೇಪಣೆಯನ್ನು ಸಲ್ಲಿಸತಕ್ಕದ್ದು, ತಪ್ಪಿದಲ್ಲಿ ಮೇಲ್ಕಂಡ ಪ್ರಕರಣವನ್ನು ಕಾನೂನು ರೀತ್ಯಾ ತೀರ್ಮಾನಿಸಲಾಗುವುದು.

ನ್ಯಾಯಾಲಯದ ಮುದ್ರೆ ಹಾಗೂ ಸಹಿಯೋಂದಿಗೆ ದಿನಾಂಕ: 16-06-2025 ರಂದು ನೀಡಲಾಗಿದೆ.

**ನ್ಯಾಯಾಲಯದ ಆದೇಶದ ಮೇರೆಗೆ**

ಸಹಿ/-
ಶಿರಸ್ತೇದಾರರು
ಮಾನ್ಯ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸಿ.ಜೆ.ಎಂ. ನ್ಯಾಯಾಲಯ,ದಾವಣಗೆರೆ

ಸಹಿ/
ಅರ್ಜಿದಾರರ ಪರ ವಕೀಲರು
(ಶ್ರೀ ಮಲ್ಲಿಕಾರ್ಜುನ ಕಣವಿ)

# ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ : ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ಚಿತ್ರದುರ್ಗ :** ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ನಿಯಮಿತದಿಂದ 2025–2026ನೇ ಸಾಲಿನ ಸಾಲ ಸೌಲಭ್ಯಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ವೀರಶೈವ ಲಿಂಗಾಯತ ಸಮುದಾಯ ಮತ್ತು ಅದರ ಉಪ ಜಾತಿಗಳಿಗೆ ಸೇರಿದ ರಾಜ್ಯದ ನಿವಾಸಿಗಳು ಶೈಕ್ಷಣಿಕ ಸಾಲ ಯೋಜನೆ ಬಸವ ಬೆಳಗು, ಜೀವಜಲ ಯೋಜನೆ(ಗಂಗಾ ಕಲ್ಯಾಣ), ಕಾಯಕ ಕಿರಣ ಯೋಜನೆ, ಭೋಜನಾಲಯ ಕೇಂದ್ರ, ವಿಭೂತಿ ನಿರ್ಮಾಣ ಘಟಕ, ವಾಣಿಜ್ಯ ಬ್ಯಾಂಕುಗಳು ಸಹಯೋಗದೊಂದಿಗೆ ಸ್ವಾವಲಂಬಿ ಸಾರಥಿ ಹಾಗೂ ಸ್ವಯಂ ಉದ್ಯೋಗ ಸಾಲ ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದು. ಚಾಲ್ತಿಯಲ್ಲಿರುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ ಕಡ್ಡಯವಾಗಿರುತ್ತದೆ, ವಯೋಮಿತಿ 18 ವರ್ಷಗಳಿಂದ 55 ವರ್ಷಗಳ ಮಿತಿಯಲ್ಲಿರಬೇಕು, ನಿಗಮದ ಅಥವಾ ಸರ್ಕಾರದ ಯವುದಾದರು ಯೋಜನೆಗಳಡಿ ಈ ಹಿಂದೆ ಸೌಲಭ್ಯ ಪಡೆದಿರಬಾರದು, ಕುಟುಂಬದ ಒಬ್ಬರಿಗೆ ಮಾತ್ರ ಸೌಲಭ್ಯ ಒದಗಿಸಲಾಗುವುದು. ಬಸವ ಬೆಳಗು ಯೋಜನೆಗೆ ವಿದ್ಯಾರ್ಥಿಗಳು ಸಿ.ಇ.ಟಿ/ನೀಟ್ ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಸರ್ಕಾರಿ ಕೋಟಾದ ಸೀಟು ಪಡೆದಿರಬೇಕು. ಜೀವಜಲ ಯೋಜನೆಗೆ ಕನಿಷ್ಠ 2ಎಕರೆ ಹಾಗೂ 5 ಎಕರೆ ಒಳಗೆ ಜಮಿನು ಹೊಂದಿರಬೇಕು. ಕಾಯಕ ಕಿರಣ ಯೋಜನೆಗೆ ಶೇ.4ರ ಬಡ್ಡಿದರದಲ್ಲಿ ಸಾಲ ಮಂಜೂರು ಮಾಡಲಾಗುವುದು, ಭೋಜನಾಲಯ ಕೇಂದ್ರಕ್ಕೆ ತಮ್ಮ ಸ್ವಂತ ಹೆಸರಿನಲ್ಲಿ ಕನಿಷ್ಠ 20*30 ಅಡಿ ಅಳತೆಯುಳ್ಳನಿವೇಶನ ಹೊಂದಿರಬೇಕು, ವಿಭೂತಿ ಘಟಕಕ್ಕೆ 40 ಸಾವಿರ ಸಹಾಯಧನ ದೊರೆಯುವುದು. ಸಾರಥಿ ಯೋಜನೆಗೆ 21 ರಿಂದ 45 ವರ್ಷಗಳ ಒಳಗಿರುವ ಅಭ್ಯಥಿಗಳು ಅರ್ಜಿ ಸಲ್ಲಿಸಬಹುದು, ಸ್ವಾತಂತ್ರ್ಯ ಅಮೃತ ಯೋಜನೆಗೆ ಅಭ್ಯರ್ಥಿಗಳು 18 ರಿಂದ 25 ವರ್ಷಗಳ ಒಳಗಿದ್ದು, ಕುಟುಂಬದ ವಾರ್ಷಿಕ ವರಮಾನ 08 ಲಕ್ಷಗಳಿಗಿಂತ ಕಡಿಮೆ ಇರಬೇಕು. ಈ ಯೋಜನೆಗೆ ಪೋರ್ಟ್‌ಲ್ **https://www.kaushalkar.com** ಮೂಲಕ ಅರ್ಜಿ ಸಲ್ಲಿಸಬೇಕು. ಉಳಿದ ಯೋಜನೆಗಳಿಗೆ ಸಾಲ–ಸೌಲಭ್ಯ ಧನಸಹಾಯ ಇಚ್ಚಿಸುವವರು ಸೇವಾ ಸಿಂಧು ಗ್ರಾಮಒನ್, ಬೆಂಗಳೂರು ಒನ್, ಕರ್ನಾಟಕ ಒನ್, ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಒಂದು ಬಾರಿ ಯಾವುದಾದರು ಯೋಜನೆಗಳಲ್ಲಿ ಪ್ರಯೋಜನೆ ಪಡೆದಿದ್ದಲ್ಲಿ ಅಂತವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯಕ್ಕೆ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. 2023–24 ಹಾಗೂ 2024–25ನೇ ಸಾಲಿಗೆ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದ ಫಲಾಪೇಕ್ಷಿತರು ಪುನಃ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಜುಲೈ 30 ಅರ್ಜಿ ಸಲ್ಲಿಸಲು ಕಡೆಯ ದಿನವಾಗಿದೆ. ಹೆಚ್ಚಿನ ಯೋಜನೆಗಳ ಮಾರ್ಗಸೂಚಿ, ಅಗತ್ಯ ಇರುವ ಶೈಕ್ಷಣಿಕ ಅರ್ಹತೆ, ವಯೋಮಾನ, ಕುಟುಂಬ ಆದಾಯ ಮಿತಿ ಸೇರಿದಂತೆ ಇತರೆ ಮಾಹಿತಿಗಾಗಿ ನಿಗಮದ ವೆಬ್ ಸೈಟ್ https://kvldcl.karnataka.gov.in ಸಂಪರ್ಕಿಸಬಹುದು. ನಿಗಮದ ದೂರವಾಣಿ ಸಂಖ್ಯೆ 080–220882 ಕರೆ ಮಾಡಬಹುದು ಎಂದು ಜಿಲ್ಲಾ ವ್ಯವಸ್ಥಾಪಕಿ ಹೆಚ್.ಶಿಲ್ಪಾ ತಿಳಿಸಿದ್ದಾರೆ.

# ಹಿರಿಯೂರು ನಗರ ಸಭೆ : ಆರ್ಥಿಕ ನೆರವಿಗೆ ಅರ್ಜಿ ಆಹ್ವಾನ

**ಚಿತ್ರದುರ್ಗ :** ಹಿರಿಯೂರು ನಗರ ಸಭೆ ವತಿಯಿಂದ 2025–26ನೇ ಸಾಲಿನ ನಗರ ಸಭೆ ನಿಧಿಯಡಿ ಶೇ.24.10, ಶೇ.7.25 ಹಾಗೂ ಶೇ.5 ರ ಯೋಜನೆಯಡಿ ಆರ್ಥಿಕ ನೆರವು ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಎಂ.ಬಿ.ಬಿ.ಎಸ್ ಬಿ.ಇ. ವ್ಯಾಸಾಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಲ್ಯಾಪಾಟಾಪ್ ಖರೀದಿಸಲು, ಎಲ್.ಎಲ್.ಬಿ ಪದವಿ ಹೊಂದಿರುವ ವೃತ್ತಿ ನಿರತ ವಕೀಲರುಗಳಿಗೆ ಪುಸ್ತಕ ಖರೀದಿಸಲು ಆರ್ಥಿಕ ನೆರವು ನೀಡಲಾಗುವುದು. ಇದರೊಂದಿಗೆ ಇತರೆ ಜನಾಂಗ ಹಾಗೂ ದಿವ್ಯಾಂಗರಿಗೆ ಅನಿಲ ಸಂಪರ್ಕದಡಿ ಒಂದು ಸ್ಟವ್ ಹಾಗೂ ಒಂದು ಸಿಲೆಂಡರ್, ದಿವ್ಯಾಂಗ ವಿಶೇಷ ಚೇತನರಿಗೆ ತ್ರಿಚಕ್ರ ವಾಹನ ಖರೀದಿಸಿ ನೀಡಲಾಗುವುದು. ಹಿರಿಯೂರು ನಗರ ಸಭೆ ವ್ಯಾಪ್ತಿಯ ಅರ್ಹರು ಜೂನ್ 26 ರ ಒಳಗೆ ಅರ್ಜಿ ಸಲ್ಲಿಸುವಂತೆ ಪೌರಾಯುಕ್ತ ಎ.ವಾಸಿಂ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಜೆಪಿ ಎಲ್ಲದರಲ್ಲಿಯೂ ರಾಜಕೀಯ ಮಾಡುತ್ತದೆ : ಸಿಎಂ ಸಿದ್ದರಾಮಯ್ಯ

**ಚಿಕ್ಕಬಳ್ಳಾಪುರ (ಗೌರಿಬಿದನೂರು):** ಬಿಜೆಪಿಯವರಿಗೆ ಸುಳ್ಳು ಹೇಳಿ ಜನರ ದಾರಿ ತಪ್ಪಿಸುವುದು ಮತ್ತು ರಾಜಕೀಯವಾಗಿ ರಾಜೀನಾಮೆ ಕೇಳುವುದು ಅಭ್ಯಾಸವಾಗಿದೆ. ಬಿಜೆಪಿ ಎಲ್ಲದರಲ್ಲೂ ರಾಜಕೀಯ ಮಾಡೇ ಮಾಡುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಗೌರಿಬಿದನೂರಿನ ಬೊಮ್ಮಸಂದ್ರ ಗ್ರಾಮ ಹೆಲಿಪ್ಯಾಡ್ ನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿ ದರು.

ಬಿಜೆಪಿ ವತಿಯಿಂದ ಮುಖ್ಯಮಂತ್ರಿಗಳ ರಾಜೀನಾಮೆ ಒತ್ತಾಯಿಸಿ ಪ್ರತಿಭಟನೆ ಕೈಗೊಂಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು ಕುಂಭಮೇಳದಲ್ಲಿ 40–50 ಜನ ಕಾಲ್ತುಳಿತದಲ್ಲಿ ಸತ್ತರು. ಆಗ ಅಲ್ಲಿನ ಮುಖ್ಯಮಂತ್ರಿಗಳ ರಾಜೀನಾಮೆ ಕೇಳಿದರೇ? ಸೇತುವೆಯೊಂದು ಉದ್ಘಾಟನೆಯಾದ ದಿನವೇ ಬಿದ್ದು 140 ಜನ ಸತ್ತರು ಆಗ ಪ್ರಧಾನಿಗಳ ರಾಜಿನಾಮೆ ಕೇಳಿದರೇ ? ಗೋಧ್ರಾ ಹತ್ಯಾ ಕಾಂಡದಲ್ಲಿ ಎಷ್ಟು ಜನ ಸತ್ತರು. ಆಗ ಗುಜರಾತ್ ಮುಖ್ಯಮಂತ್ರಿಗಳು ಯಾರಾಗಿದ್ದರು? ಅವರ ರಾಜಿನಾಮೆ ಕೇಳಿದರೇ? ಕೋವಿಡ್ ಸಂದರ್ಭದಲ್ಲಿ ಆಕ್ಸಿಜನ್ ಸರಬರಾಜು ಮಾಡದೇ 23 ಜನ ಸತ್ತಾಗ ಬಸವರಾಜ ಬೊಮ್ಮಾಯಿ ರಾಜಿನಾಮೆ ನೀಡಿದರೆ ಎಂದು ಮುಖ್ಯಮಂತ್ರಿಗಳು ಪ್ರಶ್ನಿಸಿದರು.

ಬಿಜೆಪಿಯವರು ರಾಜಕೀಯವಾಗಿ ರಾಜಿನಾಮೆ ಕೊಡಿ ಎಂದು ಕೇಳುತ್ತಿದ್ದಾರೆ. ಇದರಲ್ಲಿ ಯಾವುದೇ ಸತ್ಯಾಂಶ ಇಲ್ಲ ಎಂದರು.



ಇಡಿ ಯವರು ದಾಳಿ ಮಾಡಿದ್ದು ಯಾವುದೇ ಕಾನೂನಿನ ಉಲ್ಲಂಘನೆಯಾಗಿದ್ದರೆ ಅದಕ್ಕೆ ನಾವು ಬೆಂಬಲಿಸುವುದಿಲ್ಲ. ಕಾನೂನು ಪ್ರಕಾರವಾಗಿ ಕ್ರಮ ಕೈಗೊಳ್ಳಲಿ. ಕಾನೂನಿನ ಅನುಷ್ಠಾನಕ್ಕೆ ಅಡ್ಡಿಪಡಿಸುವುದಿಲ್ಲ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಜಾತಿ ಗಣತಿ ಬಗ್ಗೆ ಕೆಲವು ದೂರುಗಳು ಬಂದಿವೆ. ಸಮೀಕ್ಷೆ ನಡೆದು 11 ವರ್ಷಗಳಾಗಿದ್ದು, ಹಳೆಯ ದಾಗಿದೆ. ಈ ಹಿನ್ನೆಲೆಯಲ್ಲಿ ಪಕ್ಷದ ವರಿಷ್ಠರು ಕಡಿಮೆ ಅವಧಿಯಲ್ಲಿ ಮರುಗಣತಿ ಕೈಗೊಳ್ಳಲು ಸೂಚಿಸಿದ್ದಾರೆ. ವರದಿಯನ್ನು ನಾವು ತಿರಸ್ಕರಿಸುವುದಿಲ್ಲ. ತಾತ್ವಿಕವಾಗಿ ವರದಿಯನ್ನು ಒಪ್ಪಿಕೊಳ್ಳ ಲಾಗಿದೆ ಎಂದರು.

**ಗ್ರೇಟರ್ ಬೆಂಗಳೂರಿಗೆ ತುಮಕೂರು: ಸಚಿವ ಸಂಪುಟದಲ್ಲಿ ಚರ್ಚೆ:** ತುಮಕೂರು ಜಿಲ್ಲೆಯನ್ನು ಬೆಂಗಳೂರು ಉತ್ತರ ಎಂದು ನಾಮಕರಣ ಮಾಡಲು ಗೃಹ ಸಚಿವ ಜಿ.ಪರಮೇಶ್ವರ್ ಅವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಸಚಿವ ಸಂಪುಟದ ಮುಂದೆ ಬಂದಾಗ ಪರಿಶೀಲಿಸಲಾಗುವುದು ಎಂದರು.

**30 ದಿನಗಳಲ್ಲಿ ವರದಿ :** ಕಾಲ್ತುಳಿತ ಪ್ರಕರಣದಲ್ಲಿ ಅನೇಕ ಆಯೋಗ ರಚನೆಯಾಗಿದ್ದು ಇವು ತಾರ್ಕಿಕ ಅಂತ್ಯ ಕಾಣುವುದೇ ಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿ, ತನಿಖೆ ಕೈಗೊಳ್ಳಲು ಏಕ ವ್ಯಕ್ತಿ ಆಯೋಗ ರಚನೆ ಮಾಡಿದ್ದು ಅದು 30 ದಿನಗಳಲ್ಲಿ ವರದಿ ಸಲ್ಲಿಸಲಿದೆ. ಈ ಬಗ್ಗೆ ಮಾತನಾಡಲು ಇಚ್ಛಿಸುವುದಿಲ್ಲ ಎಂದರು.

**ಪಕ್ಷದ ವರಿಷ್ಠರ ತೀರ್ಮಾನ :** ಕಾಂತರಾಜ ಆಯೋಗ ವರದಿ ಬಗ್ಗೆ ಪಕ್ಷದ ವರಿಷ್ಠರ ನಿರ್ಧಾರ ಮುಖ್ಯಮಂತ್ರಿಗಳಿಗೆ ನಿರಾಸೆ ತಂದಿದೆ ಎಂದು ಸುದ್ದಿಗಾರರು ಕೇಳಿದ ಪ್ರಶ್ನೆಗೆ ಉತ್ತರಿಸಿ ಪಕ್ಷದ ವರಿಷ್ಠರು ನಿರ್ಧಾರ ಮಾಡಿದಂತೆ ನಾವು ಕ್ರಮ ಕೈಗೊಳ್ಳುತ್ತೇವೆ. ಇದು ನಮ್ಮ ತೀರ್ಮಾನವಲ್ಲ ಎಂದರು.

**ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ಸರ್ಕಾರ ಒತ್ತು ನೀಡಿದೆ :** ರಾಜ್ಯದ ವಿಶ್ವ ವಿದ್ಯಾನಿಲಯಗಳಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾತನಾಡಿ ಖಾಲಿ ಇರುವಡೆಗಳಲ್ಲಿ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಲಾಗಿದೆ. ಇನ್ನು ಹೆಚ್ಚಿನ ಉಪನ್ಯಾಸಕರನ್ನು ನೇಮಕ ಮಾಡಲಾಗುವುದು, ಅವರ ವೇತನವನ್ನು ಹೆಚ್ಚಿಸಿ, ಸೌಲಭ್ಯಗಳನ್ನು ನೀಡಲಾಗಿದೆ. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ನಮ್ಮ ಸರ್ಕಾರ ಒತ್ತು ನೀಡಿದೆ ಎಂದರು.

ಮೋದಿಯಿಂದ ದೇಶದ ಬಡತನ ಕಡಿಮೆಯಾಗಿಲ್ಲ

ಮೋದಿ ಆಡಳಿತದಲ್ಲಿ ದೇಶದಲ್ಲಿ ಬಡತನ ಕಡಿಮೆಯಾಗಿದೆ ಎಂಬ ವರದಿಯ ಬಗ್ಗೆ ಪ್ರತಿಕ್ರಿಯೆ ನೀಡಿ ಬಡತನ ಅವರಿಂದ ಕಡಿಮೆಯಾಗಿಲ್ಲ. ಬಡತನ ಹೋಗಲಾಡಿಸಲು ಅವರೇನು ಮಾಡಿದ್ದಾರೆ? ಗರೀಬಿ ಹಟಾವೋ ಸೇರಿದಂತೆ ಹಲವಾರು ಕಾರ್ಯಕ್ರಮಗಳಿಂದ ಬಡತನ ಕಡಿಮೆಯಾಗಿದೆ ಎಂದರು.

**ರಾಜ್ಯದ ಅಭಿವೃದ್ಧಿ ದೃಷ್ಟಿಯಿಂದ ಕೇಂದ್ರ ಪುರಸ್ಕೃತ ಯೋಜನೆಗಳ ಅನುಷ್ಠಾನ :** ಜಲ ಜೀವನ್ ಯೋಜನೆಯಡಿ ರಾಜ್ಯ ಸರ್ಕಾರ 50% ಅನುದಾನ ನೀಡಿದ್ದಾರೆ 30% ಮಾತ್ರ ಕೇಂದ್ರ ಸರ್ಕಾರ ನೀಡುತ್ತದೆ. 20% ಫಲಾನುಭವಿಗಳು ನೀಡುತ್ತಾರೆ. ರಾಷ್ಟ್ರೀಯ ಆರೋಗ್ಯ ಮಿಷನ್ ಯೋಜನೆಯಡಿ ರಾಜ್ಯ ಸರ್ಕಾರದ ಪಾಲು ಹೆಚ್ಚಿದ್ದರೂ ಆಯುಷ್ಮಾನ್ ಭಾರತ್ ಯೋಜನೆ ಎನ್ನುತ್ತಾರೆ. ಅನೇಕ ಕೇಂದ್ರ ಪುರಸ್ಕೃತ ಯೋಜನೆಗಳಲ್ಲಿ ಪ್ರಧಾನ ಮಂತ್ರಿಗಳ ಹೆಸರಿರುತ್ತದೆ. ಕುಸುಮ್ ಬಿ ಯೋಜನೆಯಡಿ 30% ಕೇಂದ್ರದಿಂದ ಬರುತ್ತದೆ. ಒಪ್ಪದೇ ಹೋದರೆ ಅದೂ ಬರುವುದಿಲ್ಲ. ರೈತರಿಗೆ ಒಳ್ಳೆಯದಾಗಬೇಕು, ಗ್ರಾಮೀಣ ಪ್ರದೇಶದಲ್ಲಿ ಅಭಿವೃದ್ಧಿಯಾಗಬೇಕೆಂಬ ಉದ್ದೇಶದಿಂದ ಇದನ್ನು ಒಪ್ಪಿಕೊಳ್ಳಬೇಕಾಗುತ್ತದೆ ಎಂದರು.

ಎರಡು ವರ್ಷಗಳಲ್ಲಿ ಎತ್ತಿನಹೊಳೆ ಯೋಜನೆ ಪೂರ್ಣವಾಗಲಿದೆ

ಎತ್ತಿನಹೊಳೆ ಯೋಜನೆ ಎರಡು ವರ್ಷಗಳಲ್ಲಿ ಮುಕ್ತಾಯವಾಗಬಹುದು ಎಂದು ತಿಳಿಸಿದ ಮುಖ್ಯ ಮಂತ್ರಿಗಳು, ಈ ಭಾಗದ ಸಚಿವರು, ಶಾಸಕರು, ಹಾಗೂ ಅಧಿಕಾರಿಗಳ ಸಭೆಯನ್ನು ಕರೆಯಲಾಗಿದೆ ಎಂದರು.

ರಾಜ್ಯದ ಆರ್ಥಿಕ ಪರಿಸ್ಥಿತಿ ಚೆನ್ನಾಗಿದೆ

ರಾಜ್ಯದ ಆರ್ಥಿಕ ಪರಿಸ್ಥಿತಿ ಚೆನ್ನಾಗಿದೆ. ಗ್ಯಾರಂಟಿ ಯೋಜನೆ ಹಾಗೂ ಅಭಿವೃದ್ಧಿ ಕಾರ್ಯಕ್ರಮ ಗಳಿಗೂ ಅನುದಾನ ಒದಗಿಸಲಾಗಿದೆ ಎಂದು ಮಾಧ್ಯಮಗಳ ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಕಳೆದ ವರ್ಷ 52000 ಕೋಟಿ ರೂ.ಗಳ ಬಂಡವಾಳ ವೆಚ್ಚ ಇತ್ತು. ಈ ವರ್ಷ 83 ಸಾವಿರ ಕೋಟಿಯಾಗಿದೆ ಎಂದರು. 31000 ಕೋಟಿ ಬಂಡವಾಳ ವೆಚ್ಚ ಒಂದು ವರ್ಷದಲ್ಲಿ ಹೆಚ್ಚಾಗಿದೆ. ಹೀಗಿರುವಾಗ ಸರ್ಕಾರ ದಿವಾಳಿ ಹೇಗೆ ಆಗುತ್ತದೆ. ಗ್ಯಾರಂಟಿ ಯೋಜನೆಗಳಿಗೆ ಐವತ್ತು ಸಾವಿರಕ್ಕೂ ಹೆಚ್ಚು ಅನುದಾನ ಒದಗಿಸಲಾಗಿದೆ ಎಂದರು.

ಎರಡು ವರ್ಷಗಳಲ್ಲಿ 242 ಭರವಸೆಗಳನ್ನು ಈಡೇರಿಸಿದೆ

ನಮ್ಮ ಸರ್ಕಾರ ಎರಡು ವರ್ಷಗಳಲ್ಲಿ 593 ಭರವಸೆಗಳಲ್ಲಿ 242 ಭರವಸೆಗಳನ್ನು ಈಡೇರಿಸಿದ್ದು, ಕೇಂದ್ರ ಸರ್ಕಾರ 600 ಭರವಸೆಗಳನ್ನು ನೀಡಿ ಶೇ.10ರಷ್ಟನ್ನೂ ಅನುಷ್ಠಾನ ಮಾಡಿಲ್ಲ ಎಂದರು.

# 2 ಕೋಟಿ ರೂ.ವೆಚ್ಚದ ರಸ್ತೆ ಕಾಮಗಾರಿಗೆ ಶಾಸಕರಿಂದ ಭೂಮಿಪೂಜೆ

**ಮೊಳಕಾಲ್ಮೂರು :** ತಾಲೂಕಿನಲ್ಲಿ ಹಲವಾರು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡು ಪ್ರಗತಿಯತ್ತ ಕೊಂಡೊಯ್ಯಲಾಗುವುದೆಂದು ಶಾಸಕ ಎನ್.ವೈ.ಗೋಪಾಲಕೃಷ್ಣ ತಿಳಿಸಿದರು.

ತಾಲೂಕಿನ ಸೂರಮ್ಮನಹಳ್ಳಿ ಗ್ರಾಮದ ಬಳಿಯ ಚಿಕ್ಕೋಬನಹಳ್ಳಿ ಯಿಂದ ತುಮಕೂರ್ಲಹಳ್ಳಿ , ಉಡೇವು , ಜಿಲ್ಲಾ ಮುಖ್ಯ ತುಮಕೂರ್ಲಹಳ್ಳಿ ಗ್ರಾಮದಿಂದ ಹರವಿನದೊಡ್ಡಿವರೆಗೆ ರಸ್ತೆಗೆ ಸಂಪರ್ಕ ಕಲ್ಪಿಸುವ 2. ಕೋಟಿ ರೂ.ವೆಚ್ಚದ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.



ಕ್ಷೇತ್ರದ ಎಲ್ಲಾ ಹೋಬಳಿಗಳಲ್ಲೂ ಸಾಕಷ್ಟು ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡಲಾಗಿದ್ದು, ತಾಲೂಕಿನಲ್ಲಿಯೂ ಹೆಚ್ಚಿನ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು. ಈ ಕಾಮಗಾರಿಗಳಿಗೆ ಭೂಮಿ ಪೂಜೆ ನೆರ 'ವೇರಿಸಲಾಗಿದ್ದು, ಗುತ್ತಿಗೆದಾರರು ನಿಗಧಿತ ಸಮಯದಲ್ಲಿ ಗುಣಮಟ್ಟದ ಕಾಮಗಾರಿಯನ್ನು ಕೈಗೊಂಡು ಪೂರ್ಣಗೊಳಿಸಿ ಈ ಗ್ರಾಮಗಳಿಗೆ ಸಂಪರ್ಕ ಹೊಂದುವ ಗ್ರಾಮಸ್ಥರ ಬಳಕೆಗೆ ನೀಡಬೇಕಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ತಾಲೂಕಿನ ಚಿಕ್ಕುಂತಿ ಹತ್ತಿರದ ಜಿನಗಿ ಹಳ್ಳಕ್ಕೆ 2 ಕೋಟಿ ರೂ. ವೆಚ್ಚದಲ್ಲಿ ಚೆಕ್ ಡ್ಯಾಂ ನಿರ್ಮಾಣದ ಕಾಮಗಾರಿಗೆ ಹಾಗೂ ತಾಲೂಕಿನ ಸಿದ್ದಯ್ಯನಕೋಟೆ (ಹೊಸ್ಸೂರು) ಗ್ರಾಮದ ರಾಜ್ಯ ಹೆದ್ದಾರಿ –ಸಿ2 ಸಿದ್ದಯ್ಯನಕೋಟೆ ಯಿಂದ ಯರ್ರೇನಹಳ್ಳಿ ಕ್ರಾಸ್ ವರೆಗೆ 2 ಕೋಟಿ ರೂ.ಅನುದಾನದಲ್ಲಿ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿಯ ಭೂಮಿ ಪೂಜೆ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ಪಿ.ಡಬ್ಲ್ಯೂ.ಡಿ. ಯ ಲಕ್ಷ್ಮಿನಾರಾಯಣ, ಸಣ್ಣ ನೀರಾವರಿ ಇಲಾಖೆಯ ಅಣ್ಣಪ್ಪ, ಸಹಾಯಕ ಅಭಿಯಂತರ ಜಿ.ರಮೇಶ್, ಗುತ್ತಿಗೆದಾರರಾದ ಎಸ್. ಖಾದರ್, ಶ್ರೀರಾಮುಲು, ಮುಖಂಡರಾದ ಸೂರಮ್ಮನಹಳ್ಳಿ ಪಾಲಯ್ಯ, ಸೂರಮ್ಮನಹಳ್ಳಿ ನಾಗರಾಜ್, ಗ್ರಾ.ಪಂ.ನ ಸದಸ್ಯ ರಾಮರೆಡ್ಡಿ, ಬಿ.ಟಿ.ನಾಗಭೂಷಣ, ಶ್ರೀನಿವಾಸ್, ಬೋರಯ್ಯ, ಶಿವಲಿಂಗ, ಗೋಪಾಲ, ಕಾಂತರಾಜ್, ಕೆ.ಬಸಣ್ಣ, ಜಿ.ಪಿ.ಸುರೇಶ್, ಸಿದ್ದಪ್ಪ, ಶಾಸಕರ ಆಪ್ತ ಸಹಾಯಕ ಶ್ರೀಕಾಂತ, ಗುತ್ತಿಗೆದಾರ ಸಂಘದ ಅಧ್ಯಕ್ಷ ಗೋವಿಂದಪ್ಪ, ಗುತ್ತಿಗೆದಾರ ಮಹಮದ್ ಯೂನೀಸ್, ಜಿಲ್ಲು, ಸೂರಮ್ಮನಹಳ್ಳಿ, ಚಿಕ್ಕೂಂತಿ ಹಾಗೂ ಸಿದ್ಯನಕೋಟೆ ಗ್ರಾಮಗಳ ಮುಖಂಡರು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

# 60 ಕೋಟಿ ರೂ ಮೌಲ್ಯದ ಅಕ್ರಮ ಆಸ್ತಿ ಗಳಿಕೆ: ಎಸಿಬಿ ದಾಳಿ, ತೆಲಂಗಾಣ ಎಂಜಿನೀಯರ್ ಅಂದರ್



**ಹೈದರಾಬಾದ್ :** ತೆಲಂಗಾಣ ನೀರಾವರಿ ಇಲಾಖೆಯ ಎಕ್ಸಿಕ್ಯೂಟಿವ್ ಇಂಜಿನಿಯರ್ ನೂನೆ ಶ್ರೀಧರ್ ಅವರು 60 ಕೋಟಿ ರೂ ಮೌಲ್ಯದ ಅಕ್ರಮ ಆಸ್ತಿ ಗಳಿಸಿದ್ದಾರೆ ಎಂಬ ಆರೋಪ ಕೇಳಿಬಂದಿದೆ.

ಎಸಿಬಿ ಅಧಿಕಾರಿಗಳು ದಾಳಿ ನಡೆಸಿ ಅವರ ಆಸ್ತಿಯನ್ನು ಪತ್ತೆ ಮಾಡಿದ್ದಾರೆ. ಒಂದು ವಿಲ್ಲಾ, ಹಲವು ಫ್ಲಾ ್ಯಟ್‌ಗಳು, ವಾಣಿಜ್ಯ ಸ್ಥಳ, ಸ್ವತಂತ್ರ ಕಟ್ಟಡಗಳು, 16 ಎಕರೆ ಕೃಷಿ ಭೂಮಿ, 19 ನಿವೇಶನಗಳು, ಎರಡು ಕಾರುಗಳು, ಚಿನ್ನಾಭರಣ ಮತ್ತು ಬ್ಯಾಂಕ್ ಠೇವಣಿಗಳು ಸೇರಿವೆ. ಶ್ರೀಧರ್ ಅವರು ತಮ್ಮ ಅಧಿಕಾರವನ್ನು ದುರುಪಯೋಗಪಡಿಸಿಕೊಂಡು ಅಕ್ರಮವಾಗಿ ಆಸ್ತಿ ಸಂಪಾದಿಸಿದ್ದಾರೆ ಎಂದು ಎಸಿಬಿ ಹೇಳಿದೆ.

ನೂನೆ ಶ್ರೀಧರ್ ಅವರನ್ನು ಬಂಧಿಸಲಾಗಿದೆ. ಅವರು ಅಕ್ರಮವಾಗಿ ಆಸ್ತಿ ಗಳಿಸಿದ ಆರೋಪ ಎದುರಿಸುತ್ತಿದ್ದಾರೆ. ಅವರ ಆದಾಯಕ್ಕಿಂತ ಹೆಚ್ಚಿನ ಆಸ್ತಿ ಹೊಂದಿರುವುದು ತನಿಖೆಯಿಂದ ತಿಳಿದುಬಂದಿದೆ.

ಶ್ರೀಧರ್ ಅವರು ಅಕ್ರಮವಾಗಿ ಆಸ್ತಿ ಗಳಿಸಲು ಕಾನೂನುಬಾಹಿರ ಚಟುವಟಿಕೆಗಳಲ್ಲಿ ಮತ್ತು ಅನುಮಾನಾಸ್ಪದ ಮಾರ್ಗಗಳನ್ನು ಅನುಸರಿಸಿದ್ದಾರೆ

# ಮಕ್ಕಳ ಬಲವಂತದ ಮದುವೆಗಳು ಮದುವೆಗಳಲ್ಲ. ಪೋಷಕರು ಬದಲಾಗಬೇಕು

**ಚಿತ್ರದುರ್ಗ:** ಮಕ್ಕಳ ಬಲವಂತದ ಮದುವೆಗಳು ಗ್ರಾಮೀಣ ಮಟ್ಟದಲ್ಲಿ ಇನ್ನೂ ಚಾಲತಿಯಲ್ಲಿವೆ, ಪೋಷಕರು ಇದರ ಬಗ್ಗೆ ಗಮನಹರಿಸಿ, ಬಲವಂತದ ಮದುವೆಗಳನ್ನ ಮಾಡುವುದಕ್ಕಿಂತ ಮಕ್ಕಳನ್ನು ಅವಿವಾಹಿತರಾಗಿ ಸಾಕುವುದೇ ಉತ್ತಮ, ವರದಕ್ಷಿಣೆ ನೀಡಿ ಮಕ್ಕಳನ್ನ ಮದುವೆ ಮಾಡುವುದಕ್ಕಿಂತ, ನಾನು ನನ್ನ ಮಗಳನ್ನು ಜೀವನಪರ್ಯಂತ ಸಾಕುತ್ತೇನೆ ಎಂದು ಗಾಂಧೀಜಿಯವರು ಅಂದು, ವರದಕ್ಷಿಣೆ ವಿರುದ್ಧ ಹೋರಾಟವನ್ನು ಮಾಡಿದ್ದರು, ಅದೇ ರೀತಿ ಪೋಷಕರು ಹೆಣ್ಣುಮಕ್ಕಳನ್ನು ಭಾರ ಎಂದುಕೊಳ್ಳದೆ, ಅವರನ್ನ ಕೊನೆಯವರೆಗೂ ಸಾಕುತ್ತೇವೆ ಎಂದು ಧೈರ್ಯ ತೆಗೆದುಕೊಂಡಾಗ ಮಾತ್ರ, ಈ ಬಾಲ್ಯ ವಿವಾಹ, ಬಲವಂತದ ಮದುವೆಗಳು ನಿಲ್ಲಿಸಲು ಸಾಧ್ಯವಾಗುತ್ತದೆ. ಇದರ ಬಗ್ಗೆ ಸಮಾಜ ಸುಧಾರಕರು, ಸಂಘ–ಸಂಸ್ಥೆಗಳು, ಸಮಾಜ ಕಲ್ಯಾಣ ಇಲಾಖೆಗಳು, ಜನಪ್ರತಿನಿಧಿಗಳು, ಗ್ರಾಮೀಣ ಮಟ್ಟದಲ್ಲಿ ಜನರನ್ನ ಜಾಗೃತಗೊಳಿಸಿ, ಹೆಣ್ಣುಮಕ್ಕಳನ್ನ ಸಂರಕ್ಷಿಸುವ ನಿಟ್ಟಿನಲ್ಲಿ ಕೆಲಸಗಳಾಗಬೇಕು ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ. ಎಚ್.ಕೆ.ಎಸ್. ಸ್ವಾಮಿ ಅವರು ಕರೆ ನೀಡಿದ್ದಾರೆ.

ಶಿಕ್ಷಣದಲ್ಲಿ ಹೆಣ್ಣು ಮಕ್ಕಳಿಗೆ ಸ್ವಾವಲಂಬಿ ಜೀವನವನ್ನು ಕಲಿಸಿಕೊಟ್ಟು, ಜೀವನ ಪರ್ಯಂತ ಅವರು ತಮ್ಮ ಸ್ವಂತ ಕಾಲ ಮೇಲೆ, ದುಡಿಮೆಯ ಮೇಲೆ ಬದುಕುವಂತಹ ಶಿಕ್ಷಣ ನೀಡಿದಾಗ, ಹೆಣ್ಣು ಮಕ್ಕಳು ಬಲವಂತದ ಮದುವೆಗಳಿಗೆ, ಬಾಲ್ಯ ವಿವಾಹಕ್ಕೆ ಪ್ರತಿರೋದವನ್ನು ಒಡ್ಡಿ, ತಮ್ಮ ಜೀವನವನ್ನು ರೂಪಿಸಿಕೊಳ್ಳಲು ಅನುಕೂಲಕರವಾಗುತ್ತದೆ. ಹಾಗಾಗಿ ಶಿಕ್ಷಣ ಇಲಾಖೆ ಇದರ ಬಗ್ಗೆ ಗಂಭೀರವಾಗಿ ಬದಲಾವಣೆಗಳನ್ನು ಮಾಡಿಕೊಂಡು, ಮಕ್ಕಳಿಗೆ ಶಾಲೆಗಳಲ್ಲಿ ಕೌಶಲ್ಯಗಳ ತರಬೇತಿಯನ್ನು ನೀಡಿ, 10ನೇ ತರಗತಿ ಬರುವುದರೊಳಗೆ ಮಗು ತನ್ನ ದುಡಿಮೆಯನ್ನು, ತನ್ನ ಸಂಪಾದನೆಯನ್ನ ಮಾಡಿಕೊಳ್ಳುವ ಮಟ್ಟಿಗಾದರೂ ಶಿಕ್ಷಣವನ್ನು ನೀಡಿರಬೇಕು, ಇಲ್ಲದಿದ್ದರೆ ತಂದೆ ತಾಯಿಗಳು, ಗ್ರಾಮೀಣ ಮಟ್ಟದಲ್ಲಿ ಹೆಣ್ಣು ಮಕ್ಕಳಿಗೆ ಬಾಲ್ಯ ವಿವಾಹ ಮಾಡಿ, ತಮ್ಮ ಜವಾಬ್ದಾರಿಯಿಂದ ನುಣುಚಿಕೊಳ್ಳಲು ಪ್ರಯತ್ನಿಸುತ್ತಿದ್ದಾರೆ ಎಂದರು.

ಬಾಲ್ಯ ವಿವಾಹಕ್ಕೆ ಹಲವಾರು ಕಾರಣ ಗೊತ್ತಿದ್ದರೂ ಸಹ, ಶಿಕ್ಷಣ ಇಲಾಖೆ ಮತ್ತು ಸಮಾಜ, ಪರಿವರ್ತನೆ ಮಾಡಿಕೊಳ್ಳಲು ಸಿದ್ಧವಾಗದೆ, ಹೆಣ್ಣು ಮಕ್ಕಳನ್ನ ದಿನೇದಿನೇ ಬಲಿ ತೆಗೆದುಕೊಳ್ಳುತ್ತಿದೆ, ಗ್ರಾಮೀಣ ಮಟ್ಟದಲ್ಲಿ ಹೆಣ್ಣು ಮಗಳು ಒಬ್ಬಳು, ತಾಳಿ ಕಟ್ಟಿಸುವುದರ ವಿರುದ್ಧ ಹೋರಾಟ ಮಾಡಿ, ರಸ್ತೆಯಲ್ಲಿ ಬಿದ್ದು, ಒದ್ದಾಡಿ, ಕಿರಿಚಾಡಿದರು ಸಹ, ಸಾರ್ವಜನಿಕರು ಅವಳ ರಕ್ಷಣೆಗೆ ಬಾರದಿರುವುದು ನಮ್ಮ ಹೇಡಿತನದ ಲಕ್ಷಣವಾಗಿದೆ ಎಂದರು.

ಹೆಣ್ಣು ಮಗಳು ಒಬ್ಬಳು ಗ್ರಾಮೀಣ ಮಟ್ಟದಲ್ಲಿ ಏಕಾಂಗಿಯಾಗಿ ಹೋರಾಟ ಮಾಡಿ, ತನ್ನ ಜೀವನವನ್ನು ರೂಪಿಸಿಕೊಳ್ಳುವ ಮಟ್ಟಿಗಾದರೂ ಧೈರ್ಯಶಾಲಿಯಾಗಿರುವುದು ಮೆಚ್ಚಬೇಕಾಗಿದೆ,



ಅಂತ ಹೆಣ್ಣು ಮಕ್ಕಳನ್ನು ಸಮಾಜದಲ್ಲಿ ತೋರಿಸಿ, ಅವಳ ಧೈರ್ಯ ಸಾಹಸವನ್ನ ಜನರಲ್ಲಿ ಪ್ರತಿಪಾದನೆ ಮಾಡಬೇಕಾಗಿದೆ, ಸರ್ಕಾರದಿಂದ ಕೆಲವೊಂದಿಷ್ಟು ಜನಜಾಗೃತಿ ಕಾರ್ಯಕ್ರಮ ಮಾಡಿ, ಹೆಣ್ಣು ಮಕ್ಕಳಿಗೆ ಬೇರೆ ರೀತಿಯ ಶಿಕ್ಷಣವನ್ನು ನೀಡಿ, ಮನೆಯಲ್ಲಿ ಆಗುವ ಒತ್ತಡವನ್ನು ನಿಭಾಯಿಸುವುದರ ಬಗ್ಗೆ ತರಬೇತಿ ನೀಡಬೇಕಾಗಿದೆ ಎಂದರು.

ಬಡತನ ಹೆಚ್ಚಾಗಿರುವ ದೇಶದಲ್ಲಿ ಹೆಣ್ಣು ಮಕ್ಕಳು ಭಾರವಾಗಿ ಪರಿಣಮಿಸುತ್ತಾರೆ, ಶಿಕ್ಷಣ ನೀಡಲಾರದೆ ತಂದೆ ತಾಯಿಗಳು ಅವರನ್ನ ಮದುವೆ ಮಾಡಿಸುವುದು ಸಾಮಾನ್ಯ ದೃಶ್ಯವಾಗಿದೆ, ಹಾಗಾಗಿ ಗ್ರಾಮೀಣ ಉದ್ಯೋಗಗಳನ್ನ ಪ್ರೋತ್ಸಾಹಿಸಿ, ಗ್ರಾಮೀಣ ಜನರ ಜೀವನವನ್ನು ಗಟ್ಟಿಗೊಳಿಸಿದ್ದರೆ, ಹೆಣ್ಣು ಮಕ್ಕಳನ್ನು ಉಳಿಸಿಕೊಳ್ಳಲು ಸಾಧ್ಯವಾಗುತ್ತಿತ್ತು, ಅದಕ್ಕ ಗಾಂಧೀಜಿಯವರು ಜೀವನ ಪರ್ಯಂತ ಗ್ರಾಮೀಣ ಉದ್ಯೋಗಗಳ ಬಗ್ಗೆ ಚಿಂತನೆ ಮಾಡಿ, ಚರಕ, ಖಾದಿ ಗ್ರಾಮೀಣ ವಸ್ತುಗಳ ಬಳಕೆ, ಸ್ವದೇಶಿ ತತ್ವಗಳನ್ನು ಅನುಷ್ಠಾನಗೊಳಿಸಲು ಪ್ರಯತ್ನಿಸಿದ್ದರು. ಇಂದು ಸಹ ಬಡತನ ಗ್ರಾಮೀಣ ಮಟ್ಟದಲ್ಲಿ ಇರುವುದರಿಂದ, ಗ್ರಾಮಸ್ಥರುಗಳು ಸರ್ಕಾರದ ಕಣ್ ತಪ್ಪಿಸಿ, ಕಾಯ್ದೆಗಳನ್ನ ಕಣ್ ತಪ್ಪಿಸಿ, ಹೆಣ್ಣು ಮಕ್ಕಳನ್ನ ಬಲವಂತವಾಗಿ ಮದುವೆ ಮಾಡುತ್ತಿರುವ ದೃಶ್ಯಗಳು ಟಿವಿನಲ್ಲಿ, ಮಾಧ್ಯಮಗಳಲ್ಲಿ ಕಾಣಲು ಆರಂಭಿಸುತ್ತಿವೆ, ಅವರನ್ನು ಏಕಾಏಕಿ ಹೋಗಿ ಬದಲಿಸುವುದು ಕಷ್ಟಕರವಾಗಿದೆ, ಹಾಗಾಗಿ ಶಿಕ್ಷಣದಲ್ಲಿ ಮಾರ್ಪಾಡುಗಳನ್ನು ಮಾಡಿಕೊಂಡು, ಮಗು ಹುಟ್ಟಿದಾಗಿಂದನೆ, ತಂದೆ ತಾಯಿಗಳಿಗೆ ಜೀವನದ ಪಾಠವನ್ನು ಕಲಿಸಿ ಕೊಡಬೇಕಾಗಿದೆ ಎಂದರು.

ಜನರು ಸಹ ಸಾಮಾಜಿಕ ಜವಾಬ್ದಾರಿಗಳನ್ನು ತೆಗೆದುಕೊಂಡು, ಸಂಕಷ್ಟದಲ್ಲಿರುವ ಹೆಣ್ಣು ಮಕ್ಕಳನ್ನು ಕಾಪಾಡುವ ನಿಟ್ಟಿನಲ್ಲಿ ಧೈರ್ಯಶಾಲಿಗಳಾಗಬೇಕು, ಹೋರಾಟಗಳಲ್ಲಿ, ಯುದ್ಧಗಳಲ್ಲಿ ಧೈರ್ಯ ಸಾಹಸ ತೋರಿಸುವ ಪುರುಷರು, ಗ್ರಾಮೀಣ ಮಟ್ಟದಲ್ಲಿ ಹೆಣ್ಣು ಮಗಳು ಜೋರಾಗಿ ಕಿರುಚಾಡಿದರು ಸಹ, ಸಹಾಯ ಹಸ್ತ ಚಾಚದಿರುವುದು, ನಮ್ಮ ಗುಲಾಮಗಿರಿಯ ಶಿಕ್ಷಣದ ಪ್ರಭಾವವಾಗಿದೆ. ಬ್ರಿಟಿಷರು ನಮ್ಮ ದೇಶದಲ್ಲಿ ಆಡಳಿತಕ್ಕೆ ಬಂದಾಗಿನಿಂದ, ನಮ್ಮನ್ನ ಹೇಡಿಗಳನ್ನಾಗಿ ಮಾಡಿದ್ದಾರೆ, ನಮಗೆ ನಮ್ಮನ್ನು ರಕ್ಷಿಸಿಕೊಳ್ಳುವುದು ಗೊತ್ತಿಲ್ಲ, ಇನ್ನೊಬರನ್ನ ರಕ್ಷಿಸುವುದು ಸಹ ಮರೆತು ಹೋಗಿದೆ, ಹಾಗಾಗಿ ಜನರಲ್ಲಿ ಧೈರ್ಯ ಸಾಹಸಗಳನ್ನು ತೋರ್ಪಡಿಸಬೇಕೆಂದು ಗಾಂಧೀಜಿಯವರು, ಯಾವುದೇ ಜಾತಿ ಮತವಿರಲಿ, ಆತ ಕ್ಷತ್ರಿಯನಂತೆ ಹೋರಾಡುವುದನ್ನು ಸಹ ಕಲಿಯಬೇಕೆಂದು ಪಾಠ ಮಾಡುತ್ತಿದ್ದರು ಎಂದರು.

ಒಂದು ಹೆಣ್ಣು ಮಗುವಿನ ರಕ್ಷಣೆಗೆ, ಪ್ರಾಣಾರ್ಪಣೆ ಮಾಡಿ, ಯುವಕರು ಮಾದರಿಯಾಗಬೇಕೆಂದು ಅಂದೆ ಕರೆ ನೀಡಿದ್ದರು, ನಾವು ನಮ್ಮ ಧೈರ್ಯ ಸಾಹಸಗಳನ್ನು ಸಮಾಜದಲ್ಲಿ ತೋರಿಸಲಾರದೆ, ಅಳವಡಿಸಿಕೊಳ್ಳಲಾರದೆ ಅಸಹಾಯಕರಾಗಿ ನಿಂತು ನೋಡುತ್ತಿದ್ದೇವೆ, ಹಾಗಾಗಿ ಕಾನೂನು ಉಲ್ಲಂಘನೆ ಮಾಡುವ ದೃಶ್ಯಗಳು, ಅಸಹಾಯಕ ಜನರ ಶೋಷಣೆಗಳು, ದೌರ್ಜನ್ಯಗಳು, ಸಮಾಜದಲ್ಲಿ ಎದ್ದು ಕಾಣುತ್ತಿವೆ, ಇದರ ಬಗ್ಗೆ ನಾವು ಶಿಕ್ಷಣದಲ್ಲಿ ಜನಜಾಗೃತಿ ಮೂಡಿಸಿ, ಮನುಷ್ಯನನ್ನ ಅಹಿಂಸೆ ಮತ್ತು ಬಲಿದಾನಕ್ಕೆ ಸಿದ್ಧಗೊಳ್ಳುವಂತೆ, ಧೈರ್ಯಶಾಲಿಯಾಗಿ ಮಾಡಿದರೆ ಮಾತ್ರ ಮುಂದಿನ ಜನಾಂಗವನ್ನು ಉಳಿಸಿಕೊಳ್ಳಬಹುದೆಂದು ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

# ಡೆಂಗ್ಯು ವಿರೋಧಿ ಮಾಸಾಚರಣೆ




**ಗದಗ:** ಆಡಳಿತ ವೈದ್ಯಾಧಿಕಾರಿಗಳು ಪ್ರಾಥಮಿಕ ಆರೋಗ್ಯ ಕೇಂದ್ರ ಹುಯಿಲಗೋಳ ವ್ಯಾಪ್ತಿ0ು ನೀರಲಗಿ ಉಪ ಕೇಂದ್ರದಲ್ಲಿ ಡೆಂಗ್ಯು ವಿರೋಧಿ ಮಾಸಾಚರಣೆಯು ಇತ್ತೀಚೆಗೆ ಡಾ ಪ್ರೀತಮ್ ಕೋನಾ ಇವರ ಅಧ್ಯಕ್ಷತೆ0ುಲ್ಲಿ ಸರಕಾರಿ ಪ್ರೌಢಶಾಲೆ ನೀರಲಗಿ ಇಲ್ಲಿ ನಡೆಯಿತು.

ಈ ಸಂದರ್ಭದಲ್ಲಿ ಮಂಜುನಾಥ ಜಾಲಿಹಾಳ , ನಾಗರಾಜ್ ಜೋಷಿ , ಸಂತೋಷ್ ಗದಗಿನ ಶ್ರೀಮತಿ ಶೀಲಾ ಮಳೇಕರ್, ಶ್ರೀಮತಿ ಸವಿತಾ ಪವಾರ್ ಹಾಗೂ ಆಶಾ ಸಿಬ್ಬಂದಿಗಳಾದ ಶ್ರೀಮತಿ ವಾ0ು ಎಸ್ ವಾಲ್ಮೀಕಿ ಈರಮ್ಮ ಕುಂದಗೋಳ ಮಠ ಡೆಂಗ್ಯೂ ಬಗ್ಗೆ ಅಭಿಮತವನ್ನು ವ್ಯಕ್ತಪಡಿಸಿದರು

ಡೆಂಗ್ಯೂ ವಿರೋಧಿ ಮಾಸಾಚರಣೆ ಎಂದರೆ, ಡೆಂಗ್ಯೂ ಜ್ವರವನ್ನು ತಡೆಗಟ್ಟಲು ಮತ್ತು ನಿ0ುಂತ್ರಿಸಲು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಒಂದು ಕಾ0ುರ್ಕ್ರಮ. ಈ ಕಾ0ುರ್ಕ್ರಮವು ಡೆಂಗ್ಯೂ ಜ್ವರದ ಬಗ್ಗೆ ತಿಳುವಳಿಕೆ ನೀಡುವ ಮೂಲಕ, ಅದನ್ನು ಹರಡದಂತೆ ತಡೆಗಟ್ಟಲು ಜನರಿಗೆ ಪ್ರೇರೇಪಿಸುತ್ತದೆ.

ಡೆಂಗ್ಯೂ ಜ್ವರದ ಬಗ್ಗೆ ಜಾಗೃತಿ ಮೂಡಿಸುವುದು: ಡೆ–ಂಗ್ಯೂ ಜ್ವರದ ಲಕ್ಷಣಗಳು, ಹರಡುವಿಕೆ ಮತ್ತು ತಡೆಗಟ್ಟುವಿಕೆ ಬಗ್ಗೆ ಜನರಿಗೆ ತಿಳುವಳಿಕೆ ನೀಡುವುದು. ಡೆಂಗ್ಯೂ ಜ್ವರವನ್ನು ತಡೆಗಟ್ಟಲು ಸಹಾ0ು ಮಾಡುವುದು: ಡೆಂಗ್ಯೂ ಜ್ವರ ಹರಡದಂತೆ ತಡೆಗಟ್ಟಲು ಮನೆ ಮತ್ತು ಸುತ್ತಮುತ್ತಲಿನ ಪ್ರದೇಶಗಳನ್ನು ಸ್ವಚ್ಛವಾಗಿಡಲು ಜನರನ್ನು ಪ್ರೇರೇಪಿಸುವುದು. ಡೆಂಗ್ಯೂ ಜ್ವರದ ಚಿಕಿತ್ಸೆ ಬಗ್ಗೆ ತಿಳುವಳಿಕೆ ನೀಡುವುದು: ಡೆಂಗ್ಯೂ ಜ್ವರದ ಚಿಕಿತ್ಸೆ ಮತ್ತು ಅದನ್ನು ತಡೆಗಟ್ಟಲು ಏನು ಮಾಡಬೇಕೆಂದು ಜನರಿಗೆ ತಿಳಿಸುವುದು. ಇವು ಡೆಂಗ್ಯೂ ವಿರೋಧಿ ಮಾಸಾಚರಣೆಯ ಉದ್ದೇಶಗಳಾಗಿವೆ.

# ಕೋವಿಡ್ ಪರೀಕ್ಷೆ ಹೆಸರಿನಲ್ಲಿ ದುಬಾರಿ ಶುಲ್ಕ ವಿಧಿಸಿದರೆ ಸೂಕ್ತ ಕ್ರಮ

## ಖಾಸಗಿ ಆಸ್ಪತ್ರೆಗಳಿಗೆ ಸಿಎಂ ಸಿದ್ದರಾಮಯ್ಯ ಎಚ್ಚರಿಕೆ

**ಬೆಂಗಳೂರು:** ಕೋವಿಡ್ ಪರೀಕ್ಷೆ ಹೆಸರಿನಲ್ಲಿ ಖಾಸಗಿ ಆಸ್ಪತ್ರೆಗಳು ದುಬಾರಿ ಶುಲ್ಕ ವಿಧಿಸುತ್ತಿರುವ ದೂರುಗಳು ಬಂದರೆ ಪರಿಶೀಲನೆ ನಡೆಸಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬುಧವಾರ ಎಚ್ಚರಿಕೆ ನೀಡಿದರು.

ರಾಜ್ಯದಲ್ಲಿ ಕೋವಿಡ್ ಪರಿಸ್ಥಿತಿ ಕುರಿತು ಮುಖ್ಯಮಂತ್ರಿಗಳು ಅಧಿಕಾರಿಗಳೊಂದಿಗೆ ಬುಧವಾರ ಸಂಜೆ ಪರಿಶೀಲನಾ ಸಭೆ ನಡೆಸಿದರು.

ಈ ವೇಳೆ ಮಾತನಾಡಿದ ಮುಖ್ಯಮಂತ್ರಿಗಳು, ರಾಜ್ಯದಲ್ಲಿ ಪ್ರಸಕ್ತ ವರ್ಷದಲ್ಲಿ ಈವರೆಗೆ 11 ಸಾವು ಸಂಭವಿಸಿವೆ. ಆದರೂ ಇದರಲ್ಲಿ 10 ಪ್ರಕರಣಗಳಲ್ಲಿ ಕೋವಿಡ್ ಕಾರಣದಿಂದ ಸಾವು ಸಂಭವಿಸಿಲ್ಲ. ವಿವಿಧ ರೀತಿಯ ದೀರ್ಘಕಾಲದ ಅನಾರೋಗ್ಯಕ್ಕೆ ತುತ್ತಾಗಿದ್ದ ರೋಗಿಗಳು ಸಾವನ್ನಪ್ಪಿದ್ದು, ಸಾವು ಸಂಭವಿಸಿದಾಗ ಅವರಿಗೆ ಕೊರೋನಾ ಪಾಸಿಟಿವ್ ಇತ್ತು ಅಷ್ಟೇ ಎಂದು ಹೇಳಿದರು.

ಮತ್ತೊಂದು ಡೆತ್ ಆಡಿಟ್ ವರದಿ ಬರಬೇಕಾಗಿದೆ ಎಂದು ತಿಳಿಸಿದ್ದೀರಿ. ಹೀಗಾಗಿ ಪ್ರತಿ ಬಾರಿ ಕೊರೋನಾ ಸಾವು ಆದಾಗಲೂ ಅದು ಕೊರೋನಾ ಸಾವೇ ಅಥವಾ ಅಲ್ಲವೇ ಎಂಬುದನ್ನು ಸ್ಪಷ್ಟವಾಗಿ ಜನರಿಗೆ ತಿಳಿಸಬೇಕು. ಜನರಲ್ಲಿ ಇರುವ ಆತಂಕವನ್ನು ಕಡಿಮೆ ಮಾಡಬೇಕು ಎಂದು ಸೂಚಿಸಿದರು.



ರಾಜ್ಯದಲ್ಲಿ ಕೋವಿಡ್ ಪರೀಕ್ಷೆಯನ್ನು ಹೆಚ್ಚಿಸಲಾಗಿದ್ದು, ಪ್ರತಿದಿನ ಸರಾಸರಿ 500 ಮಾದರಿಗಳನ್ನು ಪರೀಕ್ಷಿಸಲಾಗುತ್ತಿದೆ ಒಟ್ಟಾ–ರೆಯಾಗಿ, ಕಳೆದ 10 ದಿನಗಳಲ್ಲಿ 5,000 ಕ್ಕೂ ಹೆಚ್ಚು ಮಾದರಿಗಳನ್ನು ಪರೀಕ್ಷಿಸಲಾಗಿದ್ದು, ಇದರ ಪರಿಣಾಮವಾಗಿ 862 ಪಾಸಿಟಿವ್ ಪ್ರಕರಣಗಳು ಪತ್ತೆಯಾಗಿವೆ.

ಇದೂವರೆಗೆ 11 ಸಾವು ಸಂಭವಿಸಿದೆ. ಆದರೂ ಇದರಲ್ಲಿ 10 ಪ್ರಕರಣಗಳಲ್ಲಿ ಕೋವಿಡ್ ಕಾರಣದಿಂದ ಸಾವು ಸಂಭವಿಸಿಲ್ಲ. ವಿವಿಧ ರೀತಿಯ ಅನಾರೋಗ್ಯಕ್ಕೆ ತುತ್ತಾಗಿದ್ದ ರೋಗಿಗಳು ಈ ಪ್ರಕರಣಗಳಲ್ಲಿ ಸಾವನ್ನಪ್ಪಿದ್ದಾರೆ. ಒಂದು ಪ್ರಕರಣದ ಆಡಿಟ್ ವರದಿ ಬರಬೇಕಾಗಿದೆ. ಕೋವಿಡ್ ಬಗ್ಗೆ ಯಾರೂ ಅನಗತ್ಯ ಗೊಂದಲ ಮೂಡಿಸಬಾರದು. ಸಾರ್ವಜನಿಕರು ಭಯಪಡುವ ಅಗತ್ಯವಿಲ್ಲ. ಎಲ್ಲಾ ಆಸ್ಪತ್ರೆಗಳಲ್ಲಿ ಕೋವಿಡ್ ಪ್ರಕರಣಗಳನ್ನು ನಿಭಾಯಿಸಲು ಸೂಕ್ತ ವ್ಯವಸ್ಥೆಯನ್ನು ಕೈಗೊಳ್ಳಬೇಕು ಎಂಬ ಸೂಚನೆ ನೀಡಿದರು.

ಆರೋಗ್ಯ ಇಲಾಖೆ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಖಾಸಗಿ ಆಸ್ಪತ್ರೆಗಳಲ್ಲಿ ಅನಗತ್ಯವಾಗಿ ಕೋವಿಡ್ ಪರೀಕ್ಷೆ ಹೆಸರಿನಲ್ಲಿ ದುಬಾರಿ ಶುಲ್ಕ ವಿಧಿಸುತ್ತಿರುವ ದೂರುಗಳ ಬಗ್ಗೆ ಪರಿಶೀಲನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಸೂಚಿಸಿದರು.

## ನೈಸರ್ಗಿಕ ಕೃಷಿ ಪದ್ಧತಿಯ ಪರಿಕರಗಳಿಗೆ ಅರ್ಜಿಆಹ್ವಾನ

**ಹಾಸನ :** ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನಯೋಜನೆಯನ್ನು2025-26ನೇ ಸಾಲಿಗೆ ಕ್ಲಷ್ಟರ್ ಮಾದರಿಯಲ್ಲಿ ಅನುಷ್ಠಾನ ಮಾಡಲಾಗುತ್ತಿದ್ದು, ಹಾಸನ ಜಿಲ್ಲೆಗೆ 40 ಕ್ಲಷ್ಟರ್‌ಗಳ ಗುರಿ ನಿಗದಿಯಾಗಿರುತ್ತದೆ. ಪ್ರತಿ ಕ್ಲಸ್ಟರ್‌ಗಳಲ್ಲಿ 50 ಹೆಕ್ಟೇರ್ ಪ್ರದೇಶವನ್ನು ನೈಸರ್ಗಿಕ ಕೃಷಿ ಪದ್ಧತಿಗೆ ಅಳವಡಿಸಿಕೊಳ್ಳಲು ಆಸಕ್ತ ರೈತರನ್ನುಆಯ್ಕೆ ಮಾಡಲಾಗಿರುತ್ತದೆ. ಅದರನ್ವಯಆಯ್ಕೆಯಾದ ಫಲಾನುಭವಿಗಳಿಗೆ ನೈಸರ್ಗಿಕ ಕೃಷಿ ಪದ್ಧತಿಯನ್ನುಅನುಸರಿಸಲು ಬೇಕಾಗುವ ಪರಿಕರಗಳನ್ನು ಸಕಾಲದಲ್ಲಿಒದಗಿಸುವಉದ್ದೇಶದಿಂದ ಪ್ರತಿ 03 ಕ್ಲಷ್ಟರ್‌ಗಳಿಗೆ 02 (ಒಟ್ಟುಎರಡು) Bio Input Resource Center ಗಳನ್ನು ಕ್ಷೇತ್ರ ಮಟ್ಟದಲ್ಲಿ ಸ್ಥಾಪಿಸಲು ಕಾರ್ಯಕ್ರಮ ನಿಗದಿಯಾಗಿದ್ದು, ಪ್ರತಿಕೇಂದ್ರವನ್ನು ಸ್ಥಾಪಿಸಲು ರೂ.1 ಲಕ್ಷಗಳ ಆರ್ಥಿಕ ನೆರವು ನೀಡಲುಅವಕಾಶವಿರುತ್ತದೆ. ಆದ್ದರಿಂದ ಆಸಕ್ತ ಅರ್ಹಉದ್ದಿಮೆದಾರರು / ಸಂಸ್ಥೆ/ ಸಂಘ/ ನೈಸರ್ಗಿಕ ಕೃಷಿ ಪದ್ಧತಿಯನ್ನುಅನುಸರಿಸುತ್ತಿರುವ ವೈಯಕ್ತಿಕ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.ಆಲೂರು,ಅರಕಲಗೂಡು, ಅರಸೀಕೆರೆ, ಹಾಸನ, ಹೊಳೆನರಸೀಪುರತಲಾ 3,ಬೇಲೂರು, ಚನ್ನರಾಯಪಟ್ಟಣ, ಸಕಲೇಶಪುರ4ಒಟ್ಟು27 ಕೇಂದ್ರಗಳು. ಅರ್ಹತೆ:ನೈಸರ್ಗಿಕ ಕೃಷಿ ಪದ್ಧತಿಯನ್ನುಅನುಸರಿಸುತ್ತಿರಬೇಕು ಅಥವಾ ಪದ್ಧತಿಯಲ್ಲಿ ಸ್ವ-ಅನುಭವ ಹೊಂದಿರಬೇಕು.ಸ್ವಂತ ಜಮೀನಿನಲ್ಲಿಜೈವಿಕ ಪರಿಕರಗಳನ್ನು ಬಳಕೆ ಮಾಡುತ್ತಿರಬೇಕು. ಅವಶ್ಯಕವಿರುವ ಕಚ್ಚಾ ಸಾಮಗ್ರಿಗಳಾದ ಜಾನುವಾರು/ಸಸ್ಯಜನ್ಯ ತ್ಯಾಜ್ಯಗಳನ್ನು ಹೊಂದಿಸಲು ಅನುಕೂಲ ಹೊಂದಿರಬೇಕು. ಸ್ಥಳೀಯವಾಗಿ ಆದ್ಯತೆ ಮೇರೆಗೆಗ್ರಾಮ ಪಂಚಾಯಿತಿ ಮಟ್ಟದಲ್ಲಿ ಲಭ್ಯವಿರುವ ಗೋಶಾಲೆಗಳಿಂದ ಸಗಣಿ ಮತ್ತುಗಂಜಲವನ್ನು ಸಂಗ್ರಹಿಸಲು ಸೂಕ್ತ ವ್ಯವಸ್ಥೆ ಹೊಂದಿರಬೇಕು. ನೈಸರ್ಗಿಕ ಕೃಷಿ ಪದ್ಧತಿಯಜೈವಿಕ ಪರಿಕರಗಳನ್ನು ತಯಾರಿಸಲು ಹಾಗೂ ಸಂಗ್ರಹಿಸಲು ಸೂಕ್ತ ಸ್ಥಳಾವಕಾಶವಿರಬೇಕು.ಮೇಲ್ಕಂಡಂತೆಜಿಠ ಖಟಿಠಿಣ Resource Center ಗಳನ್ನು ಸ್ಥಾಪಿಸಲು ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಸಂಬಂಧಿಸಿದ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರುಗಳ ಕಚೇರಿಗೆಜೂ.18ರೊಳಗಾಗಿ ದೃಢೀಕೃತ ದಾಖಲೆಗಳೊಂದಿಗೆ ಸಲ್ಲಿಸಬಹುದಾಗಿದೆ ಹಾಗೂ ಹೆಚ್ಚಿನ ಮಾಹಿತಿಗಾಗಿತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರುಗಳ ಕಚೇರಿಗೆ ಸಂಪರ್ಕಿಸಲುಜಿಲ್ಲಾಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

## ಮಾನಸಿಕ ಅಸ್ವಸ್ಥರಿಗೆ ಮಾನಸಿಕ ಸೇವೆ ಒದಗಿಸಲುಅರ್ಜಿಆಹ್ವಾನ

**ಹಾಸನ:** ಮಾನಸಿಕ ಅನಾರೋಗ್ಯದಿಂದ ಬಳಲುತ್ತಿರುವ ನಿರಾಶ್ರಿತರಾದ/ಬಡವರಾದ ಮಾನಸಿಕ ಅಸ್ವಸ್ಥರಿಗೆ ಮಾನಸಿಕ ಸೇವೆಯನ್ನುಒದಗಿಸಲುಅರ್ಹ ಸ್ವಯಂ ಸೇವಾ ಸಂಸ್ಥೆಗಳಿಂದಅರ್ಜಿಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲುಜು.02 ಕೊನೆಯ ದಿನ. ಹೆಚ್ಚಿನ ಮಾಹಿತಿಗಾಗಿhttps://kppp.karnataka.gov.in/ಅನ್ನು ನೋಡಬಹುದಾಗಿದೆ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಮತ್ತುಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ, ಹಾಸನ, ಮೊ.ಸಂಖ್ಯೆ :8277895719ಇವರನ್ನು ಸಂಪರ್ಕಿಸಲುಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮಾಧಿಕಾರಿಗಳು ತಿಳಿಸಿದ್ದಾರೆ.

## ಎತ್ತಿನಹೊಳೆ ಮೂಲಕ ಕಾಲುವೆಗೆ ನೀರು

**ಹಾಸನ :** ಜಿಲ್ಲೆಯ ಸಕಲೇಶಪುರ, ಬೇಲೂರು ಹಾಗೂ ಆಲೂರುತಾಲ್ಲೂಕು ವ್ಯಾಪ್ತಿಯಲ್ಲಿ ಎತ್ತಿನಹೊಳೆ ಯೋಜನೆಯಗುರುತ್ವಾ ಕಾಲುವೆ ಸರಪಳಿ:0.00 ಕಿ.ಮೀ ನಿಂದ 32.550 ಕಿ.ಮೀವರೆಗಿನಕಾಮಗಾರಿಯು ಪೂರ್ಣಗೊಂಡಿದ್ದು, ಪ್ರಸಕ್ತ ಸಾಲಿನ ಮುಂಗಾರಿನಲ್ಲಿಪ್ರಾಯೋಗಿಕವಾಗಿ ನೀರನ್ನೆತ್ತಿಗುರುತ್ವಾ ಕಾಲುವೆಗೆ ಬಿಡಲು ಉದ್ದೇಶಿಸಲಾಗಿದ್ದು, ಅದರಂತೆ ಪ್ರಾಯೋಗಿಕ ಚಾಲನೆಯು ಪ್ರಕ್ರಿಯೆಯಲ್ಲಿರುತ್ತದೆ. ಇತ್ತೀಚೆಗೆ ಸುರಿಯುತ್ತಿರುವ ಬಾರಿ ಮಳೆಯಿಂದಾಗಿ ಗುಡ್ಡ ಪ್ರದೇಶದಿಂದ ಹಾಗೂ ಹೊಲ ತೋಟಗಳಿಂದ ಹೆಚ್ಚುವರಿ ನೀರುಎತ್ತಿನಹೊಳೆ ಗುರುತ್ವಾ ಕಾಲುವೆಗೆ ಸೇರುತ್ತಿರುತ್ತದೆ. ಪ್ರಸ್ತುತ ಎತ್ತಿನಹೊಳೆ ಗುರುತ್ವಾ ಕಾಲುವೆ 42 ಕಿ.ಮೀ ವರೆಗಿನಕಾಮಗಾರಿಯು ಪೂರ್ಣಗೊಂಡಿದ್ದು, ಈ ಮೇಲೆ ತಿಳಿಸಿರುವಂತೆ, ಪ್ರಾಯೋಗಿಕ ಚಾಲನೆ ಮತ್ತು ಮಳೆಯಿಂದ ಬರುತ್ತಿರುವ ಹೆಚ್ಚುವರಿ ನೀರನ್ನುಕಾಲುವೆಯಿಂದ ಹೊರ ಹರಿಸಬೇಕಾಗಿರುವುದರಿಂದ ಸರಪಳಿ:32.550 ಕಿ.ಮೀ.ನಲ್ಲಿ ಅಳವಡಿಸಿರುವ ಇಭಿಚಿಠಿಜ ನಿಂದ ನೀರನ್ನು ಕಾಗೇದಹಳ್ಳ ಮುಖಾಂತರ ಹರಿಸಿ ವೇದಾವತಿ ನದಿಯ ಕೊಳ್ಳಕ್ಕೆ ಬಿಡಬೇಕಾಗಿರುತ್ತದೆ.ಆದುದರಿಂದ ಈ ಪ್ರದೇಶದ ವ್ಯಾಪ್ತಿಯಲ್ಲಿದನ-ಕರುಗಳನ್ನು ಕಟ್ಟುವುದಾಗಲಿ, ಸಾರ್ವಜನಿಕರುಸಂಚರಿಸುವುದಾಗಲಿ ಮಾಡಬಾರದು. ಇದರಿಂದ ಸಾರ್ವಜನಿಕರ ಆಸ್ತಿ-ಪಾಸ್ತಿ ಮತ್ತು ಪ್ರಾಣಕ್ಕೆ ಹಾನಿಯಾಗುವಸಂಭವವಿರುತ್ತದೆ. ಈ ಕುರಿತಂತೆಯಾವುದೇತರಹದ ನಿರ್ಲಕ್ಷ್ಯಗಳಿಂದ ಅಪಘಾತಅಥವಾ ಹಾನಿ ಸಂಭವಿಸಿದರೆ ಅವರೇಜವಾಬ್ದಾರರಾಗಿರುತ್ತಾರೆ, ಸಾರ್ವಜನಿಕರ ನಿರ್ಲಕ್ಷ್ಯದಿಂದ ಆಗುವ ಅನಾಹುತಗಳಿಗೆ ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತವಿಭಾಗ ಅರಸೀಕೆರೆತಾಲ್ಲೂಕು, ಜವಾಬ್ದಾರಿಯ ಾಗಿರುವುದಿಲ್ಲಎಂದುಅರಸೀಕೆರೆವಿಜನಿನಿ ಎತ್ತಿನಹೊಳೆ ಯೋಜನಾ ವಿಭಾಗ ನಂ.03ರ ಕಾರ್ಯಪಾಲಕಇಂಜಿನಿಯರ್ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಆಧೀನದಲ್ಲಿರುವ ತರೀಕೆರೆ ಕಂದಾಯ ಉಪವಿಭಾಗಕ್ಕೆ ಒಳಪಡುವ ಒಟ್ಟು 18 ವಸತಿ ಶಾಲೆಗಳಲ್ಲಿ (ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಡಾ.ಬಿ.ಆರ್.ಅಂಬೇಡ್ಕರ್, ಇಂದಿರಾಗಾಂಧಿ) 2025-26ನೇ ಸಾಲಿನ ನೋಂದಣಿಗಾಗಿ 7ನೇ ತರಗತಿಯಲ್ಲಿ ಒಟ್ಟು 30 ಮತ್ತು 8ನೇ ತರಗತಿಯಲ್ಲಿ ಒಟ್ಟು 43 ಖಾಲಿ ಇರುವ ಸೀಟುಗಳ ಭರ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.ಪ್ರವೇಶ ಪರೀಕ್ಷೆಯನ್ನು ಜೂನ್ 24ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಕಡೂರು ತಾಲೂಕಿಗೆ ಸಂಬಂಧಿಸಿದಂತೆ ಕಾಮನಕೆರೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಅಜ್ಜಂಪುರ, ತರೀಕೆರೆ ತಾಲೂಕಿಗೆ ಸಂಬಂಧಿಸಿದಂತೆ ಸೊಕ್ಕೆಯ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ ಮತ್ತು ನರಸಿಂಹರಾಜಪುರ ತಾಲೂಕಿಗೆ ಸಂಬಂಧಿಸಿದಂತೆ ಅಳಲಗೆರೆಯ ಮೊರಾರ್ಜಿ ದೇಸಾಯಿ ವಸತಿ ಶಾಲಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. ಪರೀಕ್ಷೆಯು ಬಹು ಆಯ್ಕೆ ಮಾದರಿಯಲ್ಲಿದ್ದು 50 ಅಂಕಗಳಿಗೆ ಪ್ರಶ್ನೆಗಳಿರುತ್ತವೆ. (7ನೇ ತರಗತಿಗೆ 6ನೇ ತರಗತಿಯ ಪಠ್ಯಕ್ರಮ ಹಾಗೂ 8ನೇ ತರಗತಿಗೆ 7ನೇ ತರಗತಿಯ ಪಠ್ಯಕ್ರಮ ಆಧಾರಿತವಾಗಿರುತ್ತದೆ.)ಆಸಕ್ತ ವಿದ್ಯಾರ್ಥಿಗಳು ಹತ್ತಿರದ ವಸತಿ ಶಾಲೆಯಲ್ಲಿ ನಿಗದಿಪಡಿಸಿದ ನಮೂನೆಯ ಅರ್ಜಿ ಪಡೆದು ಭರ್ತಿ ಜೂನ್ 21ರ ಮಧ್ಯಾಹ್ನ 12 ಗಂಟೆಯೊಳಗೆ ಅರ್ಜಿ ಸಲ್ಲಿಸಬಹುದು ಎಂದು ಅಧ್ಯಕ್ಷರು ಹಾಗೂ ತರೀಕೆರೆ ಉಪವಿಭಾಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇ ಕೆವೈಸಿ ಕಡ್ಡಾಯ

**ಗದಗ :** ಪಡಿತರ ಚೀಟಿ ಹೊಂದಿರುವ ಕುಟುಂಬ ಸದಸ್ಯರ ಇ ಕೆವೈಸಿಯನ್ನು ಜೂನ್ 30 ರೊಳಗಾಗಿ ಶೇ 100 ರಷ್ಟನ್ನು ಸಂಪೂರ್ಣಗೊಳಿಸಬೇಕಾಗಿರುವುದರಿಂದ ಎಲ್ಲ ಪಡಿತರ ಚೀಟಿದಾರರು ಹಾಗೂ ಕುಟುಂಬ ಸದಸ್ಯರು ಜೂನ್ 30 ಒಳಗಾಗಿ ನ್ಯಾಯಬೆಲೆ ಅಂಗಡಿಗೆ ತೆರಳಿ ಕಡ್ಡಾಯವಾಗಿ ಇ ಕೆವೈಸಿ ಮಾಡಿಸಬೇಕು. ಇ ಕೆವೈಸಿ ಮಾಡಲು ಬಾಕಿ ಉಳಿದಿರುವ ಪಡಿತರ ಚೀಟಿಯಲ್ಲಿನ ಸದಸ್ಯರು ಊರಲ್ಲಿ ಇಲ್ಲದೆ ಇದ್ದ ಪಕ್ಷದಲ್ಲಿ ಪಡಿತರ ಚೀಟಿಯ ಸಂಖ್ಯೆ, ಆಧಾರ್ ಕಾರ್ಡ್ ದೊಂದಿಗೆ ಕರ್ನಾಟಕ ರಾಜ್ಯದ ಯಾವುದೇ ಜಿಲ್ಲೆ ತಾಲೂಕು ಗ್ರಾಮದಲ್ಲಿರುವ ನ್ಯಾಯಬೆಲೆ ಅಂಗಡಿಯಲ್ಲಿ ಇ ಕೆವೈಸಿ ಮಾಡಿಕೊಳ್ಳಸಿಕೊಳ್ಳಬೇಕೆಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ನುಗ್ಗೆ ಬೇಸಾಯ ಮಾಡಿದರೆ ನುಗ್ಗಿ ಬರುತ್ತದೆ ಲಾಭ

## ನುಗ್ಗೆ ಒಂದು ಕಡಿಮೆ ಖರ್ಚಿನ ಅಧಿಕ ಲಾಭದಾಯಾಕ ಬೆಳೆ.

### ಭಾಗ್ಯ ತಳಿಯ ವಿಶೇಷ ಮಾಹಿತಿ:

1. ಲಭ್ಯವಿರುವ ತಳಿಗಳಲ್ಲಿ ಉತ್ಕೃಷ್ಟ ತಳಿ
2. ಪರ್ಯಾಯ ಹೆಸರು ಏಆಒ- 01
3. ಬಾಗಲಕೋಟೆ ತೋಟಗಾರಿಕೆ ವಿವಿ ಇಂದ ಅಭಿವೃದ್ಧಿ ಪಡಿಸಿರುವ ತಳಿ
4. ಎತ್ತರ 2.5 ಮೀಟರ್ ಇಂದ 4 ಮೀಟರ್ ಬೆಳೆಯುವ ತಳಿ
5. 2.5 ಇಂದ 3 ತಿಂಗಳ ವರೆಗೂ ಸತತವಾಗಿ ಹೂ ಬಿಟ್ಟು ಕಾಯಿ ಕೊಡುವ ತಳಿ
6. ಒಂದು ಗಿಡಕ್ಕೆ 350 ರಿಂದ 400 ಕ್ಕೂ ಹೆಚ್ಚು ಕಾಯಿ ಬಿಡುವ ತಳಿ
7. ಕಾಯಿಯ ಉದ್ದ 1.5 ಇಂದ 2 ಅಡಿ
8. ಕಾಯಿಯ ತೂಕ 150 ರಿಂದ 160 ಗ್ರಾಂ ನಷ್ಟು ಇರುತ್ತದೆ
9. ಹೆಚ್ಚು ಪ್ರೊಟೀನ್ ಹಾಗೂ ನಾರಿನ ಅಂಶ ಹೊಂದಿರುವ ತಳಿ
10. ಎಕರೆಗೆ ಅಂದಾಜು ಕರ್ಚು (ಕೂಯ್ಲು ಹಾಗೂ ಸಾಗಾಣಿಕೆ ವೆಚ್ಚ ಸೇರಿ) 55 ರಿಂದ 60 ಸಾವಿರ
11. ನಿಶ್ಚಿಳ ಲಾಭ 1 ಇಂದ 1.2 ಲಕ್ಷ
12. ಬಿತ್ತನೆ ಬೀಜದ ಇಳುವರಿ ಸುಮಾರು 80 ಕೆಜಿ
13. ಪ್ರತಿ ಕೆಜಿ ಗೆ ಅಂದಾಜು 1.5 ಇಂದ 2 ಸಾವಿರ
14 ಅತೀ ಕಡಿಮೆ ಅವಧಿಯಲ್ಲಿ ಕಾಯಿ ಬಿಡುವ ತಳಿ
15. ಬಿತ್ತನೆ ಮಾಡಿದ 120 ರಿಂದ 130 ದಿವಾಸದೊಳಗೆ ಕಾಯಿ ಬಿಡಲು ಪ್ರಾರಂಭಿಸಿ ಮುಂದಿನ 45-50 ದಿವಸಗಳ ವರೆಗೂ ಕಾಯಿ ಬಿಡುತ್ತದೆ
16. ಪ್ರತಿ ಗಿಡಕ್ಕೆ 35 ರಿಂದ 40 ಕೆಜಿ ಇಳುವರಿ ಪಡೆಯಬಹುದು
17. ಪ್ರತಿ ಕಾಯಿಯಲ್ಲಿ 15-20 ಬೀಜಗಳು ಇರುತ್ತವೆ
18. ನಾಟಿ ಮಾಡಿದ ಮೇಲೆ 1 ಅಡಿ ಎತ್ತರ ಬೆಳೆದ ಮೇಲೆ ಮುಡಿ ಚಿವುಟಬೇಕು 2-3 ಬಾರಿ ಮುಡಿ ಚಿವುಟುವುದರಿಂದ ಹೆಚ್ಚು ಇಳುವರಿ ಪಡೆಯಬಹುದು
19. ವಣ ಬೇಸಾಯವಾದಲ್ಲಿ ಜೂನ್ ಜುಲೈ ತಿಂಗಳು ನಾಟಿ ಮಾಡಲು ಸೂಕ್ತವಾದ ಸಮಯ
20. ನೀರಾವರಿ ಪ್ರದೇಶವಾದಲ್ಲಿ ವರ್ಷದ ಯಾವುದೇ ತಿಂಗಳಲ್ಲಿ ಬೇಕಾದರೂ ನಾಟಿ ಮಾಡಬಹುದು.



### ನುಗ್ಗೆ ಬೆಳೆಯ ಬೇಸಾಯ ಮಾಹಿತಿ

ನುಗ್ಗೆ ಬೆಳೆಯುವುದು ತೀರ ಕಷ್ಟದ ಕೆಲಸವಲ್ಲ. ಆದರೆ ನಿರ್ವಹಣೆ ಮಾತ್ರ ಅಚ್ಚುಕಟ್ಟಾಗಿರಬೇಕು. ರಾಸಾಯನಿಕ ಬಳಸಿ ನುಗ್ಗೆ ಬೆಳೆಯುತ್ತೇನೆ ಅಂದರೆ ಪ್ರಯೋಜನವಿಲ್ಲ. ಸಾವಯವ ಪದ್ಧತಿಯಲ್ಲಿ ಬೆಳೆದು ನೋಡಿ, ಬಂಪರ್ ಇಳುವರಿ ಗ್ಯಾರಂಟಿ. ಅಂದಹಾಗೇ, ನುಗ್ಗೆ ಬೆಳೆಯುವುದು ಹೇಗೆ ಅಂತ ತಲೆ ಕೆಡಿಸಿಕೊಳ್ಳಬೇಡಿ.

ನುಗ್ಗೆ ಬೆಳೆಯ ಬೇಕೆಂದಿರುವ ಕೃಷಿಕರೇ ಕೆಲ ಸತ್ಯ ತಿಳಿದುಕೊಳ್ಳಿ.

ರಾಸಾಯನಿಕ ಬಳಸಿ ನುಗ್ಗೆ ಕೃಷಿ ಮಾಡಲು ಆಗದು. ಚೆನ್ನಾಗಿ ಬೆಳೆ ಬರಬೇಕು, ಲಾಭ ಮಾಡಬೇಕು ಅಂದರೆ ಮೊದಲು ನುಗ್ಗೆಗೆ ಯಥೇಚ್ಚವಾಗಿ ಪೋಷಕಾಂಶಗಳು ದೊರೆಯುವಂತೆ ಮಾಡಬೇಕು.

ನುಗ್ಗೆ ತೀರ ದೊಡ್ಡ ಗಿಡವಾಗುವ ಬೆಳೆ ಅಲ್ಲ, ಆರೇಳು ಅಡಿ ಎತ್ತರಕ್ಕೆ ಪೊದೆಯಾಕಾರದಲ್ಲಿ ಬೆಳೆಸಬೇಕು, ಹೀಗಾಗಿ ಜಾಸ್ತಿ ಅಂತರ ಇಟ್ಟು ಬೆಳೆಯುವ ಅವಶ್ಯಕತೆ ಇಲ್ಲ. ಸಾಲಿನಿಂದ ಸಾಲಿಗೆ ಏಳು ಅಡಿ, ಗಿಡದಿಂದ ಗಿಡಕ್ಕೆ ಆರು ಅಡಿ ಸಾಕು. ಹೀಗೆ ನಿಮ್ಮ ಜಮೀನಿನಲ್ಲಿ ಅಳತೆ ಪ್ರಕಾರ ಗುರುತು ಮಾಡಿಕೊಂಡು ಒಂದೂವರೆ ಅಡಿ ಆಳ-ಅಗಲದ ಗುಂಡಿ ತೆಗೆಸಬೇಕು. ಗುಂಡಿಯಿಂದ ತೆಗೆದ ಮಣ್ಣು ಹಾಗೂ ಅಷ್ಟೇ ಪ್ರಮಾಣದ ಒಳ್ಳೆಯ ಕೊಟ್ಟಿಗೆ ಗೊಬ್ಬರ ಬೆರೆಸಿ ಅದೇ ಗುಂಡಿಗೆ ತುಂಬಬೇಕು. ಹೀಗೆ ರೆಡಿಯಾದ ಗುಂಡಿಯಲ್ಲಿ ಸದೃಢವಾದ ಸಸಿ ನೆಡಬೇಕು.

ನಿಮಗೆ ಗೊತ್ತೇ ಇರುವಂತೆ, ನುಗ್ಗೆಗಿಡಗಳು ಸಾರಜನಕ ಸ್ಥಿರೀಕರಣ ಮಾಡುವ ಸಾಮರ್ಥ್ಯ ಹೊಂದಿವೆ. ಇದಕ್ಕೆ ನೀವು ಒಂದೇ ಒಂದು ಕಾಳು ಯೂರಿಯಾ ಗೊಬ್ಬರ ಕೊಡುವುದು ಬೇಡ. ಪ್ರತಿ ಎರಡು ತಿಂಗಳಿಗೊಮ್ಮೆ ಬುಡದ ಸುತ್ತ ಪಾತಿ ಮಾಡಿ ನಾಲ್ಕೈದು ಬೊಗಸೆ ಎರೆಹುಳು ಗೊಬ್ಬರ ಕೊಟ್ಟರೆ ಸಾಕು. ಜೊತೆಗೆ ಜೀವಾಮೃತ ತಯಾರಿಸಿಕೊಂಡು ಪ್ರತಿ ಇಪ್ಪತ್ತು ದಿನಕ್ಕೊಮ್ಮೆ ಕಡ್ಡಾಯವಾಗಿ ಸಿಂಪಡಿಸಬೇಕು ಹಾಗೂ ಗಿಡಗಳ ಬುಡದಲ್ಲಿ ಹಾಕಬೇಕು. ಇಷ್ಟಾದರೆ ಸಾಕು, ಮತ್ಯಾವುದೇ ಮೇಲುಗೊಬ್ಬರದ ಅವಶ್ಯಕತೆ ಇಲ್ಲ.

### ಇಳುವರಿ ಹೀಗಿದ್ದರೇನೇ ಲಾಭ

* ಒಂದು ಕಾಯಿ 60-70 ಸೆಂ.ಮೀ. (ಎರಡು ಅಡಿ) ಉದ್ದ ಇರಬೇಕು
* ಒಂದು ಕಾಯಿ 100-120 ಗ್ರಾಂ. ತೂಕ ಇರಬೇಕು
* ಒಂದು ಗಿಡ ಒಂದು ವರ್ಷಕ್ಕೆ ಕಮ್ಮಿಯೆಂದರೂ 250-300 ಕಾಯಿ ಬಿಡಬೇಕು.ಸಸಿ ನಾಟಿ ಮಾಡಿದಾಗ ಯಾವುದೇ ರಾಸಾಯನಿಕ ಗೊಬ್ಬರ ಹಾಕಬೇಡಿ, ನಾಟಿಯಾದ ಮೂರು ತಿಂಗಳ ನಂತರ ಒಂದು ಎಕರೆಗೆ, 25 ಕೆ.ಜಿ ಡಿಎಪಿ, 10 ಕೆ.ಜಿ ಯೂರಿಯಾ, 7 ಕೆ.ಜಿ ಪೊಟ್ಯಾಷ್ ಗೊಬ್ಬರದ ಜೊತೆ ಸೇರಿಸಿ, ಗಿಡದ ಸುತ್ತ ರಿಂಗ್ ಮಾಡಿ ಹಾಕಿ. ನಂತರ ಮತ್ತೆ ಮೂರು ತಿಂಗಳು ಬಿಟ್ಟು ಇಷ್ಟೇ ಪ್ರಮಾಣದ ಗೊಬ್ಬರವನ್ನು ಹೀಗೇ ಕೊಡಿ.

ಇನ್ನು ಹಾಗೇ ಬಿಟ್ಟರೆ ನುಗ್ಗೆ 6-7 ಮೀಟರ್ ಎತ್ತರಕ್ಕೆ ಬೆಳೆದು ನಿಲ್ಲುತ್ತದೆ. ಹೀಗೆ ಎತ್ತರ ಬೆಳೆದರೆ ಕಾಯಿ ಕೀಳುವುದು ಕಷ್ಟ ಜೊತೆಗೆ ಇಳುವರಿಯಲ್ಲೂ ಗಣನೀಯವಾಗಿ ಕಡಿಮೆಯಾಗುತ್ತದೆ. ಸಾಧ್ಯವಾದಷ್ಟು ಗಿಡಗಳು ಗಿಡ್ಡಗೆ ಪೊದೆಯಾಕಾರವಾಗಿ ಬೆಳೆಯುವಂತೆ ನೋಡಿಕೊಳ್ಳಬೇಕು. ಒಂದು, ಒಂದೂವರೆ ಮೀಟರ್ ಬೆಳೆದಾಕ್ಷಣ ಕುಡಿ ಚಿವುಟಿ ಎತ್ತರ ಬೆಳೆಯದಂತೆ ಮಾಡಬೇಕು. ಇದರಿಂದ ಹೆಚ್ಚು ಕವಲುಗಳು ಬಂದು ಗಿಡ ಪೊದೆಯಂತಾಗಿ ಹೆಚ್ಚಿನ ಕಾಯಿ ಬಿಡುತ್ತವೆ. ನೀರಿನ ನಿರ್ವಹಣೆಯೂ ಅಷ್ಟೇ ಮುಖ್ಯ, ಪ್ರತಿ ಐದಾರು ದಿನಕ್ಕೊಮ್ಮೆ ತಪ್ಪದೇ ನೀರುಣಿಸಿ. ಆಮೇಲೆ ನುಗ್ಗೆದು ಜೊತೆಗೇ ನುಗ್ಗಿ ಬರುತ್ತದೆ ಲಾಭ.

## ಯೋಗದ ಅರಿವು ಮೂಡಿಸುವ ಸ್ಪರ್ಧೆಯಲ್ಲಿ ವಿಜೇತರು

**ಚಿಕ್ಕಮಗಳೂರು:** ಆಯುಷ್ ಇಲಾಖೆ ವತಿಯಿಂದ ಯುವ ಪೀಳಿಗೆಯಲ್ಲಿ ಯೋಗ ಕುರಿತು ಯೋಗದ ಅರಿವು ಮತ್ತು ಉತ್ಸಾಹ ಹೆಚ್ಚಿಸುವ ಸಲುವಾಗಿ ನಗರ ವ್ಯಾಪ್ತಿಯ ಶಾಲೆಯ ಮಕ್ಕಳಿಗೆ ಬಸವನಹಳ್ಳಿಯ ಬ್ರಹ್ಮಕುಮಾರಿಯವರ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಇಂದು ಬೆಳಗ್ಗಿನಿಂದ ಸಂಜೆ 4.30ರವರೆಗೆ ಆಯೋಜಿಸಿದ್ದ ಯೋಗ ಸ್ಪರ್ಧೆಯಲ್ಲಿ ಈ ಕೆಳಗಿನ ವಿದ್ಯಾರ್ಥಿಗಳು ವಿಜೇತರಾಗಿದ್ದಾರೆ.


ಪ್ರೌಢಶಾಲೆ ಬಾಲಕರ ವಿಭಾಗದಲ್ಲಿ ಶರತ್‌ಕುಮಾರ್ (ಪ್ರಥಮ), ರಘು (ದ್ವಿತೀಯ) ಹಾಗೂ ಯು.ವಿ.ವಿನಯ್ (ತೃತೀಯ), ಬಾಲಕಿಯರ ವಿಭಾಗದಲ್ಲಿ ವಿದ್ಯಾಶ್ರೀ ಸಿ.ಜಿ. (ಪ್ರಥಮ), ದಿವ್ಯಾಶ್ರೀ (ದ್ವಿತೀಯ) ಹಾಗೂ ಶೀತಲ್ ಜಿ.ಜಿ. ತೃತೀಯ ಬಹುಮಾನ ಪಡೆದಿದ್ದಾರೆ.

ಪ್ರಾಥಮಿಕ ಬಾಲಕಿಯರ ವಿಭಾಗದಲ್ಲಿ ಜೋಯಾ (ಪ್ರಥಮ), ಶ್ರಾವ್ಯ ಕೆ. (ದ್ವಿತೀಯ), ಶಾಜಿಯಾ (ತೃತೀಯ), ಬಾಲಕರ ವಿಭಾಗದಲ್ಲಿ ದರ್ಶನ್ (ಪ್ರಥಮ), ಅಜರ್ ಅಲಿ (ದ್ವಿತೀಯ) ಹಾಗೂ ಮೊಹಮ್ಮದ್ ಜುಲ್ದಿ ತೃತೀಯ ಸ್ಥಾನಗಳಿಗೆ ಪಾತ್ರರಾಗಿದ್ದಾರೆ.

1 ರಿಂದ 7ನೇ ತರಗತಿ ಮತ್ತು 8 ರಿಂದ 10ನೇ ತರಗತಿ ಶಾಲಾ ಬಾಲಕ-ಬಾಲಕಿಯರಿಗೆ ಪ್ರತ್ಯೇಕವಾಗಿ ಯೋಗ ಅರಿವು ಮತ್ತು ಉತ್ತೇಜನಕ್ಕಾಗಿ 5 ಸುಲಭ ಯೋಗಾಸನಗಳ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿತ್ತು. ವಿಜೇತರಿಗೆ ನಗದು ಬಹುಮಾನವಾಗಿ ಪ್ರಥಮ ರೂ. 1000, ದ್ವಿತೀಯ ರೂ.750 ಮತ್ತು ತೃತೀಯ ರೂ. 500 ಹಾಗೂ ಪ್ರಶಸ್ತಿ ಪತ್ರಗಳನ್ನು ನೀಡಲಾಯಿತು. ಯೋಗಸ್ಪರ್ಧೆಯ ಬಹುಮಾನದ ಪ್ರಾಯೋಜಕತ್ವವನ್ನು ಡಾ.ಸತ್ಯನಾರಾಯಣ ಮತ್ತು ಗಾಯತ್ರಿ ಎಸ್.ಎನ್. ವಹಿಸಿಕೊಂಡಿದ್ದರು.

### ಉಭಯ ಶ್ರೀಗಳ ಜಾತ್ರಾ ಮಹೋತ್ಸವ

## ಗಂಧರ್ವ ಲೋಕದ ದೇವತೆಗಳು ಉಭಯ ಶ್ರೀಗಳಾಗಿದ್ದಾರೆ : ಮೂರುಸಾವಿರ ಮಠದ ಶ್ರೀಗಳು




**ಗದಗ:** ಲಿಂ. ಪಂ. ಪಂಚಾಕ್ಷರಿ ಗವಾಯಿಗಳು ಹಾಗೂ ಲಿಂ. ಪಂ. ಪುಟ್ಟರಾಜ ಕವಿ ಗವಾಯಿಗಳವರು ಹಾನಗಲ್ ಕುಮಾರೇಶ್ವರ ಶ್ರೀಗಳ ತಪಸ್ಸಿನ ಫಲವಾಗಿ ಉಭಯ ಶ್ರೀಗಳು ಭುಲೋಕಕ್ಕೆ ಬಂದಿದ್ದಾರೆ ಎಂದು ಹುಬ್ಬಳ್ಳಿಯ ಮೂರುಸಾವಿರ ಮಠದ ಪೂಜ್ಯಶ್ರೀ ಜ. ಗುರುಸಿದ್ಧರಾಜಯೋಗೀಂದ್ರ ಮಹಾಸ್ವಾಮಿಗಳು ಹೇಳಿದರು.

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಪರಮಪೂಜ್ಯ ಲಿಂ. ಪಂ. ಪಂಚಾಕ್ಷರಿ ಗವಾಯಿಗಳವರ 81ನೇ ಹಾಗೂ ಪದ್ಮಭೂಷಣ ಲಿಂ.ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ 15ನೇ ಪುಣ್ಯಸ್ಮರಣೋತ್ಸವ ಹಾಗೂ ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ಸೋಮವಾರ ಜರುಗಿದ ಮಹಾರಥೋತ್ಸವ ಹಾಗೂ ಧರ್ಮೋತ್ತೇಜಕ ಮಹಾಸಭೆಯ ಸಾನಿಧ್ಯವಹಿಸಿ ಅವರು ಮಾತನಾಡಿ,

ತನಗಿಂತ ತನ್ನ ಶಿಷ್ಯರು ದೊಡ್ಡರಾಗಬಾರದೆಂದು ರಹಸ್ಯವನ್ನು ಕಲಿಸಿ ಕೊಡದ ಹಲವಾರು ಗುರುಗಳು ಇದ್ದಾರೆ. ಆದರೆ,

ತಮ್ಮ ಶಿಷ್ಯರು ತಮಗಿಂತ ಹೆಚ್ಚು ಬೆಳೆಯಲಿ ಎಂದು ಬದುಕಿದವರು ಉಭಯ ಶ್ರೀಗಳು. ವೀರೇಶ್ವರ ಪುಣ್ಯಾಶ್ರಮ ಹಣ ಮಾಡುವ ಸಂಸ್ಥೆಯಲ್ಲ ಸೇವೆ ಮಾಡುವ ಸಂಸ್ಥೆಯಾಗಿದೆ. ಲೋಕದ ಕಲ್ಯಾಣಕ್ಕಾಗಿ ಸೇವಾ ಕಾರ್ಯ ಮಾಡುವ ಸಂಸ್ಥೆಯಾಗಿದೆ. ಈ ಪುಣ್ಯಾಶ್ರಮದಿಂದ ಸಂಗೀತಗಾರರು, ಕಲಾವಿದರು, ಸಾಹಿತಿಗಳು, ನಾಟಕಕಾರರು, ಕೀರ್ತನಕಾರರು, ಪ್ರವಚನಕಾರುಗಳಾಗಿ ಸಾವಿರಾರು ಕಲಾವಿದರು ದೇಶದ ತುಂಬೆಲ್ಲ ತಮ್ಮ ಪ್ರತಿಭೆಯನ್ನು ಅನಾವರಣಗೊಳಿಸಿ ಪುಣ್ಯಾಶ್ರಮ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ಪರಿಶುದ್ಧ ಮನಸ್ಸಿನಿಂದ ಕಟ್ಟಿದ ಪುಣ್ಯಾಶ್ರಮ ಉತ್ತರೋತ್ತರವಾಗಿ ಬೆಳೆಯಲಿ ಎಂದು ಹಾರೈಸಿದರು.

ಉಪ್ಪಿನ ಬೆಟಗೇರಿಯ ಮೂರುಸಾವಿರಮಠದ ಪೂಜ್ಯಶ್ರೀ ಕುಮಾರ ವಿರುಪಾಕ್ಷ ಮಹಾಸ್ವಾಮಿಗಳು ಮಾತನಾಡಿ, ಪುಟ್ಟರಾಜ ಗವಾಯಿಗಳನ್ನು ನೋಡಿದರೆ ಪರಮಾತ್ಮನನ್ನು ನೋಡಿದಂತೆ ಅವರ ಆಶೀರ್ವಾದ ಪಡೆದವರ ಜನ್ಮ ಸಾರ್ಥಕವಾದಂತೆ ಎಂದು ಹೇಳಿದರು.

ವೇದಿಕೆ ಮೇಲೆ ಧಾರವಾಡ ಮುರಘಾಮಠದ ಪೂಜ್ಯಶ್ರೀ ಮಲ್ಲಿಕಾರ್ಜುನ ಮಹಾಸ್ವಾಮಿಗಳು, ಬಳಗಾನೂರ ಶ್ರೀಮಠದ ಪೂಜ್ಯಶ್ರೀ ಶಿವಶಾಂತವೀರ ಶರಣರು, ಅಡ್ನೂರ ಬ್ರಹನ್ಮಠದ ಅಭಿನವ ಪಂಚಾಕ್ಷರ ಶಿವಾಚಾರ್ಯರು,

ಮುದ್ದೇಬಿಹಾಳದ ಪೂಜ್ಯಶ್ರೀ ಡಾ. ಲಾಲಲಿಂಗೇಶ್ವರ ಶರಣರು, ಅಫಜಲಪೂರಿನ ಪೂಜ್ಯಶ್ರೀ ವಿರುಪಾಕ್ಷಿ ದೇವರು, ಲಿಂಗಸೂರಿನ ಪೂಜ್ಯಶ್ರೀ ಶಿವಶರಣೆ ನಂದೀಶ್ವರಿ ಅಮ್ಮನವರು ಉಪಸ್ಥಿತರಿದ್ದರು.

ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಡಿಡಿಪಿಐ ಆರ್.ಎಸ್. ಬುರಡಿ, ಡಾ. ಪುರುಶೋತ್ತಮಗೌಡ್ರ, ದತ್ತಪ್ಪ ಸಾಗನೂರ, ಡಾ. ಸಂಗಮೇಶ ಕೊಳ್ಳಿ, ಎಂ.ಕೆ.ಪಟ್ಟಣಶೆಟ್ಟಿ, ಬಾಬುರಾವ್ ಕೋಬಾಳ, ಬಸಯ್ಯ ಗುತ್ತೆದಾರ, ನಾಡಗೌಡ್ರ ಚನ್ನೂರ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ರಾಮಣ್ಣ ನಸಬಿ ಸಾ. ಬಿಳೇಕಲ್(ಸಂಗೀತ ಕ್ಷೇತ್ರ) ಅವರಿಗೆ 2025 ನೇ ಸಾಲಿನ ಪದ್ಮಭೂಷಣ ಪಂ. ಪುಟ್ಟರಾಜ ಪ್ರಶಸ್ತಿ ಹಾಗೂ ಜಗಳೂರಿನ

ವಿರೂಪಾಕ್ಷಯ್ಯ ಶಾಸ್ತ್ರಿ ಹಿರೇಮಠ (ಪ್ರವಚನ ಕ್ಷೇತ್ರ), ಬೆಂಗಳೂರಿನ ರಾಜು ಎಮ್ಮಿಗನೂರ (ಗಾಯನ ಕ್ಷೇತ್ರ) ಹಾಗೂ ಪ್ರಕಾಶ ಬಸರಿಗಿಡದ (ಭೂದಾನ ಕ್ಷೇತ್ರ) ಅವರುಗಳಿಗೆ ಕುಮಾರ ಶ್ರೀ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಗದುಗಿನ ಶ್ರೀ ಕುಮಾರೇಶ್ವರ ಕೃಪಾ ಪೋಷಿತ ಪಂ. ಪಂಚಾಕ್ಷರ ಗವಾಯಿಗಳವರ ಸಂಗೀತ ಪಾಠಶಾಲೆಯ ವಿಧ್ಯಾರ್ಥಿಗಳಿಂದ ಪ್ರಾರ್ಥನೆ ಜರುಗಿತು. ಪೂಜ್ಯಶ್ರೀ ಡಾ. ಕಲ್ಲಯ್ಯಜ್ಜನವರು ಅಭಾರ ಮನ್ನಣೆ ಮಾಡಿದರು. ಅಡ್ನೂರಿನ ಎಂ. ಕಲ್ಲಿನಾಥ ಶಾಸ್ತ್ರಿ ಅವರು ಕಾರ್ಯಕ್ರಮ ನಿರೂಪಿಸಿದರು.

ಇದಕ್ಕೂ ಮುನ್ನ ಸಂಜೆ 6 ಗಂಟೆಗೆ ಉಭಯ ಗುರುಗಳ ಮಹಾರಥೋತ್ಸವ ಅದ್ದೂರಿಯಾಗಿ ಜರುಗಿತು.

## ಮೆಸ್ಕಾಂ ಜನಸಂಪರ್ಕ ಸಭೆ

**ಶಿವಮೊಗ್ಗ:** ಮೆಸ್ಕಾಂ ಜೋಗ ಉಪವಿಭಾಗ ಕಛೇರಿಯಲ್ಲಿ ಜೂ.20 ರಂದು ಬೆಳಿಗ್ಗೆ 10.30 ರಿಂದ 12.00 ರವರೆಗೆ ಜನ ಸಂಪರ್ಕ ಸಭೆ ನಡೆಯಲಿದೆ. ಈ ಸಭೆಯಲ್ಲಿ ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದ್ದು, ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ; 9448289520.

## ಸೇನೆಗೆ ಸೇರ ಬಯಸುವ ಆಕಾಂಕ್ಷಿಗಳಿಗೆ ಮಾರ್ಗದರ್ಶನ

**ಶಿವಮೊಗ್ಗ:** ಸೇನೆಗೆ ಸೇರಲು ಬಯಸುವ ಆಸಕ್ತ ಯುವಕ/ಯುವತಿಯರಿಗಾಗಿ ಶಿವಮೊಗ್ಗದಲ್ಲಿ ಜೂ. 21 ರಂದು ಬೆಳಗ್ಗೆ 9.00 ಕ್ಕೆ ಮಂಗಳೂರು ಸೇನಾ ನೇಮಕಾತಿ ಕಛೇರಿಯ ನಿರ್ದೇಶಕರಿಂದ ಮಾರ್ಗದರ್ಶನ ಉಪನ್ಯಾಸವನ್ನು ಹಮ್ಮಿಕೊಳ್ಳಲಾಗಿದ್ದು, ಆಸಕ್ತ ಯುವಕ/ಯುವತಿಯರು ತಮ್ಮ ಹೆಸರು, ವಿದ್ಯಾರ್ಹತೆಯ ವಿವರಗಳನ್ನು ವಾಟ್ಸಪ್ ನಂಬರ್ 9591894552 ಗೆ ಕೇವಲ ವಾಟ್ಸಪ್ ಮೇಸೇಜ್ ಮಾಡುವ ಮೂಲಕ ನೋಂದಾಯಿಸಿಕೊಳ್ಳುವುದು.

ನೋಂದಾಯಿಸಿಕೊಂಡವರು ಮಾರ್ಗದರ್ಶನ ಉಪನ್ಯಾಸಕ್ಕೆ ಹಾಜರಾಗಲು ಅರ್ಹರಾಗಿರುತ್ತಾರೆಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.ಹೆಚ್ಚಿನ ಮಾಹಿತಿಯನ್ನು/ಮಾರ್ಪಾಡುಗಳನ್ನು ತಮ್ಮ ವಾಟ್ಸಪ್ ಸಂಖ್ಯೆಗೆ ಅಗತ್ಯವಿದ್ದಲ್ಲಿ ತಿಳಿಸಲಾಗುವುದು.

## ನೇರ ಸಂದರ್ಶನ

**ಗದಗ :** ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ(ಕಭಿ) ಕಾರ್ಯಕ್ರಮದಡಿಯಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಗುತ್ತಿಗೆ ಆಧಾರದ ಮೇಲೆ ನ್ಯೂರಾಲಾಜಿಸ್ಟ್/ ಫಿಜಿಷಿಯನ್/ವೈದ್ಯಕೀಯ ಅಧಿಕಾರಿ-01, ಶುಶ್ರೂಷಕರು-01, ಫಿಜಿಯೋಥೆರಪಿಸ್ಟ್-01, ಸ್ಪೀಚ್ ಥೆರಪಿಸ್ಟ್ -01, ಕ್ಲಿನಿಕಲ್ ಸೈಕಾಲಾಜಿಸ್ಟ್-01, ಜಿಲ್ಲಾ ಸಂಯೋಜಕರು-01 ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ಭರ್ತಿ ಮಾಡಲು ಜೂನ್ 24 ರಂದು ಬೆಳಿಗ್ಗೆ 10.30 ಘಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ ಕೋಠಡಿ ಸಂಖ್ಯೆ-101, ಜಿಲ್ಲಾಡಳಿತ ಭವನ ಗದಗದಲ್ಲಿ ಇಲ್ಲಿ ನೇರ ಸಂದರ್ಶನ ನಡೆಯಲಿದೆ.ಹೆಚ್ಚಿನ ಮಾಹಿತಿಗಾಗಿ ವೆಬ್‌ವೆಬ್‌ಸೈಟ್: ್ಣಣಠಿ://ರಿಜಚಿರ.ಟಿಛಿ.ಟಿ ನಲ್ಲಿ ವೀಕ್ಷಿಸಬಹುದು ಎಂದು ಜಿಲ್ಲಾ ಕುಷ್ಠರೋಗ ನಿರ್ಮೂಲನ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮುಂಗಾರು ಹಂಗಾಮಿನ ಬೆಳೆ ವಿಮಾ ನೋಂದಣಿಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** 2025-26 ನೇ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ವಿಮಾ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಮುಂಗಾರು ಹಂಗಾಮಿನ ಬೆಳೆ ವಿಮಾ ನೋಂದಣಿಗಾಗಿ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಮುಂಗಾರು ಹಂಗಾಮಿಗೆ ಆಯ್ದ ಹೋಬಳಿಗಳಲ್ಲಿ ಮಳೆ ಆಶ್ರಿತ ಬೆಳೆಗಳಾದ ರಾಗಿ, ಜೋಳ ಹಾಗೂ ಪಂಚಾಯಿತಿ ಮಟ್ಟದಲ್ಲಿ ನೀರಾವರಿ/ಮಳೆ ಆಶ್ರಿತ ಬೆಳೆಗಳಾದ ಭತ್ತ, ಮುಸುಕಿನ ಜೋಳ ಬೆಳೆಗಳು ಆಯ್ಕೆ ಆಗಿದ್ದು, ಜಿಲ್ಲೆಯಲ್ಲಿ ಬೆಳೆ ವಿಮಾ ಯೋಜನೆಯನ್ನು ಸರ್ಕಾರದಿಂದ ಆಯ್ಕೆಯಾದ ಓರಿಯೆಂಟಲ್ ಜನರಲ್ ಇನ್‌ಶ್ಯೂರೆನ್ಸ್ ಕಂಪನಿಯ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುವುದು. ವಿಮಾ ಬೆಳೆ ನೋಂದಣಿ ಮಾಡಿಕೊಳ್ಳಲು ಜು.31 (ಮುಸುಕಿನ ಜೋಳ) ಹಾಗೂ ಆ.16 (ಭತ್ತ, ಜೋಳ,ರಾಗಿ) ಕೊನೆಯ ದಿನಾಂಕವಾಗಿದೆ. ಬಿತ್ತನೆ/ನಾಟಿ ಮಾಡುವುದಕ್ಕಿಂತ ಮುಂಚಿತವಾಗಿಯೇ ನೋಂದಾಯಿಸಲು ಅವಕಾಶವಿದ್ದು, ಬೆಳೆ ಸಾಲ ಪಡೆಯದ ರೈತರು ಅರ್ಜಿಯೊಂದಿಗೆ ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಪಹಣಿ ಮತ್ತು ಆಧಾರ್ ಸಂಖ್ಯೆ ಸಹಿತ ತಮಗೆ ಹತ್ತಿರವಿರುವ ಬ್ಯಾಂಕ್/ಆರ್ಥಿಕ ಸಂಸ್ಥೆಗಳು/ಸಾರ್ವಜನಿಕ ಸೇವಾ ಕೇಂದ್ರಗಳಲ್ಲಿ (ಸಿಎಸ್‌ಸಿ ಕೇಂದ್ರಗಳು) ನೋಂದಾಯಿಸಿಕೊಳ್ಳಬಹುದು.

# ಕ್ರಾಂತಿಕಾರಿ ಬದಲಾವಣೆ ಬಂದೂಕಿನಿಂದ ಅಸಾಧ್ಯ, ಹೋರಾಟದಿಂದ ಸಾಧ್ಯ: ಲೋಕೇಶ್



**ಚಿಕ್ಕಮಗಳೂರು:** ಜನರಲ್ಲಿ ಕ್ರಾಂತಿಕಾರಿ ಬದಲಾವಣೆ ಮೂಡಿಸುವುದು ಬಂದೂಕಿನಿಂದಲ್ಲ, ಹೊಸ ರಾಜಕೀಯ ಬದಲಾವಣೆ ಅರ್ಥೈಸಿಕೊಂಡು, ನಿವೇಶನ ಹಾಗೂ ಭೂರಹಿತರು ಹೋರಾಟ ರೂಪಿಸಿದಾಗ ಸಮಾಜದಲ್ಲಿ ಕ್ರಾಂತಿಕಾರಿ ಬದಲಾವಣೆ ಸಾಧ್ಯ ಎಂದು ಸಿಪಿಐ ರಾಷ್ಟ್ರೀಯ ಮಂಡಳಿ ಸದಸ್ಯ ಪಿ.ವಿ. ಲೋಕೇಶ್ ಹೇಳಿದರು.

ನಗರದ ಸಿಪಿಐ ಕಚೇರಿಯಲ್ಲಿ ಇಂದು ನಡೆದ ಭಾರತ ಕಮ್ಯೂನಿಸ್ಟ್ ಪಕ್ಷದ ಶತಮಾನ ಸಂಭ್ರಮ ಹಾಗೂ ತಾಲ್ಲೂಕು ಸಮಾವೇಶ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಶತಮಾನದಿಂದ ಅಧಿಕಾರ ಹೊರತಾಗಿ ಜನತೆಯ ನೋವು, ನಿರಾಸೆ ಹಾಗೂ ಶೋಷಿತರ ಪರವಾಗಿ ನಿರಂತರವಾಗಿ ಹೋರಾಡುತ್ತಿರುವ ಪಕ್ಷ ಸಿಪಿಐ. ಸ್ವಾತಂತ್ರ್ಯ ಪೂರ್ವದ ಮುಂಚೆಯೂ ಬ್ರಿಟಿಷರ ಅಡಿಯಾಳಾಗಿ ಅಧಿಕಾರ ನಡೆಸಿದ ಎರಡು ರಾಷ್ಟ್ರೀಯ ಪಕ್ಷಗಳು ರೈತರು, ಕಾರ್ಮಿಕ ವರ್ಗವನ್ನು ಅಡಿಯಾಳಾಗಿಸಿಕೊಂಡು ವೈಯಕ್ತಿಕವಾಗಿ ಸಿರಿಸಂಪತ್ತು ಹೆಚ್ಚಿಸಿಕೊಳ್ಳುತ್ತಿದೆ ಎಂದು ಆರೋಪಿಸಿದರು.

ದೇಶದ ಬಹುಸಂಖ್ಯಾತರು ಮುಂಚೂಣಿಗೆ ತರುವ ನಿಟ್ಟಿನಲ್ಲಿ ಜಾತಿ ಸಮೀಕ್ಷೆ ಕಡ್ಡಾಯವಾಗಿದೆ. ಆದರೆ ಕೇಂದ್ರ ಸರ್ಕಾರ ಜನಗಣತಿಗೆ ಮುಂದಾಗಿರುವುದು ಸರಿಯಾದ ನಿರ್ಧಾರವಲ್ಲ. ಈ ಹಿಂದೆ 1932ರಲ್ಲಿ ಬ್ರಿಟಿಷರ ಆಳ್ವಿಕೆಯಲ್ಲಿ ಜಾತಿ ಸಮೀಕ್ಷೆ ನಡೆದಿತ್ತು. ಇದಾದ ಬಳಿಕ ಇಂದಿಗೂ ದೇಶದಲ್ಲಿ ಸಮೀಕ್ಷೆಗೆ ಯಾವ ಸರ್ಕಾರಗಳು ಆಸಕ್ತಿ ತೋರದೇ ಬಹುಜನರನ್ನು ತುಳಿಯುತ್ತಿದೆ ಎಂದರು.

ರೈತರು, ವಸತಿ ರಹಿತರು ಹಾಗೂ ಶೋಷಿತರ ಮೇಲಿನ ದೌರ್ಜನ್ಯ, ದಬ್ಬಾಳಿಕೆ ಹಿಮ್ಮೆಟ್ಟಿಸಿ ಹೋರಾಡಿದ ಪಕ್ಷ ಸಿಪಿಐ ಎಂದ ಅವರು, ಈ ಫಲವಾಗಿ ಕಳೆದ ಎರಡು ದಶಕಗಳಿಂದ ಜನಾಂಗವು ಹಂತ ಹಂತವಾಗಿ ಪ್ರಗತಿ ಸಾಧಿಸಿದೆ. ಆದರೆ, ರಾಜ್ಯದಲ್ಲಿ ಕಾರ್ಮಿಕರಿಗೆ 8 ಗಂಟೆ ಕೆಲಸವನ್ನು 12 ಗಂಟೆಗೆ ಸೀಮಿತಗೊಳಿಸಿ ದುಡಿಯುವ ವರ್ಗದ ಹಕ್ಕುಗಳನ್ನು ಕಸಿದುಕೊಳ್ಳುತ್ತಿದೆ ಎಂದು ದೂರಿದರು.

1925 ರಲ್ಲಿ ನಾಗ್ಪುರದಲ್ಲಿ ಜನನ ಪಕ್ಷವು ಶೈಕ್ಷಣಿಕ ಸಾಲಿಗೆ ಶತಮಾನೋತ್ಸವ ಪೂರೈಸಿದೆ. ಪಕ್ಷದ ಶಿಸ್ತು, ಸಂಯಮ ಹಾಗೂ ವಿಧಿವಿಧಾನಗಳು ಬೇರೆ ಯಾವುದೇ ರಾಜಕೀಯ ಪಕ್ಷದಲ್ಲಿಲ್ಲ. ಮೂರು ವರ್ಷಕ್ಕೊಮ್ಮೆ ಹೊಸ ಸಮಿತಿ ಸ್ಥಾಪಿಸುತ್ತದೆ. ಪ್ರಸಕ್ತ ರಾಜಕೀಯ ಸವಾಲುಗಳನ್ನು ಎದುರಿಸಿ ಬಡವರ್ಗಕ್ಕೆ ವಿಭಿನ್ನ ಹೋರಾಟದಿಂದಲೇ ಕಮ್ಯೂನಿಸ್ಟ್ ಬೆಳೆದುಕೊಂಡು ಬಂದಿದೆ ಎಂದರು.

ಮುಂದಿನ ದಿನಗಳಲ್ಲಿ ರಾಜಕಾರಣ ಬಹಳಷ್ಟು ಕಠಿಣತೆಯಿಂದ ಕೂಡಿದೆ. ತೆರಿಗೆ, ರೈತರ ಸಮಸ್ಯೆ, ವಸತಿ, ಶಿಕ್ಷಣ, ಆಹಾರ ಪದ್ಧತಿ ಅಪಾಯದಲ್ಲಿದೆ. ಹಣವಿದ್ದವನು ಮಾತ್ರ ಅಧಿಕಾರ ಎಂಬಂತಾಗಿದೆ. ಜಾತಿ ಪ್ರಾಬಲ್ಯ ಬಹುದೊಡ್ಡ ಶಕ್ತಿ ವಹಿಸುತ್ತಿದೆ. ಕಾನೂನು ಬದಲಾವಣೆ, ಜಾತಿ-ಧರ್ಮದ ಕಿತ್ತಾಟಗಳಿವೆ. ಕರಾವಳಿ ಭಾಗದಲ್ಲೂ ಪರಸ್ಪರ ಒಡೆದಾಳಿ ಸಂವಿಧಾನ ಆಶಯಕ್ಕೆ ವಿರುದ್ಧವಾಗಿ ರಾಜಕಾರಣ ನಡೆಯುತ್ತಿವೆ ಎಂದರು.

ಸಂವಿಧಾನದ ಆಶಯದಲ್ಲಿ ಸರ್ವರಿಗೂ ಸಮಾನ ಗೌರವ, ಉದ್ಯೋಗ, ಬದುಕಿಗನುಸಾರ ವೇತನ, ಭೂಮಿ, ಜಾತಿರಹಿತ ಸಮಾಜದ ಉದ್ದೇಶ. ಆದ-ರೆ ಸ್ವಾತಂತ್ರ್ಯವಾಗಿ ಏಳು ದಶಕ ಪೂರೈಸಿದರೂ ಬಡವರು, ಶೋಷಿತರ ಕನಸು ಛಿದ್ರವಾಗುತ್ತಿದೆ. ಕಾರ್ಮಿಕ ವರ್ಗ ಅಧಿಕಾರ ಹಿಡಿಯದೇ ಗಡಿಪಾರು, ರೌಡಿಗಳು, ದಲ್ಲಾಳಿ, ಮಠದ ಪ್ರತಿನಿಧಿಗಳು ಜನಪ್ರತಿನಿಧಿಗಳಾಗಿ ದುಡಿಯುವ ವರ್ಗಕ್ಕೆ ಬಹುದೊಡ್ಡ ಮೋಸ ಮಾಡುತ್ತಿದೆ ಎಂದು ತಿಳಿಸಿದರು.

ರಾಜ್ಯ ಮಂಡಳಿ ಸದಸ್ಯ ಹೆಚ್.ಎಂ.ರೇಣುಕಾರಾಧ್ಯ ಮಾತನಾಡಿ, ರಾಜ್ಯದ ಜನತೆ ಟಿವಿ ಮಾಧ್ಯಮಗಳಲ್ಲಿ ಪ್ರಸಾರಗೊಳ್ಳುವ ಎರಡೇ ರಾಜಕೀಯ ಪಕ್ಷಗಳು ಎಂದು ನಂಬುತ್ತಿದೆ. ಈ ರಾಜಕಾರಣಿಗಳು ವ್ಯಾಪಾರ ದೃಷ್ಟಿಯಿಂದ ರಾಜಕಾರಣ ಮಾಡುತ್ತಿದೆ. ಟಿಕೇಟ್‌ಗಾಗಿ ಜಾತಿ ಮತ್ತು ಖರ್ಚಿನ ಶಕ್ತಿ ಕೇಳುತ್ತಾರೆ. ಈ ನಡುವೆ ಸಿಪಿಐ ತ್ಯಾಗ, ಬಲಿದಾನದಿಂದ ರಾಷ್ಟ್ರಮಟ್ಟದಲ್ಲಿ ಗುರುತಿಸಿಕೊಂಡು ಉತ್ತಮ ಪಕ್ಷವಾಗಿ ಹೊರಹೊಮ್ಮಿದೆ ಎಂದು ಹೇಳಿದರು.

ಚುನಾವಣಾ ಅಖಾಡದಲ್ಲಿ ಎಲ್ಲರೂ ನಮ್ಮವರೇ ಎಂದೇಳುವ ಬಿಜೆಪಿ, ಕಾಂಗ್ರೆಸ್ ಹಾಗೂ ಜೆಡಿಎಸ್ ಪಕ್ಷಗಳು, ಅಧಿಕಾರದ ಬಳಿಕ ಮೇಲ್ಜಾತಿಗೆ ಒತ್ತು ನೀಡುತ್ತದೆ. ಸಮಾಜದಲ್ಲಿ ಉತ್ತಮ ನಡತೆ, ಎಲ್ಲರೂ ಪ್ರೀತಿ ಸುಗುಣ ಹಾಗೂ ಪರೋಪಕಾರಿ ಮನುಜನೇ ನಿಜವಾದ ಮೇಲ್ಜಾತಿ ವ್ಯಕ್ತಿಯಾಗಲು ಸಾಧ್ಯವಾಗಿದೆ. ಜೊತೆಗೆ ಬಡವರು ಮಕ್ಕಳು ಸಮಾಜದಲ್ಲಿ ಪ್ರತಿಷ್ಠಿತ ನಾಗರೀಕರಾಗುವುದೇ ಸಿಪಿಐ ಧ್ಯೇಯವಾಗಿದೆ ಎಂದರು.

ಜಿಲ್ಲೆಯ ವಿವಿಧ ಭಾಗಗಳಲ್ಲಿ ನಿವೇಶನ, ವಸತಿ ರಹಿತರಿಗೆ ಶಾಶ್ವತ ಸೂರು ನಿರ್ಮಿಸಲು ಸಿಪಿಐನ ಬಹುದೊಡ್ಡ ಪಾತ್ರವಿದ್ದು, ಯಾವುದೇ ರಾಜಕೀಯ ಜನಪ್ರತಿನಿಧಿಗಳ ಕೊಡುಗೆಯಿಲ್ಲ. ಅಲ್ಲದೇ ಜಿಲ್ಲೆಯ ಯಾವುದೇ ಭಾಗದಲ್ಲಿ ದಬ್ಬಾಳಿಕೆ, ದೌರ್ಜನ್ಯಕ್ಕೆ ಒಳಗಾದವರಿಗೆ ಸಿಪಿಐ ಕೆಂಬಾವುಟ ಸಹಕಾರ ನೀಡಿ ಕೈಜೋಡಿಸಿದರೆ ಬಲಾಢ್ಯ ಭೂಮಾಲೀಕರಲ್ಲಿ ಭಯದ ವಾತಾವರಣ ಸೃಷ್ಟಿಸುವ ರೀತಿಯಲ್ಲಿ ಸಂಘಟನೆ ಶಕ್ತಿ ಪಡೆದುಕೊಂಡಿದೆ ಎಂದು ಹೇಳಿದರು.

ಸಿಪಿಐ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಧಾಸುಂದ್ರೇಶ್ ಮಾತನಾಡಿ, ಮುಂದಿನ ದಿನಗಳಲ್ಲಿ ಕಾರ್ಮಿಕರು, ರೈತರು ಎಚ್ಚೆತ್ತುಕೊಂಡು ಸ್ವಹಕ್ಕುಗಳನ್ನು ಪಡೆದುಕೊಳ್ಳುವ ಶಕ್ತಿ ಬೆಳೆಸಿಕೊಂಡರೆ ಮಾತ್ರ ಸಮಾಜದಲ್ಲಿ ಘನತೆಯಿಂದ ಜೀವಿಸಲು ಸಾಧ್ಯ ಹಾಗೂ ಜಿ.ಪಂ, ತಾ.ಪಂ, ಗ್ರಾ.ಪಂ. ಚುನಾವಣೆಗಳಿಗೆ ಕಾರ್ಯಕರ್ತರು ಸಜ್ಜಾಗಿ ದುಡಿವವರನ್ನು ಆಳುವ ವರ್ಗವನ್ನಾಗಿ ರೂಪಿಸಬೇಕು ಎಂದು ತಿಳಿಸಿದರು.

ಸಮಾವೇಶದ ಅಧ್ಯಕ್ಷತೆಯನ್ನು ಸಿಪಿಐ ತಾಲ್ಲೂಕು ಕಾರ್ಯದರ್ಶಿ ಕೆರೆಮಕ್ಕಿ ರಮೇಶ್ ವಹಿಸಿದ್ದರು. ಈ ಸಂದರ್ಭದಲ್ಲಿ ಪಕ್ಷದ ಜಿಲ್ಲಾ ಸಹ ಕಾರ್ಯದರ್ಶಿಗಳಾದ ಜಿ.ರಘು, ಕೆಳಗೂರು ರಮೇಶ್, ಸದಸ್ಯ ಎಸ್. ವಿಜಯ್‌ಕುಮಾರ್, ತಾಲ್ಲೂಕು ಸಹ ಕಾರ್ಯದರ್ಶಿ ಕುಮಾರ್, ನಗರ ಕಾರ್ಯದರ್ಶಿ ಜಿ. ರಮೇಶ್ ಇದ್ದರು.

# ವಸತಿ ನಿಲಯ, ಬಿಎಂಸಿಆರ್‌ಸಿ ವಿಶೇಷ ನವಜಾತ ಶಿಶುಗಳ ಆರೈಕೆ ಘಟಕಕ್ಕೆ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಸದಸ್ಯರ ಭೇಟಿ-ಪರಿಶೀಲನೆ



**ಬಳ್ಳಾರಿ:** ನಗರದ ಬಳ್ಳಾರಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಕೇಂದ್ರದ ಎನ್‌ಆರ್‌ಸಿ ಘಟಕ, ವಿಶೇಷ ನವಜಾತ ಶಿಶುಗಳ ಆರೈಕೆ ಘಟಕ ಹಾಗೂ ಹೆರಿಗೆ ವಾರ್ಡ್‌ಗೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶಶಿಧರ್ ಕೋಸಂಬೆ, ಡಾ.ತಿಪ್ಪೇಸ್ವಾಮಿ ಕೆ.ಟಿ ನೇತೃತ್ವದ ತಂಡ ಬುಧವಾರ ಭೇಟಿ ನೀಡಿ ಪರಿಶೀಲಿಸಿದರು.

ಜಿಲ್ಲೆಯಲ್ಲಿ ಕಳೆದ ಐದು ತಿಂಗಳಲ್ಲಿ ನೂರಕ್ಕೂ ಹೆಚ್ಚು ನವಜಾತ ಶಿಶುಗಳ ಮೃತಪಟ್ಟಿರುವುದು ಕಳವಳಕಾರಿ ಸಂಗತಿಯಾಗಿದ್ದು, ವೈದ್ಯರು ಇದನ್ನು ಗಂಭೀರವಾಗಿ ಪರಿಗಣಿಸಬೇಕು. ನವಜಾತ ಶಿಶುಗಳ ಸಾವಿಗೆ ನಿಖರವಾಗಿ ಕಾರಣ ತಿಳಿದು, ಪರಿಹಾರ ಕಂಡುಕೊಳ್ಳಬೇಕು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಸದಸ್ಯ ಶಶಿಧರ್ ಕೋಸಂಬೆ ಅವರು ಸೂಚಿಸಿದರು.

ಮಕ್ಕಳ ಅಪೌಷ್ಟಿಕ ಪುನಃಶ್ಚೇತನ ಘಟಕಕ್ಕೆ ಭೇಟಿ ನೀಡಿದ ತಂಡ ದಾಖಲಾದ ಮಕ್ಕಳ ಸ್ಥಿತಿಗತಿ ವಿಚಾರಿಸಿ, ಶೌಚಾಲಯಗಳನ್ನು ಪರಿಶೀಲಿಸಿದರು. ಬಾಲ ಚೈತನ್ಯ ಯೋಜನೆಯಡಿ 23 ಮಕ್ಕಳ ದಾಖಲಾಗಿವೆ. ಅರ್‌ಬಿಎಸ್‌ಕೆ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಜಿಲ್ಲೆಯಲ್ಲಿರುವ ಅಪೌಷ್ಟಿಕ ಮಕ್ಕಳನ್ನು ದಾಖಲಿಸಲು ಕ್ರಮಕೈಗೊಳ್ಳಬೇಕು ಎಂದು ತಿಳಿಸಿದರು.

ಕಳೆದ ವರ್ಷ 48,569 ನವಜಾತ ಶಿಶುಗಳನ್ನು ಮಕ್ಕಳ ಚಿಕಿತ್ಸಾ ವಿಭಾಗದಲ್ಲಿ ದಾಖಲಾಗಿದ್ದವು. ಅದರಲ್ಲಿ 293 ನವಜಾತ ಶಿಶುಗಳು ವಿವಿಧ ಕಾರಣಗಳಿಂದ ಮೃತಪಟ್ಟಿವೆ. ಪ್ರಸಕ್ತ ವರ್ಷ ಜನವರಿಯಿಂದ ಏಪ್ರಿಲ್‌ವರೆಗೆ 1,119 ನವಜಾತ ಶಿಶುಗಳು ದಾಖಲಾಗಿದ್ದು, 103 ನವಜಾತ ಶಿಶುಗಳು ಮೃತಪಟ್ಟಿವೆ. ಮಕ್ಕಳ ಸಾವಿನ ಬಗ್ಗೆ ನಿಖರವಾದ ಕಾರಣ ತಿಳಿಯಬೇಕು ಎಂದು ವೈದ್ಯರಿಗೆ ನಿರ್ದೇಶನ ನೀಡಿದರು.

ಬಿಎಂಸಿಆರ್‌ಸಿ ಯ ವಿಶೇಷ ನವಜಾತ ಶಿಶುಗಳ ಆರೈಕೆ ಘಟಕ ಮತ್ತು ಹೆರಿಗೆ ವಾರ್ಡ್‌ನಲ್ಲಿ ಸೆಖೆ ಇದ್ದರೂ ಯಾಕೆ ಎಸಿ ಹಾಕಿಲ್ಲ ಎಂದು ವೈದ್ಯರನ್ನು ಪ್ರಶ್ನಿಸಿದರು. ಕೂಡಲೇ ಎಸಿ ಅಳವಡಿಕೆ ಸೂಚನೆ ನೀಡಿದರು. ಇದೇ ವೇಳೆ ದಾಖಲಾಗದ ಮಕ್ಕಳ ಮಾಹಿತಿ ಪಡೆದರು.

ಹೆರಿಗೆ ವಾರ್ಡ್‌ನಲ್ಲಿನ ಶೌಚಾಲಯ ಹಾಗೂ ಸ್ನಾನ ಗೃಹಗಳನ್ನು ಪರಿಶೀಲಿಸಿದರು. ಇಲ್ಲಿ ತಿಂಗಳಿಗೆ 700ಕ್ಕಿಂತ ಹೆಚ್ಚು ಹೆರಿಗೆ ಆಗುತ್ತಿವೆ. ಸ್ನಾನ ಗೃಹಗಳಲ್ಲಿ ಚಿಕ್ಕ ಗಾತ್ರದ ಗೀಜರ್‌ಯಿಂದ ಬರುವ ಬಿಸಿನೀರು ಬಾಣಂತಿಯರ ಸ್ನಾನಕ್ಕೆ ಸಾಕುಗುತ್ತದೆಯೇ ಎಂದು ವಿಚಾರಿಸಿದ ಅವರು ಬಾಣಂತಿಯರ ಸ್ನಾನಕ್ಕೆ ಬಿಸಿನೀರು ಕೊಡುವುದು ಕರ್ತವ್ಯವಾಗಿದೆ ಎಂದು ತಿಳಿಸಿದರು.

ಬಳಿಕ ನಗರದ ಕಪ್ಪಗಲ್ಲು ರಸ್ತೆಯ ಪರಿಶಿಷ್ಟ ಪಂಗಡದ ಮೆಟ್ರಿಕ್ ನಂತರದ ಬಾಲಕೀಯರ ವಸತಿ ನಿಲಯಕ್ಕೆ ಆಯೋಗದ ಸದಸ್ಯರು ಭೇಟಿ ನೀಡಿ ದಾಖಲಾತಿ, ಕೊಠಡಿ, ಶೌಚಾಲಯ ಸೇರಿದಂತೆ ಅಡುಗೆ ಕೋಣೆ ಪರಿಶೀಲಿಸಿದರು.

ಬಳಿಕ ಸಿರಿವಾರ ಗ್ರಾಮದ ಸರ್ಕಾರಿ ಶಾಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸಂಜೆ ನಂತರ ಶಾಲಾ ಆವರಣದಲ್ಲಿ ಹೊರಗಿನವರು ಬಂದು ಅಹಿತಕರ ಚಟುವಟಿಕೆ ಕೈಗೊಳ್ಳುತ್ತಿರುವುದು ಸ್ಥಳೀಯರು ಗಮನಕ್ಕೆ ತಂದಿದ್ದು, ಪೊಲೀಸರು ನಿಯಮಿತವಾಗಿ ಬಿಟ್ ನಡೆಸಬೇಕು ಎಂದು ಸೂಚಿಸಿದರು.

ಇನ್ನೋರ್ವ ಸದಸ್ಯರಾದ ವೆಂಕಟೇಶ್ ಅವರು, ಅಲ್ಲೀಪುರ ಗ್ರಾಮದ ಬಳಿಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೊರಾರ್ಜಿ ವಸತಿ ಕಾಲೇಜು ಮತ್ತು ನಿಲಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಡಿಎಚ್‌ಒ ಡಾ.ವೈ.ರಮೇಶ್ ಬಾಬು, ಪರಿಶಿಷ್ಟ ವರ್ಗಗಳ ಕಲ್ಯಾಣಾಕಾರಿ ದಿವಾಕರ್ ಕೆ ಶಂಕಿನದಾಸರ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ವಿಠೋಬಾ ಹೊನಕಾಂಡೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ಎಳೆ ನಾಗಪ್ಪ ಸೇರಿದಂತೆ ಇತರರು ಇದ್ದರು.

## ವಿಶ್ವಸಂಸ್ಥೆಯ ನಿರ್ಣಯದಿಂದ ದೂರ ಉಳಿದ ಸರ್ಕಾರದ ನಿಲುವು ಖಂಡಿಸಿದ ಕಾಂಗ್ರೆಸ್

**ನವದೆಹಲಿ,ಜೂ15:** ಗಾಝಾದಲ್ಲಿ ಕದನ ವಿರಾಮಕ್ಕಾಗಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ನಿರ್ಣಯದ ಸಮಯದಲ್ಲಿ ಮತದಾನದಿಂದ ದೂರ ಉಳಿದಿದ್ದಕ್ಕಾಗಿ ಕಾಂಗ್ರೆಸ್ ಶನಿವಾರ ಕೇಂದ್ರ ಸರ್ಕಾರವನ್ನು ಟೀಕಿಸಿತು ಮತ್ತು ಭಾರತದ ವಿದೇಶಾಂಗ ನೀತಿ "ಅಸ್ತವ್ಯಸ್ತವಾಗಿದೆ" ಎಂದು ಆರೋಪಿಸಿದರು.



ಪಶ್ಚಿಮ ಏಷ್ಯಾದಲ್ಲಿ ಕದನ ವಿರಾಮ, ಶಾಂತಿ ಮತ್ತು ಸಂವಾದವನ್ನು ಪ್ರತಿಪಾದಿಸುವ ತನ್ನ ತಾತ್ವಿಕ ನಿಲುವನ್ನು ಭಾರತ ಕೈಬಿಟ್ಟಿದೆಯೇ ಎಂದು ಪಕ್ಷ ಕೇಳಿದೆ ಮತ್ತು ಈ ನಿರ್ಧಾರದಿಂದಾಗಿ ದೇಶವು "ವಾಸ್ತವವಾಗಿ ಪ್ರತ್ಯೇಕವಾಗಿದೆ" ಎಂದು ಹೇಳಿದೆ.

193 ಸದಸ್ಯರ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಮತದಾನದಿಂದ ದೂರ ಉಳಿಯುವ ಕೇಂದ್ರ ಸರ್ಕಾರದ ನಿರ್ಧಾರವನ್ನು ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ಸೇರಿದಂತೆ ಕಾಂಗ್ರೆಸ್ ತೀವ್ರವಾಗಿ ಖಂಡಿಸಿದೆ.ನಿರ್ಣಯದ ಪರವಾಗಿ 149 ಮತಗಳು ಬಿದ್ದರೆ, 12 ದೇಶಗಳು ನಿರ್ಣಯದ ವಿರುದ್ಧ ಮತ ಚಲಾಯಿಸಿದವು.

2023 ರ ಅಕ್ಟೋಬರ್‌ನಲ್ಲಿ ಪ್ರಾರಂಭವಾದ ಇಸ್ರೇಲ್-ಪ್ಯಾಲೆಸ್ಟೈನ್ ಸಂಘರ್ಷದ ಬಗ್ಗೆ ಭಾರತ ಇಲ್ಲಿಯವರೆಗೆ ಸಮತೋಲಿತ ನಿಲುವನ್ನು ತೆಗೆದುಕೊಂಡಿದೆ.

## ಕ್ಯಾನ್ಸರ್ ಪೀಡಿತ ಮಕ್ಕಳಿಗೆ ಪ್ರತ್ಯೇಕ ಶಾಲೆ

**ಶಿವಮೊಗ್ಗ:** ಕ್ಯಾನ್ಸರ್ ನಿಂದ ಬಳಲುತ್ತಿರುವ ಮಕ್ಕಳಿಗಾಗಿ ರಾಜ್ಯ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದ್ದು ಅಂತಹ ಮಕ್ಕಳಿಗೆ ಪ್ರತ್ಯೇಕ ಶಾಲೆ ಪ್ರಾರಂಭಿಸುವ ನಿರ್ಧಾರ ತೆಗೆದುಕೊಂಡಿ-ದೆ.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕ್ಯಾನ್ಸರ್‌ನಿಂದ ಬಳಲುತ್ತಿರುವ ಮಕ್ಕಳಿಗಾಗಿ ನಾವು ಪ್ರತ್ಯೇಕ ಶಾಲೆ ಆರಂಭಿಸುತ್ತಿದ್ದೇವೆ. ಬೆಂಗಳೂರಿನ ಕಿದ್ವಾಯಿ ಆಸ್ಪತ್ರೆ ಬಳಿ ಇದನ್ನು ಆರಂಭಿಸಲು ನಿರ್ಧರಿಸಿದ್ದೇವೆ. ಇಲ್ಲಿ ಚಿಕಿತ್ಸೆಯ ಜೊತೆಗೆ ಶಿಕ್ಷಣವನ್ನೂ ನೀಡಲಾಗುವುದು ಎಂದು ತಿಳಿಸಿದ್ದಾರೆ.

ಮಕ್ಕಳಿಗೆ ಶಿಕ್ಷಣದಲ್ಲಿ ಗುಣಮಟ್ಟ, ಸಮಾನತೆ ಮತ್ತು ಪ್ರವೇಶವನ್ನು ಖಚಿತಪಡಿಸಿಕೊಳ್ಳಲು ನಾವು ಈ ಕ್ರಮ ಕೈಗೊಳ್ಳುತ್ತಿದ್ದೇವೆ.

ಸರ್ಕಾರೇತರ ಸಂಸ್ಥೆಗಳ ಸಹಯೋಗದೊಂದಿಗೆ ನಾವು ಈ ಯೋಜನೆಯನ್ನು ಜಾರಿಗೆ ತರುತ್ತಿದ್ದೇವೆ. ಪ್ರಸ್ತುತ, ನಮ್ಮ ರಾಜ್ಯದಲ್ಲಿ 3,500 ಮಕ್ಕಳು ಕ್ಯಾನ್ಸರ್ ನಿಂದ ಬಳಲುತ್ತಿರಬಹುದು ಎಂದು ಅಂದಾಜಿಸಲಾಗಿದೆ. 1,500 ಮಕ್ಕಳು ಬರುವ ನಿರೀಕ್ಷೆಯಿದೆ. 1 ರಿಂದ 10 ನೇ ತರಗತಿಯವರೆಗೆ ಶಾಲೆ ಆರಂಭಿಸುತ್ತಿದ್ದೇವೆ.

## ರಾಷ್ಟ್ರೀಯ ಬೆಳವಣಿಗೆಗೆ ಕರ್ನಾಟಕದ ಆರ್ಥಿಕ ಶಕ್ತಿಯೇ ಇಂಧನ

### 16ನೇ ಹಣಕಾಸು ಆಯೋಗದ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಪ್ರತಿಪಾದನೆ

**ನವದೆಹಲಿ:** ಮುಖ್ಯಮಂತ್ರಿ ಸಿದ್ದರಾಮಯ್ಯ 16ನೇ ಹಣಕಾಸು ಆಯೋಗದ ಅಧ್ಯಕ್ಷ ಅರವಿಂದ ಪರಗಾರಿಯಾ ಮತ್ತು ಸದಸ್ಯರನ್ನು ಭೇಟಿಯಾಗಿ ರಾಜ್ಯದ ಹೆಚ್ಚುವರಿ ಜ್ಞಾಪನಾ ಪತ್ರವನ್ನು ಆಯೋಗಕ್ಕೆ ಸಲ್ಲಿಸಿದರು.




16ನೇ ಹಣಕಾಸು ಆಯೋಗದ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ, ಕರ್ನಾಟಕದ ಆರ್ಥಿಕ ಬಲವು ರಾಷ್ಟ್ರೀಯ ಬೆಳವಣಿಗೆಗೆ ಇಂಧನವಾಗಿದೆ. ಕರ್ನಾಟಕ ಆರ್ಥಿಕವಾಗಿ ಬೆಳವಣಿಗೆಯಾದರೆ ಕೇಂದ್ರ ಸರ್ಕಾರದ ಬೆಳವಣಿಗೆಯೂ ಆಗುತ್ತದೆ. ಹಾಗಾಗಿ ನ್ಯಾಯಯುತವಾಗಿ ತೆರಿಗೆ ಹಂಚಿಕೆಯಾಗಬೇಕು ಎಂದು ಕೋರಲಾಗಿದೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಪ್ರತಿ ವರ್ಷ 4.5 ಲಕ್ಷ ಕೋಟಿ ತೆರಿಗೆ ನೀಡುತ್ತದೆ. ಒಂದು ರೂ.ಗಳು ನೀಡಿದರೆ 15 ಪೈಸೆ ನಮಗೆ ವಾಪಸ್ಸು ಬರುತ್ತದೆ. ಈ ಅನ್ಯಾಯ 16ನೇ ಹಣಕಾಸು ಆಯೋಗದಲ್ಲಿ ಆಗಬಾರದು. 14ನೇ ಹಣಕಾಸು ಆಯೋಗದಲ್ಲಿ ನಮ್ಮ ತೆರಿಗೆ ಪಾಲು 4.713%ಕ್ಕೆ ಮತ್ತು 15 ನೇ ಹಣಕಾಸು ಆಯೋಗದಲ್ಲಿ ತೆರಿಗೆ ಪಾಲು 3.647%ಕ್ಕೆ ಇಳಿಕೆ ಮಾಡಿದ್ದರಿಂದ ತೆರಿಗೆ ಹಂಚಿಕೆಯಲ್ಲಿ ನಮ್ಮ ಪಾಲನ್ನು ಒಟ್ಟಾರೆ 23% ರಷ್ಟು ಇಳಿಕೆ ಮಾಡಲಾಗಿದೆ. 5 ವರ್ಷಗಳಲ್ಲಿ ಒಟ್ಟು 68,275 ಕೋಟಿ ರೂ.ಗಳು ಕಡಿಮೆಯಾಗಿದೆ ಎಂದು ಮನವಿ ಮನವರಿಕೆ ಮಾಡಿಕೊಟ್ಟರು.

ಸೆಸ್, ಸರ್ಚಾರ್ಜ್ ನಲ್ಲಿ ಪಾಲು ಕೊಡದ ಕೇಂದ್ರ ಸರ್ಕಾರ: ಕೇಂದ್ರ ಸರ್ಕಾರ ಸೆಸ್ ಮತ್ತು ಸರ್ಚಾರ್ಜ್ ನಲ್ಲಿ ನಮಗೆ ಮಾತ್ರವಲ್ಲ ಯಾವ ರಾಜ್ಯಕ್ಕೂ ಪಾಲು ಕೊಡುವುದಿಲ್ಲ. ಕರ್ನಾಟಕದಿಂದ 2024-25ರಲ್ಲಿ ಒಟ್ಟು ರೂ. 5,41,709 ಕೋಟಿ ಸಂಗ್ರಹವಾಗಿದೆ. 8,084 ಕೋಟಿ ರೂ.ಗಳು ಕರ್ನಾಟಕ್ಕೆ ನಷ್ಟವಾಗಿದೆ. ಸೆಸ್ ಮತ್ತು ಸರ್ಚಾಜ್ ಶೇ.5ನ್ನು ಮೀರಬಾರದು, ಒಂದು ವೇಳೆ 5% ಮೀರಿದರೆ ರಾಜ್ಯಗಳ ತೆರಿಗೆ ಹಂಚಿಕೆಯ ಪಾಲಿನಲ್ಲಿ ಶೇ.50 ರಷ್ಟು ಹೆಚ್ಚಳ ಮಾಡಬೇಕು ಎಂದು ಮನವಿ ಮಾಡಲಾಗಿದೆ ಎಂದರು.

ಬೆಂಗಳೂರು ಅಭಿವೃದ್ಧಿಗೆ 1ಲಕ್ಷದ 15 ಸಾವಿರ ಕೋಟಿ ಅನುದಾನಕ್ಕೆ ಮನವಿ: 15ನೇ ಹಣಕಾಸಿನ ಆಯೋಗವು ರಾಜ್ಯ-ಕ್ಕೆ 5,495 ಕೋಟಿ ರೂ.ಗಳ ವಿಶೇಷ ಅನುದಾನವನ್ನು ಕರ್ನಾಟಕ, ತೆಲಂಗಾಣ ಮತ್ತು ಮಿಜೋರಾಂ ರಾಜ್ಯಗಳಿಗೆ ಒದಗಿಸಬೇಕೆಂದು ಶಿಫಾರಸ್ಸು ಮಾಡಿತ್ತು. ಆದರೆ ಕೇಂದ್ರ ಸರ್ಕಾರ ಈ ಅನುದಾನವನ್ನು ಒದಗಿಸಲು ನಿರಾಕರಿಸಿತು. ಇದಲ್ಲದೇ ಪೆರಿಫೆರಲ್ ರಿಂಗ್ ರಸ್ತೆಗೆ ?3,000 ಕೋಟಿ ಹಾಗೂ ಕೆರೆಗಳ ಅಭಿವೃದ್ಧಿಗೆ ?3,000 ಕೋಟಿ ನೀಡಬೇಕೆಂದು ಶಿಫಾರಸ್ಸು ಮಾಡಿತ್ತು. ಎರಡೂ ಸೇರಿ 11,495 ಕೋಟಿ ರೂ.ಗಳನ್ನು ಒದಗಿಸಬೇಕೆಂದು 15ನೇ ಹಣಕಾಸಿನ ಆಯೋಗವು ಶಿಫಾರಸ್ಸು ಮಾಡಿತ್ತು. ಈ ಹಣ ಬಂದಿಲ್ಲ. ಬೆಂಗಳೂರು ನಗರ ವೇಗವಾಗಿ ಅಭಿವೃದ್ಧಿಯಾಗುತ್ತಿದ್ದು, ನಮ್ಮ ಮನವಿಯಲ್ಲಿ ಕೋರಿರುವಂತೆ ಅನುದಾನವನ್ನು ಒದಗಿಸದೇ ಹೋದರೆ ಬೆಂಗಳೂರು ಅಭಿವೃದ್ಧಿಗೆ 1ಲಕ್ಷದ 15 ಸಾವಿರ ಕೋಟಿ ರೂ.ಗಳನ್ನು ಒದಗಿಸಬೇಕು ಎಂದು ಕೋರಿರುವುದಾಗಿ ತಿಳಿಸಿದರು.

ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಅನುದಾನಕ್ಕೆ ಒತ್ತಾಯ: ಕಲ್ಯಾಣ ಕರ್ನಾಟಕದಲ್ಲಿ ಏಳು ಜಿಲ್ಲೆಗಳನ್ನು ಒಳಗೊಂಡಿದ್ದು 5 ಜಿಲ್ಲೆಗಳ ವಾರ್ಷಿಕ ವರಮಾನವು ರಾಜಸ್ಥಾನ, ಬಿಹಾರ, ಉತ್ತರ ಪ್ರದೇಶ, ಒರಿಸ್ಸಾ ಮತ್ತು ಪಶ್ಚಿಮ ಬಂಗಾಳದ ಸರಿಸಮಾನವಿದೆ. ಮಲೆನಾಡು ಪ್ರದೇಶಗಳಲ್ಲಿ ನಮಗೆ ಪ್ರವಾಹ, ಭೂ ಕುಸಿತದಂತಹ ಸಮಸ್ಯೆಗಳು ತಲೆದೋರುತ್ತವೆ. ಅದ್ದರಿಂದ ವಿಶೇಷ ಅನುದಾನ ಒದಗಿಸಬೇಕು ಎಂದು ಕೋರಿದೇವೆ ಎಂದರು. ಕೇರಳ, ತಮಿಳುನಾಡಿಗೂ ನಮ್ಮಷ್ಟೇ ನಷ್ಟವಾಗಿದ್ದರೂ, ಅವರಿಗೆ ರಾಜಸ್ವ ಕೊರತೆ ಅನುದಾನವನ್ನು ನೀಡಲಾಗಿದೆ. ನಮಗೇಕೆ ಕೊಟ್ಟಿಲ್ಲ ಎಂದು ಪ್ರಶ್ನಿಸಲಾಗಿದೆ. ಜನಸಂಖ್ಯೆ ಆಧಾರದ ಮೇಲೆ ಅನುದಾನ ಹಂಚಿಕೆ ಮಾಡಬಾರದು ಎಂದು ನಾವು ಹೇಳುವುದಿಲ್ಲ. ಆದರೆ ತೆರಿಗೆ ಹಂಚಿಕೆ ವೈಜ್ಞಾನಿಕವಾಗಿ ಮಾಡಬೇಕು ಎಂದು ಕೋರಲಾಗಿದೆ. ಈ ಬಗ್ಗೆ ಇತರೆ ರಾಜ್ಯಗಳು ಧ್ವನಿ ಎತ್ತಿವೆ. ಸಭೆಯು ಒಂದೂ ಕಾಲ ಗಂಟೆಗಳ ಕಾಲ ಸೌಹಾರ್ದಯುತವಾಗಿ ನಡೆದಿದ್ದು, ಆಯೋಗದ ಅಧ್ಯಕ್ಷರು ನಮ್ಮ ಸಲಹೆಗಳನ್ನು ಸ್ವೀಕರಿಸಿದ್ದಾರೆ. ನಮ್ಮ ಕೋರಿಕೆಗಳನ್ನು ಈಡೇರಿಸುತ್ತಾರೆ ಎನ್ನುವ ಭರವಸೆ ಹೊಂದಿದ್ದೇವೆ ಎಂದು ಮುಖ್ಯಮಂತ್ರಿ ಹೇಳಿದರು.

## ಜೈನ ಬಸದಿಗಳ ಅರ್ಚಕರ ಮಾಸಿಕ ಗೌರವಧನಕ್ಕೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಶಿವಮೊಗ್ಗ ಜಿಲ್ಲೆಯಲ್ಲಿರುವ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025-26 ನೇ ಸಾಲಿನಲ್ಲಿ ಜೈನ ಬಸಿದಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೋಂದಾಯಿತ ಪ್ರಧಾನ ಅರ್ಚಕರು ಮತ್ತು ಸಹಾಯಕ ಅರ್ಚಕರುಗಳಿಗೆ ಮಾಸಿಕ ಗೌರವಧನ ನೀಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಆಸಕ್ತರು ನಿಗದಿತ ನಮೂನೆ ಅರ್ಜಿಯನ್ನು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕಚೇರಿ ಹಾಗೂ ತಾಲೂಕು ಮಾಹಿತಿ ಕೇಂದ್ರಗಳಿಂದ ಪಡೆದು, ಭರ್ತಿ ಮಾಡಿದ ಅರ್ಜಿಯೊಂದಿಗೆ ಬಸದಿ ನೋಂದಣಿ ಪ್ರತಿ, ಆಡಳಿತ ಮಂಡಳಿಯ ಪ್ರತಿ, ಅರ್ಚಕರುಗಳ ಭಾವಚಿತ್ರ, ಕಳೆದ ಮೂರು ವರ್ಷಗಳಲ್ಲಿ ವಾಸವಿರುವ ಬಗ್ಗೆ ದಾಖಲೆ, ಅರ್ಚಕರ ಬ್ಯಾಂಕ್ ಖಾತೆ ವಿವರ, ಅರ್ಚಕರುಗಳ ಆಧಾರ್ ಕಾರ್ಡ್ ಪ್ರತಿ, ಮಾಹೆವಾರು ಕರ್ತವ್ಯದ ಹಾಜರಾತಿ, ಸೇವಾ ದೃಢೀಕರಣ ಪತ್ರ, ಧಾರ್ಮಿಕ ವಿದ್ಯಾರ್ಹತೆ ಕುರಿತು ಅಗತ್ಯ ದಾಖಲೆ, 200/- ರೂ.ಗಳ ಛಾಪಾ ಕಾಗದದಲ್ಲಿ ಪ್ರಮಾಣ ಪತ್ರಗಳನ್ನು ಲಗತ್ತಿಸಿ ಜೂ. 16 ರಿಂದ 30ರೊಳಗಾಗಿ ಸಲ್ಲಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ 1 ನೆ ಮಹಡಿ, ಸತ್ಯ ಶ್ರೀ ಆರ್ಕೆಡ್, 5ನೇ ಪ್ಯಾರಲಾಲ್ ರಸ್ತೆ, ದುರ್ಗಿಗುಡಿ ದೂ.ಸಂ.08182-220206, ಅಲ್ಪಸಂಖ್ಯಾತರ ಇಲಾಖೆಯ ಮಾಹಿತಿ ಕೇಂದ್ರಗಳ ಸಂಪರ್ಕ ಸಂಖ್ಯೆಗಳು ಶಿವಮೊಗ್ಗ - 7676888388, ಭದ್ರಾವತಿ - 9538853680,

## ಹುಬ್ಬಳ್ಳಿ: ಮೃತ ಹುಸೇನಸಾಬ್ ಕಳಸ ಕುಟುಂಬಕ್ಕೆ 5 ಲಕ್ಷ ಪರಿಹಾರ ವಿತರಿಸಿದ ಸಂತೋಷ್ ಲಾಡ್

**ಹುಬ್ಬಳ್ಳಿ:** ಇತ್ತೀಚಿಗೆ ಸುರಿದ ಭಾರಿ ಮಳೆಯಿಂದ ನೀರಿನಲ್ಲಿ ಕೊಚ್ಚಿ ಹೋಗಿ ಮೃತಪಟ್ಟಿದ್ದ ಹುಸೇನಸಾಬ್ ಕಳಸ ಕುಟುಂಬದ ಸದಸ್ಯರಿಗೆ ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರು ಶನಿವಾರ 5 ಲಕ್ಷ ರೂ. ಪರಿಹಾರದ ಆದೇಶವನ್ನು ಹಸ್ತಾಂತರಿಸಿದರು.



ಹುಬ್ಬಳ್ಳಿ ಹೊರವಲಯದ ಮಾವನೂರು ರಸ್ತೆಯ ಬಳಿ ಬುಧವಾರ ರಾತ್ರಿ ಹುಸೇನಸಾಬ್ ಅವರು ಮಳೆನೀರಿನಲ್ಲಿ ಕೊಚ್ಚಿ ಹೋಗಿ ಮೃತಪಟ್ಟಿದ್ದರು.

ಇಂದು ಹುಸೇನಸಾಬ್ ಅವರ ಮನೆಗೆ ತೆರಳಿ, ಅವರ ಕುಟುಂಬಕ್ಕೆ ಸಾಂತ್ವನ ಹೇಳಿ, ಪರಿಹಾರದ ಆದೇಶದ ಪ್ರತಿ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಂತೋಷ್ ಲಾಡ್, ಜಿಲ್ಲೆಯಲ್ಲಿ ಭಾರಿ ಮಳೆಯಿಂದಾಗಿ ಇಲ್ಲಿಯವರೆಗೆ ಒಟ್ಟು ಇಬ್ಬರು ಸಾವನ್ನಪ್ಪಿದ್ದಾರೆ ಮತ್ತು ಬೆಳೆ ನಷ್ಟದ ಬಗ್ಗೆ ಸರ್ವೆ ಮಾಡಬೇಕಾಗಿದೆ ಎಂದು ತಿಳಿಸಿದರು. ಅಲ್ಲದೆ ಸರ್ವೆ ಮುಗಿದ ನಂತರ, ಅದನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಹೇಳಿದ್ದಾರೆ.ಜೂನ್ 12 ರಂದು, ಹುಬ್ಬಳ್ಳಿಯ ಹೊರವಲಯದ ಮಾವನೂರು ರಸ್ತೆಯ ಬಳಿಯ ತಗ್ಗು ಪ್ರದೇಶದಲ್ಲಿ ಬುಧವಾರ ರಾತ್ರಿ ಸುರಿದ ಭಾರೀ ಮಳೆ ಮತ್ತು ಬಲವಾದ ಗಾಳಿಯ ನಂತರ, ಹುಸೇನಸಾಬ್ ನೀರಿನಲ್ಲಿ ಕೊಚ್ಚಿಹೋಗಿ ಸಾವನ್ನಪ್ಪಿದ್ದಾರೆ.

ಇನ್ನು ಹೆಚ್ಚಿನ ಮಳೆಯಾದಗ ಬೆಣ್ಣೆಹಳ್ಳದಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗುತ್ತದೆ. ಪ್ರತಿ ಬಾರಿ ಕೂಡಾ ಸಾವಿರಾರು ಎಕರೆಯಲ್ಲಿ ಬೆಳದಿದ್ದ ಬೆಳೆ ಹಾಳಾಗಿ ಹೋಗುತ್ತದೆ. ಹೀಗಾಗಿ ಬೆಣ್ಣೆಹಳ್ಳದಲ್ಲಿ ಉಂಟಾಗುತ್ತಿರುವ ಪ್ರವಾಹಕ್ಕೆ ಶಾಶ್ವತ ಪರಿಹಾರ ಕಲ್ಪಿಸುವುದರ ಜೊತೆಗೆ, ಬೆಳೆಹಾನಿಯಾದ ರೈತರಿಗೆ ಪರಿಹಾರ ಕೊಡಿಸುವ ಕೆಲಸ ಕೂಡಾ ಆಗಬೇಕಿದೆ ಎಂದು ಸಚಿವರು ಹೇಳಿದ್ದಾರೆ.

ಘಟನೆಯ ಕುರಿತು ಎಎನ್‌ಐ ಜೊತೆ ಮಾತನಾಡಿದ ಹುಬ್ಬಳ್ಳಿ ತಾಲೂಕು ತಹಶೀಲ್ದಾರ್ ಕಲ್ಲನಗೌಡ ಪಾಟೀಲ್ , "ಆ ವ್ಯಕ್ತಿಯನ್ನು ಪತ್ತೆಹಚ್ಚಲು ಅಗ್ನಿಶಾಮಕ ದಳದವರು ಶೋಧ ಕಾರ್ಯಾಚರಣೆ ನಡೆಸುತ್ತಿದ್ದಾರೆ. ಕಳೆದ 10 ಗಂಟೆಗಳಿಂದ ಕಾರ್ಯಾಚರಣೆ ಮುಂದುವರೆದಿದೆ. ನಿನ್ನೆ ರಾತ್ರಿ ಸುಮಾರು 150 ಮಿ.ಮೀ ಮಳೆಯಾಗಿದೆ. ಇಂದು ಹುಬ್ಬಳ್ಳಿಯಲ್ಲಿ ಶಾಲೆಗಳನ್ನು ಬಂದ್ ಮಾಡಲಾಗಿದೆ. ಬುಧವಾರ ಭಾರೀ ಮಳೆಯ ನಂತರ ತನ್ನ ಜಮೀನಿಗೆ ತೆರಳಿದ್ದ ಕಾಣೆ-ಯಾದ ಹುಸೇನಸಾಬ್ ಅವರ ಚಪ್ಪಲಿಗಳು ಪತ್ತೆಯಾಗಿವೆ" ಎಂದು ಹೇಳಿದ್ದಾರೆ.

## ಹಾವೇರಿ: ಸಾರಿಗೆ ಬಸ್‌ಗೆ ಕಾರು ಡಿಕ್ಕಿ ಸ್ಥಳದಲ್ಲೇ ಇಬ್ಬರ ದುರ್ಮರಣ



**ಹಾವೇರಿ:** ಸಾರಿಗೆ ಬಸ್‌ಗೆ ಕಾರು ಡಿಕ್ಕಿ ಹೊಡೆದ ಪರಿಣಾಮ ಕಾರಿನಲ್ಲಿದ್ದ ಇಬ್ಬರು ಸಾವನ್ನಪ್ಪಿದ್ದು, ಓರ್ವ ಗಂಭೀರ ಗಾಯಗೊಂಡ ಘಟನೆ ಹಾವೇರಿ ಜಿಲ್ಲೆ ರಾಣೇಬೆನ್ನೂರು ತಾಲೂಕಿನ ಕುಮಾರಪಟ್ಟಣಂ ಗ್ರಾಮದ ಬೈಪಾಸ್ ಬಳಿ ನಡೆದಿದೆ.

ಘಟನೆಯಲ್ಲಿ ದಾವಣಗೆರೆ ಮೂಲದ ಪ್ರವೀಣ (36) ಸಾವನ್ನಪ್ಪಿದ್ದು, ಇನ್ನೊಬ್ಬರ ಗುರುತು ಪತ್ತೆಯಾಗಿಲ್ಲ. ಅಪಘಾತದಲ್ಲಿ ಗಂಭೀರ ಗಾಯಗೊಂಡ ಕೊಟ್ರೇಶ ಅಬಲೂರನ್ನು ದಾವಣಗೆರೆ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಸಾರಿಗೆ ಬಸ್ ಅಥಣಿಯಿಂದ ದಾವಣಗೆರೆಗೆ ಹೊರಟ್ಟಿದ್ದು, ಬೈಪಾಸ್‌ನಲ್ಲಿ ಮುಖಾಮುಖಿ ಡಿಕ್ಕಿಯಾಗಿ ದುರ್ಘಟನೆ ಸಂಭವಿಸಿದೆ. ಈ ಸಂಬಂಧ ಕುಮಾರಪಟ್ಟಣಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**